VOLUME: 16 | 28 MAY 2026 | ಗುರುವಾರ | RS: 2 | PAGE: 06 ISSUE: 107 ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

BHARATHA SARATHI
KANNADA DAILY NEWS PAPER
CALL 9740160669
# ಭಾರತ ಸಾರಥಿ
RNI KARKAN2011/44806
ಸದಾ ನಿಮ್ಮೊಂದಿಗೆ ಕನ್ನಡ ದಿನಪತ್ರಿಕೆ
prabhavaa.com



ಖ್ಯಾತ ನಟಿ ಮೇಘ ಶೆಟ್ಟಿ ಅವರು ಸಾಮಾಜಿಕ ಜಾಲತಾಣಗಳಲ್ಲಿ ಪೋಸ್ಟ್ ಮಾಡಿರುವ ಹೊಸ ಚಿತ್ರಗಳು ವೈರಲ್ ಆಗಿದ್ದು, ಅಭಿಮಾನಿಗಳಿಂದ ಬಹಳ ಮೆಚ್ಚುಗೆ ವ್ಯಕ್ತವಾಗಿದೆ. ಚಿತ್ರೀಕರಣದ ನಿಮಿತ್ತ ವಿದೇಶಗಳಲ್ಲಿ ತೆಗೆದ ಹಲವು ಚಿತ್ರಗಳನ್ನೂ ಸಹ ಇವರು ಅಪ್‌ಲೋಡ್ ಮಾಡಿದ್ದಾರೆ. ಅವೆಲ್ಲವೂ ಈಗ ವೈರಲ್ ಆಗಿವೆ.



ಸಂಪಾದಕ
ಗಂಡಸಿ ಸದಾನಂದಸ್ವಾಮಿ



# ಎಲ್ಲವನ್ನೂ ಹೇಳುವೆ



ಬೆಂಗಳೂರು: ದೆಹಲಿಯಲ್ಲಿ ಕಾಂಗ್ರೆಸ್ ವರಿಷ್ಠ ನಾಯಕರೊಂದಿಗೆ ನಡೆದ ಮಹತ್ವದ ಸಭೆ ಹಾಗೂ ಇತ್ತೀಚಿನ ರಾಜಕೀಯ ಬೆಳವಣಿಗೆಗಳ ಕುರಿತು ನಾಳೆ ಪ್ರತಿಕ್ರಿಯಿಸುವುದಾಗಿ ಹೇಳುವ ಮೂಲಕ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮತ್ತೊಮ್ಮೆ ಗೌಪ್ಯತೆ ಕಾಯ್ದು ಕೊಂಡರು. ದೇಶದ ಮೊದಲ ಪ್ರಧಾನಿ ಜವಾಹರ್‌ಲಾಲ್ ನೆಹರೂ ಅವರ 62ನೇ ಪುಣ್ಯಸ್ಮರಣೆ ಅಂಗವಾಗಿ ವಿಧಾನಸೌಧ ಆವರಣದಲ್ಲಿ ನೆಹರೂ ಪ್ರತಿಮೆಗೆ ಮಾಲಾರ್ಪಣೆ ಮಾಡಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ದೆಹಲಿಯಲ್ಲಿ ನಡೆದ ಮ್ಯಾರಥಾನ್ ಸಭೆಯ ಬಗ್ಗೆ ಕೇಳಲಾದ ಪ್ರಶ್ನೆಗೆ "ನಾಳೆ ಮಾತನಾಡುತ್ತೇನೆ" ಎಂದು ಸಂಕ್ಷಿಪ್ತವಾಗಿ ಉತ್ತರಿಸಿ ತೆರಳಿದರು.

ದೆಹಲಿ ಭೇಟಿಯ ಬಳಿಕ ರಾಜ್ಯ ರಾಜಕೀಯದಲ್ಲಿ ಮಹತ್ವದ ಬೆಳವಣಿಗೆಗಳು ನಡೆಯುತ್ತಿವೆ ಎಂಬ ಪ್ರಶ್ನೆಗೂ ಅವರು ಯಾವುದೇ ಪ್ರತಿಕ್ರಿಯೆ ನೀಡಲಿಲ್ಲ.

ಇದಕ್ಕೂ ಮುನ್ನ ನೆಹರೂ ಅವರ ಸೇವೆಗಳನ್ನು ಸ್ಮರಿಸಿದ ಮುಖ್ಯಮಂತ್ರಿ, "ಸ್ವಾತಂತ್ರ್ಯ ಭಾರತದ ಮೊದಲ ಪ್ರಧಾನಿಯಾಗಿ ಜವಾಹರ್‌ಲಾಲ್ ನೆಹರೂ ಅವರು ದೇಶಕ್ಕೆ ಅಪಾರ ಕೊಡುಗೆ ನೀಡಿದ್ದಾರೆ. 17 ವರ್ಷಗಳ ಕಾಲ ಪ್ರಧಾನಿಯಾಗಿ ಸೇವೆ ಸಲ್ಲಿಸಿದ ಅವರು 1964ರ ಮೇ ತಿಂಗಳಲ್ಲಿ ನಿಧನರಾದರು. ಅವರ ಪುಣ್ಯಸ್ಮರಣೆಯನ್ನು ದೇಶಾದ್ಯಂತ ಆಚರಿಸಲಾಗುತ್ತಿದೆ. ಕಾಂಗ್ರೆಸ್ ಪಕ್ಷ ವಿಶೇಷವಾಗಿ ನೆಹರೂ ಅವರನ್ನು ಸ್ಮರಿಸುತ್ತಿದ್ದು, ರಾಜ್ಯ ಸರ್ಕಾರವೂ ಗೌರವ ಸಲ್ಲಿಸುತ್ತಿದೆ" ಎಂದು ಹೇಳಿದರು.


ಆಧುನಿಕ ಭಾರತದ ನಿರ್ಮಾಣದಲ್ಲಿ ನೆಹರೂ ಅವರ ಪಾತ್ರ ಅತ್ಯಂತ ಮಹತ್ವದ್ದು ಎಂದು ಸಿದ್ದರಾಮಯ್ಯ ಹೇಳಿದರು. "ಸೋಶಿಯಲಿಸ್ಟ್ ಹಾಗೂ ಕ್ಯಾಪಿಟಲಿಸ್ಟ್ ಆರ್ಥಿಕತೆಯ ನಡುವಿನ ಮಿಶ್ರ ಆರ್ಥಿಕ ವ್ಯವಸ್ಥೆಗೆ ಅವರು ಒತ್ತು ನೀಡಿದರು. ದೊಡ್ಡ ಕೈಗಾರಿಕೆಗಳು, ಆಣೆಕಟ್ಟುಗಳು ಹಾಗೂ ಶಿಕ್ಷಣ ಮತ್ತು ಸಹಕಾರ ಕ್ಷೇತ್ರದಲ್ಲಿ ಅಮೂಲಾಗ್ರ ಬದಲಾವಣೆಗಳನ್ನು ತಂದರು" ಎಂದು ನೆನಪಿಸಿದರು.

"ದೇಶದಲ್ಲಿ ವೈಜ್ಞಾನಿಕ ಹಾಗೂ ವೈಚಾರಿಕ ಮನೋಭಾವ ಬೆಳೆಸಲು ನೆಹರೂ ಅವರು ಕಾರಣಕರ್ತರು. ಪಂಚವಾರ್ಷಿಕ ಯೋಜನೆಗಳ ಮೂಲಕ ದೇಶದ ಅಭಿವೃದ್ಧಿಗೆ ದಿಕ್ಕು ತೋರಿದರು. ಅವರು ಹಾಕಿಕೊಟ್ಟ ಮಾರ್ಗದಲ್ಲೇ ನಾವು ಸಾಗುತ್ತಿದ್ದು, ಅವರ ಆದರ್ಶಗಳು ನಮಗೆ ಪ್ರೇರಣೆಯಾಗಿವೆ" ಎಂದು ಮುಖ್ಯಮಂತ್ರಿ ಹೇಳಿದರು.

ಆಧುನಿಕ ಭಾರತದ ನಿರ್ಮಾಣದಲ್ಲಿ ನೆಹರೂ ಅವರ ಪಾತ್ರ ಅತ್ಯಂತ ಮಹತ್ವದ್ದು ಎಂದು ಸಿದ್ದರಾಮಯ್ಯ ಹೇಳಿದರು. "ಸೋಶಿಯಲಿಸ್ಟ್ ಹಾಗೂ ಕ್ಯಾಪಿಟಲಿಸ್ಟ್ ಆರ್ಥಿಕತೆಯ ನಡುವಿನ ಮಿಶ್ರ ಆರ್ಥಿಕ ವ್ಯವಸ್ಥೆಗೆ ಅವರು ಒತ್ತು ನೀಡಿದರು. ದೊಡ್ಡ ಕೈಗಾರಿಕೆಗಳು, ಆಣೆಕಟ್ಟುಗಳು ಹಾಗೂ ಶಿಕ್ಷಣ ಮತ್ತು ಸಹಕಾರ ಕ್ಷೇತ್ರದಲ್ಲಿ ಅಮೂಲಾಗ್ರ ಬದಲಾವಣೆಗಳನ್ನು ತಂದರು" ಎಂದು ನೆನಪಿಸಿದರು.

ಕೊನೆಯಲ್ಲಿ, ನೆಹರೂ ಅವರ ಆತ್ಮಕ್ಕೆ ಚಿರಶಾಂತಿ ಸಿಗಲಿ ಎಂದು ಪ್ರಾರ್ಥಿಸಿದರು.

# ಎಸ್‌ಐಆರ್‌ಗೆ ಸುಪ್ರೀಂ ಒಪ್ಪಿಗೆ



ನವದೆಹಲಿ: ಚುನಾವಣಾ ಆಯೋಗ ಕೈಗೊಂಡಿರುವ ವಿಶೇಷ ತೀವ್ರ ಮತದಾರರ ಪಟ್ಟಿ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆ ವಿರುದ್ಧ ದೇಶದಾದ್ಯಂತ ಎದ್ದಿದ್ದ ರಾಜಕೀಯ ಹಾಗೂ ಕಾನೂನು ಹೋರಾಟಕ್ಕೆ ಸುಪ್ರೀಂ ಕೋರ್ಟ್ ಮಹತ್ವದ ತೆರೆ ಎಳೆದಿದೆ. ಚುನಾವಣಾ ಆಯೋಗದ ಅಧಿಕಾರವನ್ನು ಪ್ರಶ್ನಿಸಿ ಸಲ್ಲಿಸಲಾಗಿದ್ದ ಎಲ್ಲಾ ಅರ್ಜಿಗಳನ್ನು ತಳ್ಳಿಹಾಕಿದ ನ್ಯಾಯಪೀಠ, ಈ ಎಸ್‌ಐಆರ್ ಕ್ರಮವು ಕಾನೂನುಬದ್ಧವಾಗಿದ್ದು, ಸ್ವಚ್ಛ ಮತ್ತು ನ್ಯಾಯಸಮ್ಮತ ಚುನಾವಣೆಗೆ ಸಹಕಾರಿಯಾಗುತ್ತದೆ ಎಂದು ಸ್ಪಷ್ಟಪಡಿಸಿದೆ.

ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್ ನೇತೃತ್ವದ ಮೂವರು ನ್ಯಾಯಮೂರ್ತಿಗಳ ಪೀಠ, ಚುನಾವಣಾ ಆಯೋಗಕ್ಕೆ ಇಂತಹ ಎಸ್‌ಐಆರ್ ಪ್ರಕ್ರಿಯೆ ನಡೆಸುವ ಸಂಪೂರ್ಣ ಅಧಿಕಾರವಿದೆ ಎಂದು ತಿಳಿಸಿದೆ. ಚುನಾವಣಾ ಆಯೋಗ ತನ್ನ ಅಧಿಕಾರ ವ್ಯಾಪ್ತಿ ಮೀರಿಲ್ಲ ಮತ್ತು ಈ ಕ್ರಮವು ಸಂವಿಧಾನ ಅಥವಾ ಜನಪ್ರತಿನಿಧಿತ್ವ ಕಾಯ್ದೆ 1950ರ ಯಾವುದೇ ವಿಧಿಯನ್ನು ಉಲ್ಲಂಘಿಸಿಲ್ಲ ಎಂದು ಕೋರ್ಟ್ ಹೇಳಿದೆ.

ತೀರ್ಪಿನಲ್ಲಿ, "ಮತದಾರರ ಪಟ್ಟಿಯ ಶುದ್ಧತೆ ಮತ್ತು ಸಮಗ್ರತೆ ಕಾಪಾಡುವುದು, ನಕಲಿ ಅಥವಾ ಅಸತ್ಯ ದಾಖಲೆಗಳನ್ನು ತೆಗೆದುಹಾಕುವುದು ಹಾಗೂ ನಿಜವಾದ ಮತದಾರರಿಗೆ ನ್ಯಾಯ ಒದಗಿಸುವುದು ಈ ಕ್ರಮದ ಮುಖ್ಯ ಉದ್ದೇಶ. ಆಕ್ಷೇಪಣೆ ಸಲ್ಲಿಸಲು ಅವಕಾಶ, ಹಂತ ಹಂತವಾಗಿ ಪರಿಶೀಲನೆ ಹಾಗೂ ಪಾರದರ್ಶಕ ವಿಧಾನಗಳು ಈ ಪ್ರಕ್ರಿಯೆಯನ್ನು ನ್ಯಾಯಸಮ್ಮತವಾಗಿಸುತ್ತವೆ" ಎಂದು ನ್ಯಾಯಪೀಠ ಉಲ್ಲೇಖಿಸಿದೆ.

ಬಿಹಾರ ಸೇರಿದಂತೆ ಹಲವು ರಾಜ್ಯಗಳಲ್ಲಿ ನಡೆಯುತ್ತಿರುವ ಎಸ್‌ಐಆರ್ ಪ್ರಕ್ರಿಯೆಯ ಸಂವಿಧಾನಬದ್ಧತೆಯನ್ನು ಪ್ರಶ್ನಿಸಿ ಸಲ್ಲಿಸಲಾದ ಅರ್ಜಿಗಳನ್ನು ಕೋರ್ಟ್ ವಿಚಾರಣೆ ನಡೆಸಿತ್ತು. ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್ ಅವರೊಂದಿಗೆ ನ್ಯಾಯಮೂರ್ತಿಗಳಾದ ಜಾಯ್‌ಮಲ್ಯ ಬಾಗ್ಚಿ ಮತ್ತು ವಿ.ಎಂ. ಪಂಚೋಲಿ ಒಳಗೊಂಡ ಪೀಠ ಜನವರಿ 29ರಂದು ವಿಚಾರಣೆ ಪೂರ್ಣಗೊಳಿಸಿ ತೀರ್ಪನ್ನು ಕಾಯ್ದಿರಿಸಿತ್ತು.

ಈ ಪ್ರಕರಣದಲ್ಲಿ ಸಂವಿಧಾನದ ಕಲಂ 326, ಜನಪ್ರತಿನಿಧಿತ್ವ ಕಾಯ್ದೆ 1950 ಹಾಗೂ ಮತದಾರರ ನೋಂದಣಿ ನಿಯಮಾವಳಿ 1960ರ ಅಡಿಯಲ್ಲಿ ಚುನಾವಣಾ ಆಯೋಗದ ಅಧಿಕಾರವನ್ನು ಕೋರ್ಟ್ ಪರಿಶೀಲಿಸಿತು.

ಈ ಅರ್ಜಿಗಳನ್ನು ಅಸೋಸಿಯೇಷನ್ ಫಾರ್ ಡೆಮಾಕ್ರಟಿಕ್ ರಿಫಾರ್ಮ್ಸ್, ಪೀಪಲ್ಸ್ ಯೂನಿಯನ್ ಫಾರ್ ಸಿವಿಲ್ ಲಿಬರ್ಟೀಸ್ ಸೇರಿದಂತೆ ಹಲವು ಸಂಘಟನೆಗಳು ಹಾಗೂ ರಾಜಕೀಯ ಮುಖಂಡರಾದ ಯೋಗೇಂದ್ರ ಯಾದವ್, ಮಹುವಾ ಮೊಯಿತ್ರಾ, ಮನೋಜ್ ಝಾ, ಕೆ.ಸಿ. ವೇಣುಗೋಪಾಲ್ ಮತ್ತು ಸುಪ್ರಿಯಾ ಸುಳೆ ಸಲ್ಲಿಸಿದ್ದರು.

ಅರ್ಜಿದಾರರು 2025ರ ಜೂನ್ 24ರಂದು ಹೊರಡಿಸಿದ ಎಸ್‌ಐಆರ್ ಆದೇಶವನ್ನು ರದ್ದುಗೊಳಿಸಬೇಕು ಎಂದು ಮನವಿ ಮಾಡಿದ್ದು, ಇದು ಸಂವಿಧಾನದ ಕಲಂ 14, 19, 21, 325 ಮತ್ತು 326ರ ಉಲ್ಲಂಘನೆ ಎಂದು ವಾದಿಸಿದ್ದರು. ಆದರೆ ಚುನಾವಣಾ ಆಯೋಗ ತನ್ನ ಕ್ರಮವನ್ನು ಸಮರ್ಥಿಸಿಕೊಂಡು, ಮತದಾರರ ಪಟ್ಟಿಯ ಪಾರದರ್ಶಕತೆ ಮತ್ತು ನಿಖರತೆ ಕಾಪಾಡಲು ಈ ಪ್ರಕ್ರಿಯೆ ಅಗತ್ಯವಾಗಿದೆ ಎಂದು ಕೋರ್ಟ್‌ಗೆ ತಿಳಿಸಿತ್ತು.

ಇದಕ್ಕೂ ಮೊದಲು ಜುಲೈ 28ರಂದು ಸುಪ್ರೀಂ ಕೋರ್ಟ್, ಬಿಹಾರದಲ್ಲಿ ಎಸ್‌ಐಆರ್ ಪ್ರಕ್ರಿಯೆಯ ನಂತರ ಆಗಸ್ಟ್ 1ರಂದು ಕರಡು ಮತದಾರರ ಪಟ್ಟಿ ಪ್ರಕಟಿಸುವುದನ್ನು ತಡೆಯಲು ನಿರಾಕರಿಸಿತ್ತು.

# ಸಿಎಂ ಸ್ಥಾನಕ್ಕೆ ಇಂದು ಸಿದ್ದರಾಮಯ್ಯ ರಾಜೀನಾಮೆ



ಬೆಂಗಳೂರು: ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ರಾಜೀನಾಮೆ ನೀಡಲಿದ್ದಾರೆ ಎಂಬ ರಾಜಕೀಯ ವದಂತಿಗಳ ನಡುವೆಯೇ ರಾಜ್ಯ ಕಾಂಗ್ರೆಸ್‌ನಲ್ಲಿ ನಾಯಕತ್ವ ಬದಲಾವಣೆ ಕುರಿತ ಚಟುವಟಿಕೆಗಳು ತೀವ್ರಗೊಂಡಿವೆ. ಮುಂದಿನ ಮುಖ್ಯಮಂತ್ರಿ ಆಯ್ಕೆ, ಕೆಪಿಸಿಸಿ ಅಧ್ಯಕ್ಷ ಸ್ಥಾನ ಸೇರಿದಂತೆ ಹಲವು ಮಹತ್ವದ ರಾಜಕೀಯ ಬೆಳವಣಿಗೆಗಳ ಬಗ್ಗೆ ಪಕ್ಷದೊಳಗೆ ಚರ್ಚೆಗಳು ಜೋರಾಗಿವೆ. ಜೊತೆಗೆ ಮುಂದಿನ ಸಿಎಂ ಯಾರೆಂಬುದೂ ಸಹ ಕುತೂಹಲ ಕೆರಳಿಸಿದೆ.

ರಾಜಕೀಯ ವಲಯದಲ್ಲಿ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಮುಂದಿನ ಮುಖ್ಯಮಂತ್ರಿ ಆಗುವ ಸಾಧ್ಯತೆಗಳ ಬಗ್ಗೆ ವ್ಯಾಪಕ ಚರ್ಚೆ ನಡೆಯುತ್ತಿದೆಯಾದರೂ, ಈ ಕುರಿತು ಕಾಂಗ್ರೆಸ್ ಹೈಕಮಾಂಡ್ ಇನ್ನೂ ಯಾವುದೇ ಅಧಿಕೃತ ಘೋಷಣೆ ಮಾಡಿಲ್ಲ.

ದೆಹಲಿಯಲ್ಲಿ ಕಾಂಗ್ರೆಸ್ ವರಿಷ್ಠರೊಂದಿಗೆ ನಡೆದ ಸಭೆಯ ಬಳಿಕ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಬೆಂಗಳೂರಿಗೆ ಮರಳಿದ್ದು, ಆಪ್ತ ಸಚಿವರು ಮತ್ತು ಶಾಸಕರೊಂದಿಗೆ ಸಮಾಲೋಚನೆ ನಡೆಸುತ್ತಿದ್ದಾರೆ ಎನ್ನಲಾಗಿದೆ. ಇಂದು ನೆಹರೂ ಪುಣ್ಯಸ್ಮರಣೆ ಕಾರ್ಯಕ್ರಮದಲ್ಲಿ ಭಾಗವಹಿಸಿದ ನಂತರವೂ ಅವರು ರಾಜಕೀಯ ಬೆಳವಣಿಗೆಗಳ ಕುರಿತು ಯಾವುದೇ ಸ್ಪಷ್ಟನೆ ನೀಡದೆ ಮನೆಗೆ ತೆರಳಿದರು.

ಮೂಲಗಳ ಪ್ರಕಾರ, ದೆಹಲಿಯಲ್ಲಿ ನಡೆದ ಮ್ಯಾರಥಾನ್ ಸಭೆಯಲ್ಲಿ ರಾಜ್ಯ ನಾಯಕತ್ವದ ಕುರಿತು ಚರ್ಚೆಗಳು ನಡೆದಿವೆ ಎನ್ನಲಾಗುತ್ತಿದ್ದರೂ, ಇದಕ್ಕೆ ಸಂಬಂಧಿಸಿದಂತೆ ಯಾವುದೇ ಅಧಿಕೃತ ಮಾಹಿತಿ ಹೊರಬಂದಿಲ್ಲ.

ಸಿದ್ದರಾಮಯ್ಯ ಅವರ ಆಪ್ತರು ಶಾಸಕಾಂಗ ಸಭೆಯಲ್ಲಿ ಶಾಸಕರ ಅಭಿಪ್ರಾಯ ಆಧರಿಸಿ ನಾಯಕತ್ವ ನಿರ್ಧಾರವಾಗಬೇಕು ಎಂದು ಅಭಿಪ್ರಾಯ ವ್ಯಕ್ತಪಡಿಸುತ್ತಿದ್ದಾರೆ ಎಂಬ ಮಾತುಗಳು ಕೇಳಿಬರುತ್ತಿವೆ.

ಇನ್ನೊಂದೆಡೆ, ಡಿ.ಕೆ. ಶಿವಕುಮಾರ್ ಅವರು ದೆಹಲಿಯಲ್ಲೇ ಉಳಿದುಕೊಂಡಿದ್ದು, ವರಿಷ್ಠರೊಂದಿಗೆ ಮತ್ತಷ್ಟು ಚರ್ಚೆ ನಡೆಸುತ್ತಿದ್ದಾರೆ ಎಂಬ ಮಾಹಿತಿ ರಾಜಕೀಯ ವಲಯದಲ್ಲಿ ಹರಿದಾಡುತ್ತಿದೆ. ಪರಿಶಿಷ್ಟ ಸಮುದಾಯದ ನಾಯಕರಿಗೂ ಮುಖ್ಯಮಂತ್ರಿ ಸ್ಥಾನ ನೀಡಬೇಕು ಎಂಬ ಅಭಿಪ್ರಾಯಗಳೂ ಕೆಲ ವಲಯಗಳಲ್ಲಿ ಕೇಳಿಬರುತ್ತಿವೆ. ನಾಳೆ ಮುಖ್ಯಮಂತ್ರಿ ನಿವಾಸ 'ಕಾವೇರಿ'ಯಲ್ಲಿ ಸಚಿವರ ಉಪಾಹಾರ ಕೂಟ ಆಯೋಜಿಸಲಾಗಿದ್ದು, ಎಲ್ಲ ಸಚಿವರಿಗೆ ಆಹ್ವಾನ ರವಾನೆಯಾಗಿದೆ. ಜೊತೆಗೆ ಕಾಂಗ್ರೆಸ್ ಶಾಸಕಾಂಗ ಸಭೆಯೂ ನಡೆಯುವ ಸಾಧ್ಯತೆ ಇದೆ ಎಂದು ಮೂಲಗಳು ತಿಳಿಸಿವೆ. ಇಂದು ಸಂಜೆ ಕಾಂಗ್ರೆಸ್ ರಾಜ್ಯ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲ ಬೆಂಗಳೂರಿಗೆ ಆಗಮಿಸಲಿದ್ದು, ಸಚಿವರು ಮತ್ತು ಶಾಸಕರೊಂದಿಗೆ ಚರ್ಚೆ ನಡೆಸಲಿದ್ದಾರೆ.

ಶಾಸಕಾಂಗ ಸಭೆಯಲ್ಲಿ ಹೈಕಮಾಂಡ್ ತೀರ್ಮಾನಕ್ಕೆ ಬದ್ಧರಾಗಿರುವ ಕುರಿತು ಏಕಸಾಲಿನ ನಿರ್ಣಯ ಕೈಗೊಳ್ಳುವ ಸಾಧ್ಯತೆಯೂ ಇದೆ ಎನ್ನಲಾಗಿದೆ. ಈ ನಡುವೆ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ.ಬಿ. ಪಾಟೀಲ್ ಅವರು, "ನಾಯಕತ್ವ ಬದಲಾವಣೆ ಎಂಬುದು ಕೇವಲ ವದಂತಿ. ದೆಹಲಿಯಲ್ಲಿ ನಡೆದ ಸಭೆಯಲ್ಲಿ ರಾಜ್ಯಸಭೆ ಮತ್ತು ವಿಧಾನಪರಿಷತ್ ಚುನಾವಣೆಯ ಅಭ್ಯರ್ಥಿಗಳ ಆಯ್ಕೆ ಕುರಿತಷ್ಟೇ ಚರ್ಚೆಯಾಗಿದೆ" ಎಂದು ಸ್ಪಷ್ಟಪಡಿಸಿದ್ದಾರೆ. ಕಾಂಗ್ರೆಸ್ ಪಕ್ಷದೊಳಗಿನ ಈ ಬೆಳವಣಿಗೆಗಳು ರಾಜ್ಯ ರಾಜಕೀಯದಲ್ಲಿ ತೀವ್ರ ಕುತೂಹಲ ಮೂಡಿಸಿದ್ದು, ಮುಂದಿನ ಕೆಲ ದಿನಗಳಲ್ಲಿ ಹೈಕಮಾಂಡ್ ಅಧಿಕೃತವಾಗಿ ಯಾವ ನಿರ್ಧಾರ ಪ್ರಕಟಿಸುತ್ತದೆ ಎಂಬುದರತ್ತ ಎಲ್ಲರ ಗಮನ ನೆಟ್ಟಿದೆ.



ಆಧುನಿಕ ಭಾರತದ ನಿರ್ಮಾಣದಲ್ಲಿ ನೆಹರೂ ಅವರ ಪಾತ್ರ ದೊಡ್ಡದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಹೇಳಿದರು. ಅವರು ವಿಧಾನಸೌಧದ ಪೂರ್ವ ದಿಕ್ಕಿನಲ್ಲಿರುವ ಮಾಜಿ ಪ್ರಧಾನಮಂತ್ರಿ ಜವಾಹರಲಾಲ್ ನೆಹರು ಅವರ ಪುಣ್ಯ ಸ್ಮರಣೆ ಅಂಗವಾಗಿ ಅವರ ಪ್ರತಿಮೆಗೆ ಮಾಲಾರ್ಪಣೆ ಮಾಡಿ, ಭಾವಚಿತ್ರಕ್ಕೆ ಪುಷ್ಪರ್ಚನೆ ಮಾಡಿ ಮಾತನಾಡಿದರು.

# ಬೆಲೆ ಏರಿಕೆ ಖಂಡಿಸಿ ವಿನೂತನ ಪ್ರತಿಭಟನೆ

ಬೆಂಗಳೂರು: ಪೆಟ್ರೋಲ್, ಡೀಸೆಲ್ ಹಾಗೂ ಅಡುಗೆ ಅನಿಲದ ಬೆಲೆ ಏರಿಕೆಯನ್ನು ಖಂಡಿಸಿ ಇಂಡಿಯನ್ ವೆಹಿಕಲ್ಸ್ ಡ್ರೈವರ್ ಟ್ರೇಡ್ ಯೂನಿಯನ್ ಹಾಗೂ ಸ್ನೇಹಜೀವಿ ಚಾಲಕರ ಟ್ರೇಡ್ ಯೂನಿಯನ್ ವತಿಯಿಂದ ನಗರದ ಫ್ರೀಡಂ ಪಾರ್ಕ್‌ನಲ್ಲಿ ಮೆಲೋಡಿ ಚಾಕಲೇಟ್ ಹಿಡಿದು ವಿನೂತನ ಪ್ರತಿಭಟನೆ ನಡೆಸಲಾಯಿತು.



ಮಧ್ಯಪ್ರಾಚ್ಯದ ಯುದ್ಧದ ಪರಿಣಾಮವಾಗಿ ಕೇಂದ್ರ ಸರ್ಕಾರ ಪೆಟ್ರೋಲ್, ಡೀಸೆಲ್ ಮತ್ತು ಅಡುಗೆ ಅನಿಲದ ದರವನ್ನು ನಿರಂತರವಾಗಿ ಏರಿಸುತ್ತಿರುವುದರಿಂದ ರಾಜ್ಯದ ಆಟೋ ಹಾಗೂ ಕ್ಯಾಬ್ ಚಾಲಕರು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದಾರೆ ಎಂದು ಪ್ರತಿಭಟನಾಕಾರರು ಆರೋಪಿಸಿದರು. ಇಂಧನ ದರ ಏರಿಕೆಯಿಂದ ಚಾಲಕರ ಜೀವನ ನಿರ್ವಹಣೆ ಕಷ್ಟಕರವಾಗಿದ್ದು, ಸಾರ್ವಜನಿಕ ಸಾರಿಗೆ ಸೇವೆ ನೀಡುತ್ತಿರುವ ಲಕ್ಷಾಂತರ ಆಟೋ ಮತ್ತು ಕ್ಯಾಬ್ ಚಾಲಕರು ಆರ್ಥಿಕ ಒತ್ತಡಕ್ಕೆ ಒಳಗಾಗಿದ್ದಾರೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ವಾಣಿಜ್ಯ ವಾಹನ ಚಾಲಕರು ವಿದ್ಯುತ್ ಚಾಲಿತ ವಾಹನಗಳನ್ನು ಬಳಸುವಂತೆ ಪ್ರೋತ್ಸಾಹಿಸಲಾಗುತ್ತಿದೆಯಾದರೂ, ಅದರ ಅನುಷ್ಠಾನಕ್ಕೆ ಅಗತ್ಯ ಮೂಲಸೌಕರ್ಯ ಮತ್ತು ಆರ್ಥಿಕ ನೆರವು ದೊರೆಯುತ್ತಿಲ್ಲ ಎಂದು ಅವರು ತಿಳಿಸಿದರು. ಅಲ್ಲದೆ, ಅಗ್ರಿಗೇಟರ್ ಸಂಸ್ಥೆಗಳು ತಮ್ಮ ಅನುಕೂಲಕ್ಕೆ ತಕ್ಕಂತೆ ದರ ನಿಗದಿ ಮಾಡುತ್ತಿರುವುದರಿಂದ ಸಾರ್ವಜನಿಕರಲ್ಲೂ ಗೊಂದಲ ಉಂಟಾಗುತ್ತಿದೆ ಎಂದು ದೂರಿದರು.

ಸರ್ಕಾರ ಈಗಾಗಲೇ ಘೋಷಿಸಿರುವ "ಒಂದು ನಗರ ಒಂದೇ ದರ" ನೀತಿಯನ್ನು ಶೀಘ್ರ ಜಾರಿಗೆ ತರಬೇಕು ಎಂದು ಪ್ರತಿಭಟನಾಕಾರರು ಒತ್ತಾಯಿಸಿದರು. ಇಂಧನ ದರ ಏರಿಕೆಯಿಂದ ದಿನಸಿ ವಸ್ತುಗಳ ಬೆಲೆಯೂ ಏರಿಕೆಯಾಗಿದ್ದು, ಚಾಲಕರ ಕುಟುಂಬ ನಿರ್ವಹಣೆ ಸಂಕಷ್ಟಕರವಾಗಿದೆ. ಆದ್ದರಿಂದ ಪೆಟ್ರೋಲ್, ಡೀಸೆಲ್ ಹಾಗೂ ಅಡುಗೆ ಅನಿಲದ ದರ ಇಳಿಕೆಯಾಗುವವರೆಗೆ ಪ್ರತಿ ಚಾಲಕರ ಕುಟುಂಬಕ್ಕೆ ತಿಂಗಳಿಗೆ ರೂ.15,000 ಧನಸಹಾಯ ನೀಡಬೇಕು ಎಂದು ಸರ್ಕಾರವನ್ನು ಆಗ್ರಹಿಸಿದರು.

# ಜಾತಿ ಗಣತಿ ವರದಿ ಸ್ವೀಕರಿಸಿದ ಸಿದ್ದು

ಬೆಂಗಳೂರು: ರಾಜ್ಯ ರಾಜಕೀಯದಲ್ಲಿ ಮತ್ತೊಂದು ಬೆಳವಣಿಗೆ ನಡೆದಿದೆ. ಸಿಎಂ ಸಿದ್ದರಾಮಯ್ಯ ಅವರು ಇಂದೇ ಜಾತಿಗಣತಿ ವರದಿ ಸ್ವೀಕರಿಸಿದ್ದಾರೆ.

ವಿಧಾನಸೌಧಕ್ಕೆ ಆಗಮಿಸಿದ ಸಿಎಂ ಸಿದ್ದರಾಮಯ್ಯ ಅವರು ಸಿಎಂ ಕೊಠಡಿಯಲ್ಲಿ ವರದಿ ಸ್ವೀಕರಿಸಿದರು. ಹಿಂದುಳಿದ ವರ್ಗಗಳ ಆಯೋಗದ ಅಧ್ಯಕ್ಷ ಮಧುಸೂದನ್ ಆರ್ ನಾಯ್ಕ್, ಆಯೋಗದ ಸದಸ್ಯ ಕಾರ್ಯದರ್ಶಿ ಹಾಗೂ ಅಧಿಕಾರಿಗಳು ಸಿಎಂಗೆ ವರದಿ ಸಲ್ಲಿಸಿದರು.

ವರದಿ ಸ್ವೀಕಾರ ವೇಳೆ ಸಚಿವರಾದ ಶಿವರಾಜ್ ತಂಗಡಗಿ, ಹೆಚ್.ಸಿ.ಮಹದೇವಪ್ಪ, ಎಂ.ಸಿ.ಸುಧಾಕರ್, ಸತೀಶ್ ಜಾರಕಿಹೊಳಿ, ಚಲುರಾಯಸ್ವಾಮಿ,



ಶಾಸಕರಾದ ಕೋನರೆಡ್ಡಿ, ನರೇಂದ್ರಸ್ವಾಮಿ, ಮುಖ್ಯಮಂತ್ರಿಗಳ ಕಾನೂನು ಸಲಹೆಗಾರ ಪೊನ್ನಣ್ಣ ಹಾಗೂ ಹಿಂದುಳಿದ ವರ್ಗಗಳ ಆಯೋಗದ ಅಧ್ಯಕ್ಷ ಮಧುಸೂಧನ್ ಆರ್ ನಾಯ್ಕ್, ಸದಸ್ಯರಾದ ಶಿವಣ್ಣಗೌಡ, ಚಂದ್ರಪ್ಪ ಯಾದವ, ಪ್ರತಿಭಾ ಕುಳಾಯಿ, ಡಾ. ಸಿ.ಎಂ. ಕುಂದಗೋಳ, ಡಾ. ಜಿ.ಎನ್.ಶ್ರೀಕಂಠಯ್ಯ ಹಾಗೂ ಸದಸ್ಯ ಕಾರ್ಯದರ್ಶಿ ದಯಾನಂದ್, ಆಡಳಿತಾತ್ಮಕ ಕಾರ್ಯದರ್ಶಿ ಊರ್ಮಿಳಾ ಬಿ, ಡಿ.ಎನ್.ನಾಯಕ್ ಆಯೋಗದ ವಿಶೇಷ ಸಲಹೆಗಾರರು ಮತ್ತು ಇತರೆ ತಜ್ಞರು ಉಪಸ್ಥಿತರಿದ್ದರು.

ವರದಿ ಸಲ್ಲಿಕೆಗೂ ಮುನ್ನ ಮಾತನಾಡಿದ ಆಯೋಗದ ಅಧ್ಯಕ್ಷ ಮಧುಸೂದನ್ ನಾಯ್ಕ್, ಸರ್ವೇ ಮುಗಿದು 6 ತಿಂಗಳು ಆಗ್ತಾ ಬಂತು. ಸರ್ವೇ ಅನಾಲಿಸಿಸ್ ಮಾಡಿ ರೆಡಿ ಮಾಡ್ತಾ ಇದ್ವಿ. ರೆಡಿಯಾಗಿ ಒಂದು ತಿಂಗಳು ಆಯ್ತು. ಆದರೆ, ಇಂಗ್ಲಿಷ್‌ನಲ್ಲಿತ್ತು. ಇಂಗ್ಲಿಷ್‌ನಿಂದ ಕನ್ನಡಕ್ಕೆ ತರ್ಜುಮೆ ಮಾಡಬೇಕಿತ್ತು. ಸಾಮಾನ್ಯ ಜನರಿಗೆ ಅರ್ಥ ಆಗುವ ಹಾಗೇ ತರ್ಜುಮೆ ಮಾಡಿದ್ವಿ. ಹಾಗಾಗಿ, ಸಮಯ ತೆಗೆದು ಕೊಂಡಿದ್ದೇವೆ.

ಒಂದು ತಿಂಗಳಿಂದ ರಿಪೋರ್ಟ್ ರೆಡಿ ಇತ್ತು. ಮೆಂಬರ್ಸ್ ಕೆಲವರು ಹೊರಗಡೆ ಇದ್ರು. ಇದೇ ತಿಂಗಳು 29 ಕ್ಕೆ ನಾವು ಮೀಟಿಂಗ್ ಕರೆದಿದ್ದೇವೆ. ಕೆಲವು ಮೆಂಬರ್ಸ್ ಆ ದಿನ ಬರೋಕೆ ಆಗಲ್ಲ ಅಂದ್ರು. ಹಾಗಾಗಿ, ಇವತ್ತೇ ತುರ್ತು ಸಭೆ ಮಾಡಿದ್ದೇವೆ ಎಂದು ತಿಳಿಸಿದರು.

ಜಾತಿ ಜನಗಣತಿ ವರದಿ ಸಲ್ಲಿಕೆಗೆ ಸದಸ್ಯರ ಮಧ್ಯೆ ಯಾವುದೇ ಭಿನ್ನಾಭಿಪ್ರಾಯ ಇಲ್ಲ. ತಕ್ಷಣಕ್ಕೆ ಜಾತಿ ಜನಗಣತಿ ಅನುಷ್ಠಾನಕ್ಕೆ ತರೋದಕ್ಕೆ ಕಷ್ಟಸಾಧ್ಯ. ರಿಪೋರ್ಟ್ ಸಿಕ್ಕ ತಕ್ಷಣ ಕ್ಯಾಬಿನೆಟ್ ಹೋಗೋ ಸಾಧ್ಯತೆ ಇದೆ. ಕ್ಯಾಬಿನೆಟ್ ಸ್ವೀಕಾರ ಮಾಡಿದ ಬಳಿಕ ಪ್ರಕ್ರಿಯೆ ನಡೆಯುತ್ತೆ ಎಂದರು.

ಭಾರತ ಸಾರಥಿ
BHARATHA SARATHI KANNADA DAILY NEWS PAPER
28/05/2026
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ-ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# "ಪ್ರೀಮಿಯಂ ಮನ್ನಾ" ಭಾರತೀಯ ಹೂಡಿಕೆದಾರರಿಂದ ಏಕೆ ಹೆಚ್ಚಿನ ಗಮನಕ್ಕೆ ಅರ್ಹವಾಗಿದೆ?

ಬೆಂಗಳೂರು

ಪಾಲಿಸಿಯು ಮಗುವಿನ ಶಿಕ್ಷಣ, ಮದುವೆ, ನಿವೃತ್ತಿ ಅಥವಾ ತುರ್ತು ನಿಧಿಯಂತಹ ಜೀವನದ ಗುರಿಗಳನ್ನು ಭದ್ರಪಡಿಸಲು ಸಹಾಯ ಮಾಡುತ್ತದೆ ಎಂಬ ನಂಬಿಕೆಯಿಂದ ಹೆಚ್ಚಿನ ಜನರು ಹೂಡಿಕೆ ವಿಮಾ ಯೋಜನೆಗಳನ್ನು ಖರೀದಿಸುತ್ತಾರೆ.

ಆದರೆ ಖರೀದಿಯ ಸಮಯದಲ್ಲಿ ಅನೇಕ ಪಾಲಿಸಿದಾರರು ನಿರ್ಲಕ್ಷಿಸುವ ಒಂದು ನಿರ್ಣಾಯಕ ಪ್ರಶ್ನೆ ಎಂದರೆ ಪಾಲಿಸಿದಾರರು ಭವಿಷ್ಯದ ಪ್ರೀಮಿಯಂಗಳನ್ನು ಪಾವತಿಸಲು ಸಾಧ್ಯವಾಗದಿದ್ದರೆ ಈ ಗುರಿಗಳಿಗೆ ಏನಾಗುತ್ತದೆ ಎನ್ನುವುದು?

ಹೆಚ್ಚಿನ ಕುಟುಂಬಗಳಿಗೆ, ಆರ್ಥಿಕ ಯೋಜನೆಯನ್ನು ಶಿಸ್ತು ಮತ್ತು ನಿರಂತರತೆಯ ಸುತ್ತ ನಿರ್ಮಿಸಲಾಗಿದೆ. ಮಾಸಿಕ ಎಸ್‌ಐಪಿ, ದೀರ್ಘಕಾಲೀನ ಹೂಡಿಕೆ ಯೋಜನೆ ಅಥವಾ ನಿವೃತ್ತಿ ಕಾರ್ಪಸ್ ಅನ್ನು ಆದಾಯವು ವರ್ಷಗಳವರೆಗೆ, ಕೆಲವೊಮ್ಮೆ ದಶಕಗಳವರೆಗೆ ತಡೆರಹಿತವಾಗಿ ಮುಂದುವರಿಯುತ್ತದೆ ಎಂಬ ಊಹೆಯೊಂದಿಗೆ ವಿನ್ಯಾಸಗೊಳಿಸಲಾಗಿದೆ. ಆದರೂ ಜೀವನವು ಯಾವಾಗಲೂ ಯೋಜನೆಯ ಪ್ರಕಾರ ಚಲಿಸುವುದಿಲ್ಲ.

ತನ್ನ ಮಗುವಿನ ಸ್ನಾತಕೋತ್ತರ ಪದವಿಗಾಗಿ ಒಂದು ಗೌರವಾನ್ವಿತ ವಿಶ್ವವಿದ್ಯಾಲಯದಲ್ಲಿ ಆರ್ಥಿಕವಾಗಿ ತಯಾರಿ ನಡೆಸಲು ಬಯಸುತ್ತಾನೆ. 20 ವರ್ಷಗಳ ಗುರಿಯನ್ನು ಗಮನದಲ್ಲಿಟ್ಟುಕೊಂಡು, ಅವರು ಸಿಸ್ಟಮ್ಯಾಟಿಕ್ ಇನ್ವೆಸ್ಟ್‌ಮೆಂಟ್ ಪ್ಲಾನ್ ಮೂಲಕ ಪ್ರತಿ ತಿಂಗಳು 10,000 ಹೂಡಿಕೆ ಮಾಡಲು ಪ್ರಾರಂಭಿಸುತ್ತಾರೆ. ಎರಡು ದಶಕಗಳಲ್ಲಿ ಸುಮಾರು 1 ಕೋಟಿ ರೂ.ಗಳ ಕಾರ್ಪಸ್ ಅನ್ನು ನಿರ್ಮಿಸುವ ಗುರಿಯನ್ನು ಹೊಂದಿದ್ದು, 15% ಸಿಎಜಿಆರ್ ಅನ್ನು ಊಹಿಸುತ್ತಾರೆ.

# ನವೋದ್ಯಮಿ ಪ್ರಶಸ್ತಿ ಪ್ರದಾನ

ಬೆಂಗಳೂರು

ಇಎಲ್‌ಆರ್‌ಎ ಗುಂಪಿನ ಸಂಸ್ಥಾಪಕ ಹಾಗೂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಇ. ಲಕ್ಷ್ಮೀನಾರಾಯಣ ರೆಡ್ಡಿ ಅವರಿಗೆ ಕರ್ನಾಟಕ ಬಿಸಿನೆಸ್ ಅವಾರ್ಡ್ಸ್ 2026ರಲ್ಲಿ 'ಸುಸ್ಥಿರ ರಿಯಲ್ ಎಸ್ಟೇಟ್ ಅಭಿವೃದ್ಧಿಯಲ್ಲಿ ಉದಯೋನ್ಮುಖ ನವೋದ್ಯಮಿ' ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಕರ್ನಾಟಕದ ಪ್ರಮುಖ ಉದ್ಯಮ ಗೌರವ ವೇದಿಕೆಯಾಗಿರುವ ಕರ್ನಾಟಕ ಬಿಸಿನೆಸ್ ಅವಾರ್ಡ್ಸ್‌ನ ಆರನೇ ಆವೃತ್ತಿಯಲ್ಲಿ ವಿವಿಧ ಕ್ಷೇತ್ರಗಳಲ್ಲಿನ ಸಾಧನೆ, ನವೀನತೆ, ನಾಯಕತ್ವ ಹಾಗೂ ಉದ್ಯಮಶೀಲತೆಯನ್ನು ಸನ್ಮಾನಿಸಲಾಯಿತು. ಕರ್ನಾಟಕ ಟ್ರೇಡರ್ಸ್ ಚೇಂಬರ್ ಆಫ್ ಕಾಮರ್ಸ್ ಆಯೋಜಿಸಿದ್ದ ಈ ಕಾರ್ಯಕ್ರಮದಲ್ಲಿ ರಾಜ್ಯದ ವಿವಿಧ ಭಾಗಗಳಿಂದ ಆಗಮಿಸಿದ್ದ ಉದ್ಯಮಿಗಳು, ವೃತ್ತಿಪರರು, ಸ್ಟಾರ್ಟ್‌ಅಪ್ ಸಂಸ್ಥಾಪಕರು ಹಾಗೂ ಕೈಗಾರಿಕಾ ಮುಖಂಡರು ಭಾಗವಹಿಸಿದ್ದರು.




ಈ ಪ್ರಶಸ್ತಿ, ಬೆಂಗಳೂರಿನಲ್ಲಿ ಸುಸ್ಥಿರ ಹಾಗೂ ಭವಿಷ್ಯೋನ್ಮುಖ ರಿಯಲ್ ಎಸ್ಟೇಟ್ ಅಭಿವೃದ್ಧಿಗೆ ಇಎಲ್‌ಆರ್‌ಎ ಗುಂಪು ನೀಡುತ್ತಿರುವ ಕೊಡುಗೆಯನ್ನು ಗುರುತಿಸಿದೆ. ಇಂದಿನ ಮಾರುಕಟ್ಟೆಯಲ್ಲಿ ಆಸ್ತಿ ಭದ್ರತೆ, ನಿಯಂತ್ರಣಾತ್ಮಕ ಪಾರದರ್ಶಕತೆ ಹಾಗೂ ಭೂ ಪರಿಶೀಲನೆಗೆ ಹೆಚ್ಚಿನ ಆದ್ಯತೆ ನೀಡುತ್ತಿರುವ ಗ್ರಾಹಕರ ಅಗತ್ಯವನ್ನು ಗಮನದಲ್ಲಿಟ್ಟುಕೊಂಡು, ಇಎಲ್‌ಆರ್‌ಎ ಗುಂಪು ತನ್ನ ಪ್ರಮುಖ ಯೋಜನೆಯಾದ 'ಅಮಿಡ್‌ಸ್ಟ್ ನೇಚರ್' ಮೂಲಕ ಐಷಾರಾಮಿ ವಸತಿ ಅಭಿವೃದ್ಧಿ ಕ್ಷೇತ್ರಕ್ಕೆ ಅಧಿಕೃತವಾಗಿ ಪ್ರವೇಶಿಸಿದೆ.

ಬೆಂಗಳೂರು ಕನಕಪುರ ಮುಖ್ಯರಸ್ತೆಯ ಸಮೀಪದ ಕಗ್ಗಲಿಪುರದಲ್ಲಿ 18 ಎಕರೆ ಪ್ರದೇಶದಲ್ಲಿ ಅಭಿವೃದ್ಧಿಗೊಳ್ಳುತ್ತಿರುವ 'ಅಮಿಡ್‌ಸ್ಟ್ ನೇಚರ್' ಯೋಜನೆ ಕಡಿಮೆ ಸಾಂದ್ರತೆಯ ಬಹುಹಂತದ ಸಮುದಾಯ ಯೋಜನೆಯಾಗಿದ್ದು, ವಸತಿ ನಿವೇಶನಗಳು, ಭವಿಷ್ಯದ ಅಪಾರ್ಟ್‌ಮೆಂಟ್‌ಗಳು ಹಾಗೂ ಆಯ್ದ ವಾಣಿಜ್ಯ ಸ್ಥಳಗಳನ್ನು ಒಳಗೊಂಡಿದೆ. ಯೋಜನೆಯನ್ನು ಮೂರು ಹಂತಗಳಲ್ಲಿ ಅಭಿವೃದ್ಧಿಪಡಿಸಲಾಗುತ್ತಿದೆ.

ಮೊದಲ ಹಂತವು 18 ತಿಂಗಳೊಳಗೆ ಪೂರ್ಣಗೊಳ್ಳುವ ನಿರೀಕ್ಷೆಯಿದೆ. ನಂತರದ ಹಂತಗಳು ಮುಂದಿನ ಮೂರು ವರ್ಷಗಳಲ್ಲಿ ಪೂರ್ಣಗೊಳ್ಳಲಿವೆ.

ಪ್ರಸ್ತುತ ಯೋಜನೆಯಲ್ಲಿ 2400 ಚದರ ಅಡಿಯಿಂದ 3500 ಚದರ ಅಡಿ ವರೆಗಿನ 141 ವಿಲ್ಲಾ ನಿವೇಶನಗಳು ಲಭ್ಯವಿದ್ದು, ಅವುಗಳ ಆರಂಭಿಕ ಬೆಲೆ ರೂ.1.92 ಕೋಟಿಯಿಂದ ಆರಂಭವಾಗುತ್ತದೆ. ಯೋಜನೆಗೆ ಅಗತ್ಯ ಮೂಲಸೌಕರ್ಯಗಳನ್ನು ಒದಗಿಸಲಾಗಿದ್ದು, ಸುಸ್ಥಿರ ಯೋಜನೆ, ದೃಢೀಕೃತ ಭೂ ಮಾಲೀಕತ್ವ ಹಾಗೂ ದೀರ್ಘಕಾಲಿಕ ಹೂಡಿಕೆ ಮೌಲ್ಯಕ್ಕೆ ವಿಶೇಷ ಒತ್ತು ನೀಡಲಾಗಿದೆ.

# 'ಬೆನ್ಸ್ ಕುಕೀಸ್' ಭಾರತ ಪ್ರವೇಶಕ್ಕೆ ವಿಶೇಷ ಸಹಯೋಗ

ಬೆಂಗಳೂರು: ಮುಂಚೂಣಿಯ ಎಫ್‌ಎಂಸಿಜಿ ಸಂಸ್ಥೆ ಹಾಗೂ ಬಹು ಉದ್ಯಮಗಳ ಸಮೂಹವಾಗಿರುವ ಧರ್ಮಪಾಲ್ ಸತ್ಯಪಾಲ್ ಗ್ರೂಪ್ (ಡಿ.ಎಸ್. ಗ್ರೂಪ್) ಜನಪ್ರಿಯ ಬ್ರಿಟಿಷ್ ಬ್ರಾಂಡ್ 'ಬೆನ್ಸ್ ಕುಕೀಸ್' ಜೊತೆಗೆ ವಿಶೇಷ ಪಾಲುದಾರಿಕೆಯನ್ನು ಘೋಷಿಸಿದೆ. 'ಬೆನ್ಸ್ ಕುಕೀಸ್' ವಿಶ್ವಪ್ರಸಿದ್ಧ ಆರ್ಟಿಸನಲ್ ಹಾಗೂ ತಾಜಾ ಬೇಯಿಸಲಾದ ಕುಕೀಸ್ ಮತ್ತು ಡೆಸರ್ಟ್ ತ್ವರಿತ ಆಹಾರ ಸರಣಿಯಾಗಿ ಹೆಸರುವಾಸಿಯಾಗಿದೆ.



1983ರಲ್ಲಿ ಆಕ್ಸ್‌ಫರ್ಡ್‌ನ ಕವರ್ಡ್ ಮಾರ್ಕೆಟ್‌ನಲ್ಲಿ ಆರಂಭವಾದ 'ಬೆನ್ಸ್ ಕುಕೀಸ್', ತನ್ನ ವಿಶೇಷ "ಚಂಕಿ ಮತ್ತು ಗೂಯಿ" ಶೈಲಿಯ ಕುಕೀಸ್ ಮೂಲಕ ಜಾಗತಿಕ ಮಟ್ಟದಲ್ಲಿ ಜನಪ್ರಿಯತೆ ಗಳಿಸಿತ್ತು. ಈ ಹೊಸ ಸಹಯೋಗದ ಮೂಲಕ, ಗುಣಮಟ್ಟ ಮತ್ತು ತಾಜಾತನಕ್ಕೆ ಆದ್ಯತೆ ನೀಡುವ ಬ್ರಾಂಡ್‌ನ ಸಾಂಪ್ರದಾಯಿಕ ಬೇಕಿಂಗ್ ಮಾದರಿಯನ್ನು ಭಾರತೀಯ ಮಾರುಕಟ್ಟೆಗೆ ಪರಿಚಯಿಸಲಾಗುತ್ತಿದೆ.

ಬೆನ್ಸ್ ಕುಕೀಸ್ ವಿವಿಧ ರುಚಿಗಳ ಕುಕೀಸ್‌ಗಳನ್ನು ಪರಿಚಯಿಸುತ್ತಿದ್ದು, ಅದರಲ್ಲಿ ಕ್ಲಾಸಿಕ್ ಮಿಲ್ಕ್ ಚಾಕೊಲೇಟ್ ಚಂಕ್, ವೈಟ್ ಚಾಕೊಲೇಟ್ ಮತ್ತು ಮಕಾಡಮಿಯಾ, ಜಿಂಜರ್ ಮತ್ತು ಡಾರ್ಕ್ ಚಾಕೊಲೇಟ್ ಸೇರಿದಂತೆ ಮೊಟ್ಟೆರಹಿತ ವಿಶೇಷ ಮಾದರಿಗಳೂ ಸೇರಿವೆ. ತಾಜಾ ತಯಾರಿಸಲಾದ ಈ ಉತ್ಪನ್ನಗಳು ವೈಯಕ್ತಿಕ ಉಪಯೋಗದ ಜೊತೆಗೆ ಹಬ್ಬ ಹಾಗೂ ಕಾರ್ಪೊರೇಟ್ ಉಡುಗೊರೆಯಾಗಿ ಸಹ ಸೂಕ್ತವಾಗಿವೆ.

ಒಂದು ಕುಕಿಯ ಬೆಲೆ 325ರಿಂದ ಆರಂಭವಾಗಲಿದ್ದು, ಉಡುಗೊರೆ ಸಂಗ್ರಹಗಳ ಬೆಲೆ 1500ಕ್ಕಿಂತ ಮೇಲ್ಪಟ್ಟಿರಲಿದೆ. ಗುಣಮಟ್ಟ ಮತ್ತು ತಾಜಾತನವನ್ನು ದೇಶದಾದ್ಯಂತದ ಗ್ರಾಹಕರಿಗೆ ತಲುಪಿಸುವ ಉದ್ದೇಶದಿಂದ ಈ ಸಹಯೋಗ ಕೈಗೊಳ್ಳಲಾಗಿದೆ.

ಈ ಕುರಿತು ಮಾತನಾಡಿದ ಬೆನ್ಸ್ ಕುಕೀಸ್ ಇಂಡಿಯಾದ ಸಂಸ್ಕೃತಿ ಗುಪ್ತಾ, "ಭಾರತದಲ್ಲಿ ಬೆನ್ಸ್ ಕುಕೀಸ್ ಪ್ರವೇಶವು ಪ್ರೀಮಿಯಂ ಆಹಾರ ಮಾರುಕಟ್ಟೆಯಲ್ಲಿ ಡಿ.ಎಸ್. ಗ್ರೂಪ್‌ನ ಕಾರ್ಯತಂತ್ರದ ವಿಸ್ತರಣೆಗೆ ಮಹತ್ವದ ಮೈಲಿಗಲ್ಲಾಗಿದೆ.

# ಟ್ವಾರ್ರಾ ಸಂಸ್ಥೆಯ ಹೈಪ್ 3 ಹೆಲ್ಮೆಟ್‌ಗಳು ಈಗ ಕ್ರಾಸ್‌ವರ್ಡ್ ಪುಸ್ತಕ ಮಳಿಗೆಗಳಲ್ಲಿ ಲಭ್ಯ

ಬೆಂಗಳೂರು

ಮಹಿಳಾ ಸವಾರರಿಗಾಗಿ ವಿಶೇಷವಾಗಿ ಹೆಲ್ಮೆಟ್ ವಿನ್ಯಾಸಗೊಳಿಸುವ ಭಾರತದ ಏಕೈಕ ಬ್ರ್ಯಾಂಡ್ ಆಗಿರುವ ಟ್ವಾರ್ರಾ ಸಂಸ್ಥೆಯು ತನ್ನ ಯುವಕರಿಗೆ ಉದ್ದೇಶಿತ ಹೈಪ್ 3 ಹೆಲ್ಮೆಟ್ ಸರಣಿಯನ್ನು ಕ್ರಾಸ್‌ವರ್ಡ್ ಪುಸ್ತಕ ಮಳಿಗೆಗಳ ಆಯ್ದ ಕೇಂದ್ರಗಳಲ್ಲಿ ಬಿಡುಗಡೆ ಮಾಡಿದೆ. ಓದು ಮತ್ತು ಜ್ಞಾನ ಸಂಸ್ಕೃತಿಯನ್ನು ಉತ್ತೇಜಿಸುವ ಸಂಸ್ಥೆಯಾಗಿ ಪರಿಚಿತವಾಗಿರುವ ಕ್ರಾಸ್‌ವರ್ಡ್, ಸುರಕ್ಷತೆ ಮತ್ತು ಜಾಗೃತಿಯನ್ನು ಒಟ್ಟಿಗೆ ತರುವ ಈ ಉತ್ಪನ್ನಕ್ಕೆ ಸೂಕ್ತ ವೇದಿಕೆಯಾಗಿದೆ ಎಂದು ಸಂಸ್ಥೆ ಅಭಿಪ್ರಾಯಪಟ್ಟಿದೆ.

ಈ ಸಹಭಾಗಿತ್ವದಡಿ ಹೈಪ್ 3 ಹೆಲ್ಮೆಟ್‌ಗಳು ಬೆಂಗಳೂರಿನ ಮಾಲ್ ಆಫ್ ಏಷ್ಯಾ, ಚೆನ್ನೈನ ಎಕ್ಸ್‌ಪ್ರೆಸ್ ಅವೆನ್ಯೂ ಹಾಗೂ ಹೈದರಾಬಾದ್‌ನ ಫೋರಂ ಸುಜನ್ ಮಾಲ್ ಸೇರಿದಂತೆ ಮೂರು ಪ್ರಮುಖ ಸ್ಥಳಗಳಲ್ಲಿ ಲಭ್ಯವಾಗಲಿವೆ.

ಬಿಡುಗಡೆ ಕಾರ್ಯಕ್ರಮದಲ್ಲಿ ಮಾತನಾಡಿದ ಟ್ವಾರ್ರಾ ಸಂಸ್ಥಾಪಕಿ ಅಲ್ಪನಾ ಪಾರಿಡಾ ಅವರು, ಮಕ್ಕಳ ಸುರಕ್ಷತಾ ಸಾಧನಗಳನ್ನು



ವಿನ್ಯಾಸಗೊಳಿಸುವಾಗ ಪ್ರತ್ಯೇಕ ವಿನ್ಯಾಸ ತತ್ವ ಅಗತ್ಯವಿದೆ ಎಂದು ಹೇಳಿದರು. ಮಕ್ಕಳ ತಲೆಯ ರಚನೆ ವಯಸ್ಕರಿಗಿಂತ ವಿಭಿನ್ನವಾಗಿರುವುದರಿಂದ ಅದಕ್ಕೆ ತಕ್ಕಂತೆ ವಿನ್ಯಾಸ ರೂಪಿಸಬೇಕು ಎಂಬುದು ಸಂಸ್ಥೆಯ ನಿಲುವು ಎಂದು ಅವರು ವಿವರಿಸಿದರು. ಹೆಚ್ಚಿನ ಮಕ್ಕಳು ಪೋಷಕರೊಂದಿಗೆ, ವಿಶೇಷವಾಗಿ ತಾಯಿಯೊಂದಿಗೆ ದ್ವಿಚಕ್ರ ವಾಹನದಲ್ಲಿ ಪ್ರಯಾಣಿಸುವುದರಿಂದ, ಕ್ರಾಸ್‌ವರ್ಡ್‌ನಂತಹ ಕುಟುಂಬ ಕೇಂದ್ರಿತ ಸ್ಥಳಗಳು ಈ ಉತ್ಪನ್ನಕ್ಕೆ ಸೂಕ್ತ ವೇದಿಕೆಯಾಗುತ್ತವೆ ಎಂದು ಅವರು ಹೇಳಿದರು. ಜೊತೆಗೆ ರಸ್ತೆ ಸುರಕ್ಷತಾ ಜಾಗೃತಿ ಕಾರ್ಯಕ್ರಮಗಳನ್ನು ಸಹ ಇಲ್ಲಿ ನಡೆಸಲು ಸಾಧ್ಯವಾಗುತ್ತದೆ ಎಂದು ಅವರು ತಿಳಿಸಿದರು.

ಹೈಪ್ 3 ಸರಣಿಯ ಹೆಲ್ಮೆಟ್‌ಗಳು ಆಧುನಿಕ ವಿನ್ಯಾಸ ಮತ್ತು ಉನ್ನತ ಮಟ್ಟದ ಸುರಕ್ಷತಾ ಮಾನದಂಡಗಳನ್ನು ಒಟ್ಟಿಗೆ ಹೊಂದಿವೆ.

ಸಾಮಾನ್ಯವಾಗಿ ಸುರಕ್ಷತೆ ಮತ್ತು ವಿನ್ಯಾಸವನ್ನು ಒಟ್ಟಿಗೆ ಸೇರಿಸಲು ಸಾಧ್ಯವಿಲ್ಲ ಎಂಬ ಕಲ್ಪನೆಯನ್ನು ಈ ಉತ್ಪನ್ನ ಬದಲಾಯಿಸಲು ಪ್ರಯತ್ನಿಸುತ್ತದೆ. ಯುವ ಸವಾರರು ಇಷ್ಟಪಡುವ ರೀತಿಯ ಆಕರ್ಷಕ ವಿನ್ಯಾಸವನ್ನು ನೀಡುವುದರ ಮೂಲಕ, ಅವರು ಸ್ವಯಂ ಇಚ್ಛೆಯಿಂದ ಹೆಲ್ಮೆಟ್ ಧರಿಸುವಂತೆ ಪ್ರೇರೇಪಿಸುವುದು ಈ ಸರಣಿಯ ಉದ್ದೇಶವಾಗಿದೆ.

# ನ್ಯೂರಲ್ ರಿವೈರಿಂಗ್ ತರಬೇತಿ ಕಾರ್ಯಕ್ರಮ ಆಯೋಜನೆ

ಬೆಂಗಳೂರು

ದೇಶದ ಕ್ಯೂ-ಸ್ಪೋರ್ಟ್ಸ್ ಕ್ಷೇತ್ರದಲ್ಲಿ ಹೊಸ ಅಧ್ಯಾಯ ಬರೆಯುವ ಉದ್ದೇಶದಿಂದ ಹೇಬಾಲ್ ಅಕಾಡೆಮಿ ಬೆಂಗಳೂರು ಮತ್ತು ಕ್ರಿಸ್ ಹೆನ್ರಿ ಸ್ಪೋರ್ಟ್ಸ್ ಸಂಸ್ಥೆಗಳು ಕೈಜೋಡಿಸಿವೆ. ಇವೆರಡು ಸಂಸ್ಥೆಗಳ ಸಹಯೋಗದಲ್ಲಿ ಮೇ 27 ಮತ್ತು 28ರಂದು ಬೆಂಗಳೂರಿನಲ್ಲಿ ಲೆವೆಲ್ 1 ಕ್ರಿಸ್ ಹೆನ್ರಿ ಕೋಚ್ ಪ್ರಮಾಣಪತ್ರ ತರಬೇತಿ ಕಾರ್ಯಕ್ರಮವನ್ನು ಆಯೋಜಿಸಲಾಗಿದ್ದು, ಮೇ 31ರವರೆಗೆ ನಡೆಯಲಿರುವ ವಾರಪೂರ್ತಿ ತರಬೇತಿ ಚಟುವಟಿಕೆಗಳಿಗೆ ಚಾಲನೆ ನೀಡಲಾಗಿದೆ.

ವಿಶ್ವಪ್ರಸಿದ್ಧ ಕ್ಯೂ-ಸ್ಪೋರ್ಟ್ಸ್ ತರಬೇತುದಾರ ಕ್ರಿಸ್ ಹೆನ್ರಿ ಅವರು ಮೊದಲ ಬಾರಿಗೆ ಅಧಿಕೃತ ಕೋಚಿಂಗ್ ಕಾರ್ಯಕ್ರಮಕ್ಕಾಗಿ ಭಾರತಕ್ಕೆ ಆಗಮಿಸುತ್ತಿದ್ದು, ದೇಶದ ವಿವಿಧ ಭಾಗಗಳ ತರಬೇತುದಾರರು, ಅಕಾಡೆಮಿ ಮಾಲೀಕರು ಮತ್ತು ವೃತ್ತಿಪರ ಆಟಗಾರರನ್ನು ಒಂದೇ ವೇದಿಕೆಗೆ ತರುತ್ತಿದ್ದಾರೆ. ಅಂತರರಾಷ್ಟ್ರೀಯ ಮಟ್ಟದ ತರಬೇತಿ ವಿಧಾನಗಳು ಹಾಗೂ ಪ್ರದರ್ಶನ



ಆಧಾರಿತ ಶಿಕ್ಷಣ ವ್ಯವಸ್ಥೆಯನ್ನು ಪರಿಚಯಿಸುವ ಮೂಲಕ, ಈ ಕಾರ್ಯಕ್ರಮ ವೃತ್ತಿಪರ ಕ್ಯೂ-ಸ್ಪೋರ್ಟ್ಸ್ ಕೋಚಿಂಗ್ ಕ್ಷೇತ್ರದಲ್ಲಿ ಮಹತ್ವದ ಮೈಲಿಗಲ್ಲಾಗಲಿದೆ.

ಉದ್ಘಾಟನಾ ತರಬೇತಿ ಕಾರ್ಯಕ್ರಮಕ್ಕೆ ಈಗಾಗಲೇ ಅಪಾರ ಸ್ಪಂದನೆ ದೊರೆತಿದ್ದು, ಎಲ್ಲಾ ಸೀಟುಗಳು ಭರ್ತಿಯಾಗಿವೆ. ದೇಶದ ವಿವಿಧ ರಾಜ್ಯಗಳಿಂದ ಆಟಗಾರರು ಮತ್ತು ತರಬೇತುದಾರರು ಬೆಂಗಳೂರಿಗೆ ಆಗಮಿಸುತ್ತಿದ್ದಾರೆ. ಜೊತೆಗೆ ಜೂನಿಯರ್ ಆಟಗಾರರು ಸೇರಿದಂತೆ ವಿವಿಧ ಹಂತಗಳ ಆಟಗಾರರಿಗೆ ವಿಶೇಷ ತರಬೇತಿ ಕಾರ್ಯಕ್ರಮಗಳನ್ನು ಸಹ ಆಯೋಜಿಸಲಾಗಿದೆ.

ವಿಶ್ವದ ಅಗ್ರಗಣ್ಯ ಸ್ನೂಕರ್ ತರಬೇತುದಾರರಲ್ಲಿ ಒಬ್ಬರಾಗಿರುವ ಕ್ರಿಸ್ ಹೆನ್ರಿ ಅವರು ಮಾರ್ಕ್ ಸೆಲ್ಬಿ, ಶಾನ್ ಮರ್ಫಿ, ಲುಕಾ ಬ್ರೆಸೆಲ್ ಹಾಗೂ ಸ್ಟೀಫನ್ ಹೆಂಡ್ರಿ ಸೇರಿದಂತೆ ಅನೇಕ ವಿಶ್ವ ಚಾಂಪಿಯನ್ ಆಟಗಾರರಿಗೆ ತರಬೇತಿ ನೀಡಿದ ಅನುಭವ ಹೊಂದಿದ್ದಾರೆ.

ಯುಕೆ ಮಾನ್ಯತೆ ಪಡೆದ ಲೆವೆಲ್ 2 ತರಬೇತುದಾರ ಹಾಗೂ ಹೇಬಾಲ್ ಅಕಾಡೆಮಿಯ ಸಂಸ್ಥಾಪಕರಾದ ಪ್ರಣೀತ್ ಜೆ. ರಾಮಚಂದಾನಿ ಅವರು ಈ ಕಾರ್ಯಕ್ರಮವನ್ನು ಕ್ರಿಸ್ ಹೆನ್ರಿ ಅವರೊಂದಿಗೆ ಸಂಯುಕ್ತವಾಗಿ ನಡೆಸಿಕೊಡಲಿದ್ದಾರೆ.

# ಹಲವು ರೈಲುಗಳ ಮಾರ್ಗ ಬದಲಾವಣೆ

ನವದೆಹಲಿ

ಕೆಎಸ್‌ಆರ್ ರೈಲು ನಿಲ್ದಾಣದಲ್ಲಿ ಮೈಸೂರು-ಎಸ್‌ಎಂವಿಟಿ ಬೆಂಗಳೂರು ದೈನಂದಿನ ಪ್ಯಾಸೆಂಜರ್ ವಿಶೇಷ ರೈಲಿನ ವೇಳಾಪಟ್ಟಿಯಲ್ಲಿ ತಾತ್ಕಾಲಿಕ ಪರಿಷ್ಕರಣೆ ಮಾಡಲಾಗಿದೆ. ರೈಲು ಸಂಖ್ಯೆ 06269 ಮೈಸೂರು-ಎಸ್‌ಎಂವಿಟಿ ಬೆಂಗಳೂರು ಪ್ಯಾಸೆಂಜರ್ ವಿಶೇಷ ರೈಲು ಮೇ 26, 2026ರಿಂದ ಜೂನ್ 15, 2026ರವರೆಗೆ ಕೆಎಸ್‌ಆರ್ ಬೆಂಗಳೂರಿಗೆ ಈಗಿನ 00:35/00:45 ಗಂಟೆಗಳ ಬದಲಿಗೆ 00:20ಕ್ಕೆ ಆಗಮಿಸಿ 00:30ಕ್ಕೆ ನಿರ್ಗಮಿಸಲಿದೆ ಎಂದು ರೈಲ್ವೆ ಇಲಾಖೆ ತಿಳಿಸಿದೆ.

ಇದೇ ವೇಳೆ ಮಧ್ಯ ರೈಲ್ವೆಯ ಪುಣೆ ವಿಭಾಗದ ದೌಂಡ್-ಮನ್ಮಾಡ್ ಮಾರ್ಗದಲ್ಲಿ ವಿಸಾಪುರ-ರಂಜನ್‌ಗಾಂವ್ ರೋಡ್-ಸರೋಲಾ ನಿಲ್ದಾಣಗಳ ನಡುವೆ ಹಳಿ ದ್ವಿಗುಣಗೊಳಿಸುವ ಕಾಮಗಾರಿ ನಡೆಯುತ್ತಿರುವ ಹಿನ್ನೆಲೆ ಹಲವು ರೈಲುಗಳ ಮಾರ್ಗ ಬದಲಾವಣೆ ಹಾಗೂ ನಿಯಂತ್ರಣ ಜಾರಿಗೊಳಿಸಲಾಗಿದೆ.

ಮೇ 27 ಮತ್ತು 29ರಂದು ಕೆಎಸ್‌ಆರ್ ಬೆಂಗಳೂರಿನಿಂದ ಹೊರಡುವ ರೈಲು ಸಂಖ್ಯೆ 12627 ಕೆಎಸ್‌ಆರ್ ಬೆಂಗಳೂರು-ನವದೆಹಲಿ ಕರ್ನಾಟಕ ಸೂಪರ್‌ಫಾಸ್ಟ್ ಎಕ್ಸ್‌ಪ್ರೆಸ್ ರೈಲು ಸೋಲಾಪುರ, ಕುರ್ದುವಾಡಿ, ಲಾತೂರ್ ರೋಡ್, ಪರ್ಭಣಿ, ಅಂಕೈ ಹಾಗೂ ಮನ್ಮಾಡ್ ಮಾರ್ಗವಾಗಿ ಸಂಚರಿಸಲಿದೆ. ಮೇ 27ರಂದು ಯಶವಂತಪುರದಿಂದ ಹೊರಡುವ ರೈಲು ಸಂಖ್ಯೆ 22685 ಯಶವಂತಪುರ-ಚಂಡೀಗಢ ಸೂಪರ್‌ಫಾಸ್ಟ್ ಎಕ್ಸ್‌ಪ್ರೆಸ್ ಪುಣೆ, ಲೋನಾವಲಾ, ಕರ್ಜತ್, ಪನ್ವೇಲ್, ಕಲ್ಯಾಣ, ನಾಸಿಕ್ ರೋಡ್ ಮತ್ತು ಮನ್ಮಾಡ್ ಮಾರ್ಗವಾಗಿ ಸಂಚರಿಸಲಿದೆ.

ಮೇ 29ರಂದು ಎಸ್‌ಎಸ್‌ಎಸ್ ಹುಬ್ಬಳ್ಳಿಯಿಂದ ಹೊರಡುವ ರೈಲು ಸಂಖ್ಯೆ 20657 ಎಸ್‌ಎಸ್‌ಎಸ್ ಹುಬ್ಬಳ್ಳಿ-ಹಜರತ್ ನಿಜಾಮುದ್ದೀನ್ ಸೂಪರ್‌ಫಾಸ್ಟ್ ಎಕ್ಸ್‌ಪ್ರೆಸ್ ಸೋಲಾಪುರ, ಕುರ್ದುವಾಡಿ, ಲಾತೂರ್ ರೋಡ್, ಪರ್ಭಣಿ, ಛತ್ರಪತಿ ಸಂಭಾಜಿನಗರ ಹಾಗೂ ಮನ್ಮಾಡ್ ಮಾರ್ಗವಾಗಿ ಸಂಚರಿಸಲಿದೆ. ಅದೇ ದಿನ ಹಜರತ್ ನಿಜಾಮುದ್ದೀನ್ನಿಂದ ಹೊರಡುವ ರೈಲು ಸಂಖ್ಯೆ 12780 ಹಜರತ್ ನಿಜಾಮುದ್ದೀನ್-ವಾಸ್ಕೋ-ಡ-ಗಾಮಾ ಗೋವಾ ಸೂಪರ್‌ಫಾಸ್ಟ್ ಎಕ್ಸ್‌ಪ್ರೆಸ್ ಮನ್ಮಾಡ್, ನಾಸಿಕ್ ರೋಡ್, ಕಲ್ಯಾಣ, ಪನ್ವೇಲ್, ಕರ್ಜತ್, ಲೋನಾವಲಾ ಹಾಗೂ ಪುಣೆ ಮಾರ್ಗವಾಗಿ ಸಂಚರಿಸಲಿದೆ.

ಕೆಲವು ರೈಲುಗಳ ಸಂಚಾರದಲ್ಲೂ ತಾತ್ಕಾಲಿಕ ನಿಯಂತ್ರಣ ಜಾರಿಗೊಳಿಸಲಾಗಿದೆ. ಮೇ 27ರಂದು ಹಜರತ್ ನಿಜಾಮುದ್ದೀನ್ನಿಂದ ಹೊರಡುವ ವಾಸ್ಕೋ-ಡ-ಗಾಮಾ ಗೋವಾ ಸೂಪರ್‌ಫಾಸ್ಟ್ ಎಕ್ಸ್‌ಪ್ರೆಸ್ ಮನ್ಮಾಡ್-ಅಕೋಲ್ನರ್ ಭಾಗದಲ್ಲಿ 2 ಗಂಟೆ 30 ನಿಮಿಷಗಳ ಕಾಲ ನಿಯಂತ್ರಣವಾಗಲಿದೆ. ಮೇ 28ರಂದು ಯೋಗ ನಗರಿ ಋಷಿಕೇಶದಿಂದ ಹೊರಡುವ ವಿಶೇಷ ಎಕ್ಸ್‌ಪ್ರೆಸ್ ರೈಲು ಕೂಡ 2 ಗಂಟೆ 30 ನಿಮಿಷಗಳ ಕಾಲ ನಿಯಂತ್ರಣಕ್ಕೆ ಒಳಗಾಗಲಿದೆ.

ಮೇ 29ರಂದು ನವದೆಹಲಿಯಿಂದ ಹೊರಡುವ ರೈಲು ಸಂಖ್ಯೆ 12628 ನವದೆಹಲಿ-ಕೆಎಸ್‌ಆರ್ ಬೆಂಗಳೂರು ಕರ್ನಾಟಕ ಸೂಪರ್‌ಫಾಸ್ಟ್ ಎಕ್ಸ್‌ಪ್ರೆಸ್ ಸೋಲಾಪುರ-ದೌಂಡ್ ಭಾಗದಲ್ಲಿ 1 ಗಂಟೆ 30 ನಿಮಿಷಗಳ ಕಾಲ ನಿಯಂತ್ರಣವಾಗಲಿದೆ.

# ಅಮೆರಿಕಾದ ಸ್ಯಾನ್ ಹೋಸೆಯಲ್ಲಿ ಅಪೂರ್ವ "ಶ್ರೀ ಬನ್ನಂಜೆ ೯೦ ವಿಶ್ವ ನಮನ" ಸಂಪನ್ನ

ನವದೆಹಲಿ

ಸ್ಯಾನ್ ಹೋಸೆನಲ್ಲಿ ಪರಮ ಪೂಜ್ಯ ಶ್ರೀ ಸುಗುಣೇಂದ್ರ ತೀರ್ಥ ಶ್ರೀಪಾದರು ಅವರ ಪರಮಾನುಗ್ರಹದೊಂದಿಗೆ ಶ್ರೀ ಬನ್ನಂಜೆ ಪ್ರತಿಷ್ಠಾನ ವತಿಯಿಂದ ಆಯೋಜಿಸಲಾದ "ಶ್ರೀ ಬನ್ನಂಜೆ 90 ವಿಶ್ವ ನಮನ" ಕಾರ್ಯಕ್ರಮಗಳು ಅತ್ಯಂತ ವೈಭವಯುತವಾಗಿ ನೆರವೇರಿದವು. ಅಮೆರಿಕಾದ ಶ್ರೀ ಪುತ್ತಿಗೆ ಮಠದ ಆಶ್ರಯದಲ್ಲಿ ನಡೆದ ಈ ಮಹತ್ವದ ಕಾರ್ಯಕ್ರಮವು ಶ್ರೀಹರಿ-ವಾಯು-ಗುರುಗಳಿಗೆ ಅದ್ದೂರಿ ರಥೋತ್ಸವ ನಡೆಸುವುದರೊಂದಿಗೆ ಸಮಾಪ್ತಿಯಾಯಿತು.

ಕಾರ್ಯಕ್ರಮದಲ್ಲಿ ದಾಸರ ಪದಗಳ ಗಾನ-ನೃತ್ಯ ಸಮ್ಮಿಲನದ ಮೂಲಕ ಶ್ರೀ ವೆಂಕಟಕೃಷ್ಣನಿಗೆ ವಿಶೇಷ ಸೇವೆ ಸಲ್ಲಿಸಲಾಯಿತು. ಈ ಸಂದರ್ಭದಲ್ಲಿ ಖ್ಯಾತ ವಾಗ್ಮಿ ಡಾ. ಗುರುರಾಜ ಕರ್ಜಗಿ ಸೇರಿದಂತೆ ಅನೇಕ ಗಣ್ಯರು ಉಪಸ್ಥಿತರಿದ್ದರು.

ಮೊದಲ ದಿನ ಹರಿ-ವಾಯು-ಗುರುಗಳ ಭಾವಚಿತ್ರ ಮೆರವಣಿಗೆಯೊಂದಿಗೆ ಕಾರ್ಯಕ್ರಮ ಆರಂಭಗೊಂಡಿತು. ಬಳಿಕ ಡಾ. ಗುರುರಾಜ ಕರ್ಜಗಿ ದೀಪ ಬೆಳಗಿಸಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ, ಶ್ರೀ ಬನ್ನಂಜೆಯವರ ಕೃತಿಗಳ ವೈಶಿಷ್ಟ್ಯ ಮತ್ತು ಅವರ ಚಿಂತನಾ ಶೈಲಿಯ ಕುರಿತು ಮನೋಜ್ಞವಾಗಿ ಮಾತನಾಡಿದರು.

ಕಾರ್ಯಕ್ರಮದಲ್ಲಿ ಶ್ರೀ ಬನ್ನಂಜೆ ಆಚಾರ್ಯರ ಶಿಷ್ಯರಾದ ವಿದ್ವಾಂಸರು ಹಾಗೂ ಅಭಿಮಾನಿಗಳು ವಿವಿಧ ವಿಷಯಗಳ ಕುರಿತು ಉಪನ್ಯಾಸ ನೀಡಿ, ಅವರೊಂದಿಗೆ ಹೊಂದಿದ್ದ ಅನುಭವಗಳನ್ನು ಹಂಚಿಕೊಂಡರು. ವಿದ್ವಾನ್ ಶ್ರೀ ಗೋಪಿನಾಥ ಗಲಗಲಿ, ಶ್ರೀ ಪೂರ್ಣಪ್ರಸಾದ, ಶ್ರೀ ಬಾಲಚಂದ್ರ ಕೃಷ್ಣ, ಶ್ರೀ ಪ್ರಭುಮೂರ್ತಿ, ಶ್ರೀ ಪ್ರಸನ್ನ ಕೃಷ್ಣ, ಶ್ರೀ ಹರೀಶ ವಾಸುದೇವ, ಶ್ರೀ ಆನಂದ ದೇಶಪಾಂಡೆ, ಶ್ರೀ ಜಗನ್ನಾಥ್, ಶ್ರೀ ಎಂ.ಎಸ್. ಸತ್ಯನಾರಾಯಣ, ಚಿ. ಪರೀಕ್ಷಿತ ಕೃಷ್ಣ, ಚಿ. ಪ್ರಣವ ರಾಘವೇಂದ್ರ



ಹಾಗೂ ಶ್ರೀ ಸಮೀರಣ ಸೇರಿದಂತೆ ಹಲವರು ಶ್ರೀ ಬನ್ನಂಜೆಯವರ ವ್ಯಕ್ತಿತ್ವ, ಸಾಹಿತ್ಯ ಹಾಗೂ ಆಧ್ಯಾತ್ಮಿಕ ಕೊಡುಗೆಗಳನ್ನು ಸ್ಮರಿಸಿದರು.

ಶ್ರೀಮತಿ ದಿವ್ಯಾ ರಮೇಶ್ ಮತ್ತು ಅವರ ವಿದ್ಯಾರ್ಥಿಗಳು ಶ್ರೀ ಬನ್ನಂಜೆಯವರ ಕೃತಿಗಳನ್ನು ಸುಂದರವಾಗಿ ಗಾಯನ ಮಾಡುವ ಮೂಲಕ ಕಾರ್ಯಕ್ರಮಕ್ಕೆ ವಿಶೇಷ ಮೆರುಗು ತಂದರು.

ಶ್ರೀ ಪ್ರಭುನಂದನ್ ಮೂರ್ತಿ ಸ್ವರಚಿತ ಸಂಸ್ಕೃತ ಪದ್ಯಗಳನ್ನು ಪುಟಾಣಿಗಳ ಮೂಲಕ ಗಾಯನ ರೂಪದಲ್ಲಿ ಅರ್ಪಿಸಿದರು. ಶ್ರೀ ಬನ್ನಂಜೆಯವರು ಅಮೆರಿಕಾದ ಪ್ರವಾಸದ ವೇಳೆ ನೀಡಿದ ಪ್ರವಚನಗಳು, ಅವರ ಆದರ್ಶ ವ್ಯಕ್ತಿತ್ವ ಹಾಗೂ ಸಾಹಿತ್ಯದ ಪ್ರಭಾವ ಕುರಿತು ಅನೇಕ ಅಭಿಮಾನಿಗಳು ತಮ್ಮ ನೆನಪುಗಳನ್ನು ಹಂಚಿಕೊಂಡರು.

ಪ್ರಶ್ನೋತ್ತರ ಕಾರ್ಯಕ್ರಮ, ಶ್ರೀಮತಿ ಕವಿತಾ ಉಡುಪ ಅವರ ಕವಿತಾ ವಾಚನ ಹಾಗೂ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ವಿಶೇಷ ಆಕರ್ಷಣೆಯಾಗಿದ್ದವು. ಸಭೆಯಲ್ಲಿ ಶ್ರೀಮತಿ ಆಶಾ, ಶ್ರೀ ಶ್ರೀಧರ ಗೋಪಾಲ ಸೇರಿದಂತೆ ಅನೇಕ ಗಣ್ಯರು ಭಾಗವಹಿಸಿದ್ದರು.

ಕಾರ್ಯಕ್ರಮಕ್ಕೆ ಶ್ರೀ ಪುತ್ತಿಗೆ ಮಠದ ಅಂತಾರಾಷ್ಟ್ರೀಯ ಕಾರ್ಯದರ್ಶಿ ಶ್ರೀ ಪ್ರಸನ್ನಾಚಾರ್ಯ ಸ್ವಾಗತ ಕೋರಿದರೆ, ಡಾ. ವೀಣಾ ಬನ್ನಂಜೆ ವಂದಿಸಿದರು. ಶ್ರೀಮತಿ ಸರಸ್ವತಿ ವಟ್ಟಂ, ಶ್ರೀ ಮುರಳಿ ಬಾಟಿ ಮತ್ತು ಶ್ರೀ ಸತೀಶ ಜಮಖಂಡಿ ಕಾರ್ಯಕ್ರಮ ನಿರೂಪಣೆ ನಡೆಸಿದರು.

ಸ್ಯಾನ್ ಹೋಸೆ ಶ್ರೀಕೃಷ್ಣ ವೃಂದಾವನದ ಪ್ರಧಾನ ಅರ್ಚಕರಾದ ಶ್ರೀ ಶಂಕರ ನಾರಾಯಣ ಭಟ್ಟ ಅವರ ನೇತೃತ್ವದಲ್ಲಿ, ಭಕ್ತರ ಸಹಕಾರದೊಂದಿಗೆ "ಶ್ರೀ ಬನ್ನಂಜೆ 90 ವಿಶ್ವ ನಮನ" ಕಾರ್ಯಕ್ರಮ ಅತ್ಯಂತ ವೈಭವಯುತವಾಗಿ ಯಶಸ್ವಿಯಾಗಿ ನೆರವೇರಿತು.

# ಒಕಳೀಪುರಂ ಅಷ್ಟಪಥ ಕಾರಿಡಾರ್ 25 ದಿನಗಳಲ್ಲಿ ಕಾಮಗಾರಿ ಪೂರ್ಣಗೊಳಿಸಲು ಸೂಚನೆ



ನವದೆಹಲಿ

ಒಕಳೀಪುರಂ ಅಷ್ಟಪಥ ಕಾರಿಡಾರ್‌ನ ಚೆನ್ನೈ ರೈಲ್ವೆ ಕೆಳಭಾಗದಲ್ಲಿ ಬಾಕಿ ಇರುವ ಕಾಮಗಾರಿಗಳನ್ನು 25 ದಿನಗಳೊಳಗೆ ಪೂರ್ಣಗೊಳಿಸುವಂತೆ ಮುಖ್ಯ ಆಯುಕ್ತ ಮಹೇಶ್ವರ್ ರಾವ್ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ಬೆಂಗಳೂರು ಕೇಂದ್ರ ನಗರ ಪಾಲಿಕೆ ಹಾಗೂ ಪಶ್ಚಿಮ ನಗರ ಪಾಲಿಕೆ ವ್ಯಾಪ್ತಿಯ ವಿವಿಧ ಅಭಿವೃದ್ಧಿ ಕಾಮಗಾರಿಗಳ ಸ್ಥಳ ಪರಿಶೀಲನೆ ವೇಳೆ ಅವರು ಮಾತನಾಡಿದರು. ಚೆನ್ನೈ ರೈಲ್ವೆ ಹಳಿ ಕೆಳಭಾಗದಲ್ಲಿ ರೈಲ್ವೆ ಇಲಾಖೆ ಈಗಾಗಲೇ ಎರಡು ಬಾಕ್ಸ್ ಪುಶಿಂಗ್ ಕಾರ್ಯಗಳನ್ನು ಪೂರ್ಣಗೊಳಿಸಿದೆ ಎಂದು ಅವರು ತಿಳಿಸಿದರು.

ಮೆಜೆಸ್ಟಿಕ್‌ನಿಂದ ರಾಜಾಜಿನಗರದ ಕಡೆಗೆ ತೆರಳುವ ಮಾರ್ಗದಲ್ಲಿ ಬಾಕಿ ಇರುವ ಸಂಪರ್ಕ ರಸ್ತೆ ನಿರ್ಮಾಣ ಕಾರ್ಯವನ್ನು 25 ದಿನಗಳೊಳಗೆ ಪೂರ್ಣಗೊಳಿಸಬೇಕು ಎಂದು ಅವರು ಸೂಚಿಸಿದರು. ಅದೇ ರೀತಿ ರೈಲ್ವೆ ನಿಲ್ದಾಣದ ಕಡೆಗೆ ತೆರಳುವ ಬಾಕ್ಸ್ ಮಾರ್ಗದ ಸಂಪರ್ಕ ರಸ್ತೆ, ಮಳೆನೀರು ಹರಿವಿಗಾಗಿ 1200 ಮಿ.ಮೀ. ವ್ಯಾಸದ ನೀರುಗಾಲುವೆ, 63 ಮೀಟರ್ ಉದ್ದದ ರಿಟೈನಿಂಗ್ ವಾಲ್ ಹಾಗೂ ಪಾದಚಾರಿ ಮಾರ್ಗ ಕಾಮಗಾರಿಗಳನ್ನು ಕೂಡಲೇ ಆರಂಭಿಸಿ ನಿಗದಿತ ಸಮಯದಲ್ಲಿ ಪೂರ್ಣಗೊಳಿಸುವಂತೆ ನಿರ್ದೇಶನ ನೀಡಿದರು.

ಹೊಸ ಪಾದಚಾರಿ ಮೇಲ್ಸೇತುವೆ ನಿರ್ಮಾಣ ಕಾಮಗಾರಿಯನ್ನೂ ಶೀಘ್ರ ಆರಂಭಿಸಿ ವೇಗವಾಗಿ ಪೂರ್ಣಗೊಳಿಸಬೇಕೆಂದು ಅವರು ಅಧಿಕಾರಿಗಳಿಗೆ ಸೂಚಿಸಿದರು.

ಮಾಧವನಗರ ರೈಲ್ವೆ ಕೆಳಸೇತುವೆ ಪರಿಶೀಲನೆ ವೇಳೆ ಮಾತನಾಡಿದ ಮಹೇಶ್ವರ್ ರಾವ್ ಅವರು, ಮಳೆನೀರು ಹರಿವಿಗೆ ಅಳವಡಿಸಿರುವ ಗ್ರೇಟಿಂಗ್‌ಗಳನ್ನು ನಿಯಮಿತವಾಗಿ ಸ್ವಚ್ಛಗೊಳಿಸಬೇಕು. ಚರಂಡಿಗಳ ಹೂಳೆತ್ತುವ ಕಾರ್ಯ ಕೈಗೊಂಡು ನೀರು ಸರಾಗವಾಗಿ ಹರಿಯುವಂತೆ ನೋಡಿಕೊಳ್ಳಬೇಕು ಎಂದು ಸೂಚಿಸಿದರು.

ಡಾ. ರಾಜ್‌ಕುಮಾರ್ ರಸ್ತೆಯಲ್ಲಿ ನವರಂಗ್‌ನಿಂದ ಸ್ಟಾರ್ ಬಜಾರ್ ಸಿಗ್ನಲ್‌ವರೆಗೆ ನಡೆಯುತ್ತಿರುವ 1.8 ಕಿ.ಮೀ. ವೈಟ್ ಟಾಪಿಂಗ್ ಕಾಮಗಾರಿ ಅಕ್ಟೋಬರ್ ಅಂತ್ಯದೊಳಗೆ ಪೂರ್ಣಗೊಳ್ಳಲಿದೆ ಎಂದು ಅವರು ತಿಳಿಸಿದರು. ಪ್ರಸ್ತುತ ಒಂದು ಬದಿ ಕಾಮಗಾರಿ ಜುಲೈ ಅಂತ್ಯದೊಳಗೆ ಪೂರ್ಣಗೊಳಿಸಿ ಸಂಚಾರಕ್ಕೆ ಮುಕ್ತಗೊಳಿಸಲಾಗುವುದು ಎಂದು ಅವರು ಹೇಳಿದರು.

# ಇಂಟಿಗ್ರೇಷನ್ ಸೇವೆಗಳಿಗೆ ಅವಕಾಶ

ಬೆಂಗಳೂರು

ವಿಶ್ವದ ಅಗ್ರ ಕೃತಕ ಬುದ್ಧಿಮತ್ತೆ ಆಧಾರಿತ ಗ್ರಾಹಕ ಸಂಬಂಧ ನಿರ್ವಹಣಾ ಸಂಸ್ಥೆಯಾದ ಸೇಲ್ಸ್‌ಫೋರ್ಸ್, ಭಾರತದಲ್ಲಿ ತನ್ನ ಹೈಪರ್‌ಫೋರ್ಸ್ ತಂತ್ರಜ್ಞಾನದ ಸೇವೆಗಳನ್ನು ಮತ್ತಷ್ಟು ವಿಸ್ತರಿಸುತ್ತಿರುವುದಾಗಿ ಘೋಷಿಸಿದೆ. ಸಂಸ್ಥೆಯ ಮುಂದಿನ ತಲೆಮಾರಿನ ಅತ್ಯಾಧುನಿಕ ವೇದಿಕೆ ವಿನ್ಯಾಸವಾದ ಹೈಪರ್‌ಫೋರ್ಸ್‌ನಲ್ಲಿ ಶೀಘ್ರದಲ್ಲೇ ಮ್ಯೂಲ್‌ಸಾಫ್ಟ್ ಸೇವೆಗಳು ಲಭ್ಯವಾಗಲಿವೆ.

ಈ ಮಹತ್ವದ ಹೆಜ್ಜೆಯೊಂದಿಗೆ, ಹೈಪರ್‌ಫೋರ್ಸ್ ವೇದಿಕೆಯಲ್ಲಿ ಭಾರತಕ್ಕಾಗಿಯೇ ಪ್ರತ್ಯೇಕವಾಗಿ ಸಿದ್ಧಪಡಿಸಲಾದ ವ್ಯವಸ್ಥೆಯ ಮೂಲಕ ಮ್ಯೂಲ್‌ಸಾಫ್ಟ್ ಎನಿಪಾಯಿಂಟ್ ವೇದಿಕೆ ಕಾರ್ಯಾರಂಭ ಮಾಡಲಿದೆ. ಇದರಿಂದ ಭಾರತೀಯ ಸಂಸ್ಥೆಗಳು ತಮ್ಮ ಇಂಟಿಗ್ರೇಷನ್ ಕಾರ್ಯ ಗಳು, ಎಪಿಐ ನಿರ್ವಹಣೆ ಹಾಗೂ ಕೃತಕ ಬುದ್ಧಿಮತ್ತೆ ಆಧಾರಿತ ಸುಧಾರಿತ ಕಾರ್ಯವ್ಯವಸ್ಥೆಗಳನ್ನು ಅತ್ಯಂತ ಸುಲಭವಾಗಿ ಹಾಗೂ ದೊಡ್ಡ ಮಟ್ಟದಲ್ಲಿ ನಿರ್ವಹಿಸಬಹುದಾಗಿದೆ. ಇದರ ಪ್ರಮುಖ ವಿಶೇಷತೆಯೆಂದರೆ, ಸಂಸ್ಥೆಗಳ ಮಹತ್ವದ ಡೇಟಾವನ್ನು ದೇಶದೊಳಗೇ ಸುರಕ್ಷಿತವಾಗಿ ಸಂಗ್ರಹಿಸಿ ಪ್ರಕ್ರಿಯೆಗೊಳಿಸಲು ಅವಕಾಶ ದೊರೆಯುತ್ತದೆ.

ಇದು 2020ರಲ್ಲಿ ಭಾರತದಲ್ಲಿ ಆರಂಭಗೊಂಡ ಹೈಪರ್‌ಫೋರ್ಸ್ ಸೇವೆಯ ಮುಂದಿನ ಹಂತದ ವಿಸ್ತರಣೆಯಾಗಿದ್ದು, ದೇಶೀಯ ಸರ್ವರ್‌ಗಳನ್ನು ಹೊಂದಿರುವ ಕ್ಲೌಡ್ ತಂತ್ರಜ್ಞಾನವನ್ನು ಉತ್ತೇಜಿಸಲು ಸೇಲ್ಸ್‌ಫೋರ್ಸ್ ತೋರಿಸುತ್ತಿರುವ ಬದ್ಧತೆಯನ್ನು ಮತ್ತೊಮ್ಮೆ ಸ್ಪಷ್ಟಪಡಿಸಿದೆ.

ಭಾರತದಲ್ಲಿ ಡಿಜಿಟಲ್ ರೂಪಾಂತರ ವೇಗವಾಗಿ ಸಾಗುತ್ತಿರುವ ಸಂದರ್ಭದಲ್ಲಿ, ವಿವಿಧ ಜಾಲತಾಣಗಳು ಮತ್ತು ಸಾಫ್ಟ್‌ವೇರ್ ವ್ಯವಸ್ಥೆಗಳನ್ನು ದೊಡ್ಡ ಮಟ್ಟದಲ್ಲಿ ಜೋಡಿಸಲು ಸಂಸ್ಥೆಗಳಿಗೆ ಬಲಿಷ್ಠ ಇಂಟಿಗ್ರೇಷನ್ ಮೂಲಸೌಕರ್ಯದ ಅಗತ್ಯ ಹೆಚ್ಚಾಗಿದೆ. ವಿಶೇಷವಾಗಿ ಬ್ಯಾಂಕಿಂಗ್, ಆರೋಗ್ಯ ಹಾಗೂ ಸರ್ಕಾರಿ ವಲಯಗಳಂತಹ ಕಟ್ಟುನಿಟ್ಟಾದ ನಿಯಮಾವಳಿಗಳಿಗೆ ಒಳಪಟ್ಟಿರುವ ಸಂಸ್ಥೆಗಳಿಗೆ ಸ್ಥಳೀಯ ಡೇಟಾ ಸಂಗ್ರಹಣೆ ಮತ್ತು ನಿರ್ವಹಣೆ ಕಾನೂನುಬದ್ಧ ಅಗತ್ಯವಾಗಿದೆ.

# ಮೇಕೆದಾಟು- ಸುಪ್ರೀಂ ಕೋರ್ಟ್‌ಗೆ ಧನ್ಯವಾದ: ಡಿಸಿಎಂ

ನವದೆಹಲಿ

"ಮೇಕೆದಾಟು ಯೋಜನೆ ವಿಚಾರವಾಗಿ ತಮಿಳುನಾಡು ಸಲ್ಲಿಸಿದ್ದ ಪರಿಶೀಲನಾ ಅರ್ಜಿಯನ್ನು ಸುಪ್ರೀಂ ಕೋರ್ಟ್ ತ್ರಿಸದಸ್ಯ ಪೀಠ ವಜಾಗೊಳಿಸಿದೆ. ಇದು ಕರ್ನಾಟಕ ಪಾಲಿಗೆ ಶುಭಸುದ್ದಿ. ಕರ್ನಾಟಕ ರಾಜ್ಯದ ಜನರ ಪರವಾಗಿ ನಾವು ಸುಪ್ರೀಂ ಕೋರ್ಟ್‌ಗೆ ಧನ್ಯವಾದ ಅರ್ಪಿಸುತ್ತೇವೆ" ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ತಿಳಿಸಿದರು.

ದೆಹಲಿಯ ಕರ್ನಾಟಕ ಭವನದಲ್ಲಿ ಮಾಧ್ಯಮಗಳಿಗೆ ಶಿವಕುಮಾರ್ ಅವರು ಮಂಗಳವಾರ ಪ್ರತಿಕ್ರಿಯೆ ನೀಡಿದರು.

"ಸುಪ್ರೀಂ ಕೋರ್ಟ್ ಈ ಹಿಂದಿನ ಆದೇಶದಲ್ಲೇ ನಮಗೆ ಸ್ಪಷ್ಟ ಸೂಚನೆ ನೀಡಿದ್ದು ತಮಿಳುನಾಡಿನ ಪಾಲಿನ 177 ಟಿಎಂಸಿ ನೀರನ್ನು ಹರಿಸಬೇಕು ಎಂದು ಷರತ್ತು ವಿಧಿಸಿದೆ. ಈಗ ಈ ಯೋಜನೆ ಕುರಿತು ತೀರ್ಮಾನ ಮಾಡಬೇಕಿರುವುದು ಕೇಂದ್ರ ಸರ್ಕಾರ. ನಾವು ಪರಿಷ್ಕೃತ ಡಿಪಿಆರ್ ಸಲ್ಲಿಕೆ ಪ್ರಕ್ರಿಯೆಯಲ್ಲಿದ್ದೇವೆ" ಎಂದು ತಿಳಿಸಿದರು.



ಸತ್ಯಸಾಯಿ ಆಶ್ರಮಕ್ಕೆ ಭೇಟಿ ನೀಡಿದ ಬಿ.ಎಲ್. ಸಂತೋಷ್ ಅವರು ಭಗವಾನ್ ಸತ್ಯಸಾಯಿ ಬಾಬಾ ಅವರ ಸ್ಮೃತಿ ಸ್ಥಳಕ್ಕೆ ಗೌರವ ನಮನ ಸಲ್ಲಿಸಿದರು. ಭಕ್ತಿ, ಸೇವೆ ಹಾಗೂ ಆರೋಗ್ಯ ಸೇವೆಗಳ ಮೂಲಕ ವಿಶ್ವದಾದ್ಯಂತ ಕೋಟ್ಯಾಂತರ ಭಕ್ತರ ಮನಸೆಳೆದಿರುವ ಈ ಪವಿತ್ರ ಕ್ಷೇತ್ರವು ಪ್ರತಿವರ್ಷ ಲಕ್ಷಾಂತರ ಭಕ್ತರನ್ನು ತನ್ನತ್ತ ಆಕರ್ಷಿಸುತ್ತದೆ. ದೇಶ-ವಿದೇಶಗಳಿಂದ ಆಗಮಿಸುವ ಭಕ್ತರಿಗೆ ಆಧ್ಯಾತ್ಮಿಕ ಶಾಂತಿ ಹಾಗೂ ಸೇವಾ ಮನೋಭಾವದ ಸಂದೇಶವನ್ನು ಸಾರುತ್ತಿರುವ ಸತ್ಯಸಾಯಿ ಆಶ್ರಮವು ಮಾನವೀಯ ಮೌಲ್ಯಗಳ ಪ್ರತೀಕವಾಗಿ ಗುರುತಿಸಿಕೊಂಡಿದೆ ಎಂದಿದ್ದಾರೆ.



ರವೀಂದ್ರ ಕಲಾಕ್ಷೇತ್ರದಲ್ಲಿ ಮೇ 23ರಂದು ನಡೆದ ಆರ್ಯಭಟ ಪ್ರಶಸ್ತಿ ಸಮಾರಂಭದಲ್ಲಿ ಆರಳುಮಲ್ಲಿಗೆ ಪಾರ್ಥಸಾರಥಿ ಗುರೂಜಿ ಮುಖ್ಯ ಅತಿಥಿಯಾಗಿ ಭಾಗವಹಿಸಿದರು. ಈ ಸಂದರ್ಭದಲ್ಲಿ ಆರ್ಯಭಟರ ವೈಜ್ಞಾನಿಕ ಸಾಧನೆಗಳು, ಭಾರತೀಯ ಜ್ಞಾನ ಪರಂಪರೆ ಹಾಗೂ ಗಣಿತ-ಖಗೋಳ ವಿಜ್ಞಾನ ಕ್ಷೇತ್ರಕ್ಕೆ ಅವರ ಕೊಡುಗೆಗಳ ಕುರಿತು ಗುರೂಜಿಯವರು ನೀಡಿದ ಉಪನ್ಯಾಸ ಸಭಿಕರ ಮೇಲೆ ಅಪಾರ ಪ್ರಭಾವ ಬೀರಿತು. ಆರ್ಯಭಟರ ಚಿಂತನೆಗಳು ಇಂದಿನ ಪೀಳಿಗೆಗೆ ಹೇಗೆ ಪ್ರೇರಣೆಯಾಗಬೇಕು ಎಂಬುದನ್ನು ಸರಳ ಹಾಗೂ ಪರಿಣಾಮಕಾರಿ ಶೈಲಿಯಲ್ಲಿ ವಿವರಿಸಿದ ಗುರೂಜಿಯವರ ಮಾತುಗಳು ಜ್ಞಾನಾಸಕ್ತರ ಮನಸ್ಸಿನಲ್ಲಿ ವಿಶೇಷ ಛಾಪು ಮೂಡಿಸಿತು. ಸಮಾರಂಭದಲ್ಲಿ ಉಪಸ್ಥಿತರಿದ್ದ ಪ್ರಬುದ್ಧ ಪ್ರೇಕ್ಷಕರು ಉಪನ್ಯಾಸವನ್ನು ಮನಸಾರೆ ಮೆಚ್ಚಿ ಅಭಿನಂದಿಸಿದರು.

# 'ಫಿನೆರಿನೋನ್ ಮಾತ್ರೆ ಹಾಗೂ ವಯಸ್ಕರ ಲಸಿಕೆ ಸದುಪಯೋಗಪಡಿಸಿಕೊಳ್ಳಿ'

ಬೆಂಗಳೂರು

ಬೆಂಗಳೂರಿನ ಸರ್ ಸಿ ವಿ ರಾಮನ್ ಸಾರ್ವಜನಿಕ ಆಸ್ಪತ್ರೆಯಲ್ಲಿ ಆಯೋಜಿಸಿದ್ದ ಲಸಿಕಾ ಕಾರ್ಯಕ್ರಮ ಹಾಗೂ ವಿಶೇಷ ವಾರ್ಡ್ ಉದ್ಘಾಟನಾ ಸಮಾರಂಭದಲ್ಲಿ ಮಾತನಾಡಿದ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್, ಸಾರ್ವಜನಿಕ ಆಸ್ಪತ್ರೆಗಳಲ್ಲಿ ಅತ್ಯುತ್ತಮ ಸೌಲಭ್ಯಗಳನ್ನು ಒದಗಿಸುವುದು ಸರ್ಕಾರದ ಆದ್ಯತೆಯಾಗಿದೆ ಎಂದು ತಿಳಿಸಿದರು.

ಆಸ್ಪತ್ರೆಯಲ್ಲಿ ಒಳರೋಗಿಗಳ ಸಂಖ್ಯೆ ಹೆಚ್ಚಿರುವ ಹಿನ್ನೆಲೆ ಸಾರ್ವಜನಿಕರ ಬೇಡಿಕೆಯಂತೆ 5 ವಿಶೇಷ ವಾರ್ಡ್ ಹಾಗೂ 7 ಅರ್ಧ ವಿಶೇಷ ವಾರ್ಡ್ ಸೌಲಭ್ಯಗಳನ್ನು ಆರಂಭಿಸಲಾಗಿದೆ ಎಂದು ಹೇಳಿದರು.



ಟೈಪ್-2 ಮಧುಮೇಹ ಹೊಂದಿರುವ ರೋಗಿಗಳಿಗೆ ಕಿಡ್ನಿ, ಹೃದಯ ಹಾಗೂ ಕಣ್ಣಿನ ರೆಟಿನಾ ಸಮಸ್ಯೆಗಳು ಕಾಣಿಸಿಕೊಳ್ಳುವುದು ಸಾಮಾನ್ಯವಾಗಿದ್ದು, ಈ ಬಗ್ಗೆ ಹಲವರಿಗೆ ಸರಿಯಾದ ಅರಿವು ಇಲ್ಲ ಎಂದು ಅವರು ಹೇಳಿದರು. ಫಿನೆರಿನೋನ್ ಮಾತ್ರೆಯನ್ನು ನಿಯಮಿತವಾಗಿ ಸೇವಿಸುವುದರಿಂದ ಹೃದಯ ಸಂಬಂಧಿತ ಮರಣ ಪ್ರಮಾಣ ಹಾಗೂ ಕಿಡ್ನಿ ಸಮಸ್ಯೆಗಳನ್ನು ನಿಯಂತ್ರಿಸಲು ಸಾಧ್ಯವಾಗುತ್ತದೆ ಎಂದು ತಿಳಿಸಿದ ಅವರು, ಈ ಔಷಧಿಯನ್ನು ಸರ್ಕಾರ ಉಚಿತವಾಗಿ ನೀಡುತ್ತಿರುವುದರಿಂದ ಟೈಪ್-2 ಮಧುಮೇಹ ರೋಗಿಗಳು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಮನವಿ ಮಾಡಿದರು.

ಇದೇ ವೇಳೆ ಸಿಎಸ್‌ಆರ್ ಸಹಯೋಗದೊಂದಿಗೆ ವಯಸ್ಕರ ಲಸಿಕಾಕರಣ ಕಾರ್ಯಕ್ರಮಕ್ಕೂ ಚಾಲನೆ ನೀಡಲಾಯಿತು. 65 ವರ್ಷ ಮೇಲ್ಪಟ್ಟವರು ನ್ಯೂಮೋಕೋಕಲ್ ಲಸಿಕೆ ಪಡೆದುಕೊಳ್ಳಬೇಕು ಎಂದು ತಿಳಿಸಿದ ಸಚಿವರು, ಇದು ಸೋಂಕುಜನ್ಯ ರೋಗಗಳನ್ನು ತಡೆಗಟ್ಟಲು ಸಹಕಾರಿಯಾಗಲಿದೆ ಎಂದರು. ಹೃದಯ ಸಂಬಂಧಿತ ಕಾಯಿಲೆ ಹೊಂದಿರುವವರು ಹಾಗೂ ರೋಗನಿರೋಧಕ ಶಕ್ತಿ ಕಡಿಮೆ ಇರುವವರಿಗೆ ಈ ಲಸಿಕೆ ವಿಶೇಷವಾಗಿ ಉಪಯುಕ್ತವಾಗಲಿದೆ ಎಂದು ಹೇಳಿದರು.

ಫ್ಲೂ ಲಸಿಕೆಯನ್ನು 6 ತಿಂಗಳ ಮಗುಗಳಿಂದ 65 ವರ್ಷದವರೆಗಿನವರು ಪಡೆದುಕೊಳ್ಳಬಹುದಾಗಿದ್ದು, ಇದು 18 ವಿಧದ ವೈರಸ್‌ಗಳಿಂದ ರಕ್ಷಣೆ ನೀಡುತ್ತದೆ ಎಂದು ದಿನೇಶ್ ಗುಂಡೂರಾವ್ ತಿಳಿಸಿದರು. ಮುಂಗಾರು ಆರಂಭವಾಗುತ್ತಿರುವ ಈ ಸಂದರ್ಭದಲ್ಲಿ ಲಸಿಕೆ ಪಡೆದುಕೊಂಡರೆ ಹಲವಾರು ಶ್ವಾಸಕೋಶ ಹಾಗೂ ಸೋಂಕುಜನ್ಯ ರೋಗಗಳಿಂದ ರಕ್ಷಣೆ ಪಡೆಯಲು ಸಾಧ್ಯವಾಗುತ್ತದೆ ಎಂದು ಹೇಳಿದರು. ಇದರಿಂದ ಆಸ್ಪತ್ರೆಗೆ ದಾಖಲಾಗುವ ಪ್ರಕರಣಗಳ ಸಂಖ್ಯೆಯೂ ಕಡಿಮೆಯಾಗಲಿದೆ ಎಂದು ಅಭಿಪ್ರಾಯಪಟ್ಟರು.

ಕಾರ್ಯಕ್ರಮದ ಬಳಿಕ ಸಚಿವರು ಆಸ್ಪತ್ರೆಯ ವಿವಿಧ ವಿಭಾಗಗಳಿಗೆ ಭೇಟಿ ನೀಡಿ ರೋಗಿಗಳು ಹಾಗೂ ಅವರ ಸಂಬಂಧಿಕರೊಂದಿಗೆ ಸೌಲಭ್ಯಗಳು ಮತ್ತು ಚಿಕಿತ್ಸೆಯ ಕುರಿತು ಸಮಾಲೋಚನೆ ನಡೆಸಿದರು. ಶೀಘ್ರದಲ್ಲೇ ಎಂಆರ್‌ಐ ಸೇರಿದಂತೆ ಹಲವು ಹೊಸ ಸೌಲಭ್ಯಗಳನ್ನು ಕಲ್ಪಿಸಲಾಗುವುದು ಹಾಗೂ ಅಗತ್ಯ ಸಿಬ್ಬಂದಿ ನೇಮಕಾತಿಯನ್ನೂ ಮಾಡಲಾಗುವುದು ಎಂದು ಭರವಸೆ ನೀಡಿದರು.

# ಬೀದಿ ನಾಯಿಗಳಿಗೆ ಆಹಾರ ನೀಡುವ ಕುರಿತು ಮಾರ್ಗಸೂಚಿ ಜಾರಿ

ಬೆಂಗಳೂರು

ಉತ್ತರ ನಗರ ಪಾಲಿಕೆ ವ್ಯಾಪ್ತಿಯಲ್ಲಿ ಸಾರ್ವಜನಿಕ ಸುರಕ್ಷತೆ, ಆರೋಗ್ಯ ಹಾಗೂ ಪ್ರಾಣಿ ಕಲ್ಯಾಣದ ಸಮತೋಲನ ಕಾಪಾಡುವ ಉದ್ದೇಶದಿಂದ ಬೀದಿ ನಾಯಿಗಳಿಗೆ ಆಹಾರ ನೀಡುವ ಕುರಿತು ಹೊಸ ಮಾರ್ಗಸೂಚಿಗಳನ್ನು ಜಾರಿಗೊಳಿಸಲಾಗಿದೆ. ಸರ್ವೋಚ್ಚ ನ್ಯಾಯಾಲಯದ ಆದೇಶಗಳು, ಪ್ರಾಣಿ ಕ್ರೌರ್ಯ ತಡೆ ಕಾಯ್ದೆ-1960 ಹಾಗೂ ಅನಿಮಲ್ ಬರ್ತ್ ಕಂಟ್ರೋಲ್ ನಿಯಮಗಳು-2023 ಅನ್ವಯ ಈ ಕ್ರಮ ಕೈಗೊಳ್ಳಲಾಗಿದೆ ಎಂದು ಪಾಲಿಕೆ ಆಯುಕ್ತ ಪೊಮ್ಮಲ ಸುನೀಲ್ ಕುಮಾರ್ ತಿಳಿಸಿದ್ದಾರೆ.

ನಗರ ಪ್ರದೇಶಗಳಲ್ಲಿ ಬೀದಿ ನಾಯಿಗಳಿಗೆ ಆಹಾರ ನೀಡುವುದು ಸಂಪೂರ್ಣ ನಿಷೇಧಿತವಲ್ಲ. ಆದರೆ ಆಹಾರ ನೀಡುವ ಪ್ರಕ್ರಿಯೆಯಿಂದ ಸಾರ್ವಜನಿಕರಿಗೆ ತೊಂದರೆ, ಅಸ್ವಚ್ಛತೆ, ವಾಹನ ಸಂಚಾರಕ್ಕೆ ಅಡಚಣೆ ಹಾಗೂ ಮಕ್ಕಳ ಮತ್ತು ಹಿರಿಯ ನಾಗರಿಕರ ಸುರಕ್ಷತೆಗೆ ಧಕ್ಕೆಯಾಗಬಾರದು ಎಂಬುದನ್ನು ನ್ಯಾಯಾಲಯಗಳು ಸ್ಪಷ್ಟಪಡಿಸಿರುವ ಹಿನ್ನೆಲೆಯಲ್ಲಿ ಈ ಮಾರ್ಗಸೂಚಿ ಜಾರಿಗೊಳಿಸಲಾಗಿದೆ.

ಪ್ರಾಣಿ ಪ್ರೇಮಿಗಳು, ಸ್ವಯಂಸೇವಕರು ಹಾಗೂ ಸಂಘ ಸಂಸ್ಥೆಗಳು ಸಾರ್ವಜನಿಕ ರಸ್ತೆ, ಪಾದಚಾರಿ ಮಾರ್ಗ, ಬಸ್ ನಿಲ್ದಾಣ, ಮಾರುಕಟ್ಟೆ ಪ್ರದೇಶ, ಶಾಲೆ, ಕಾಲೇಜು, ಆಸ್ಪತ್ರೆ, ಅಂಗನವಾಡಿ, ಧಾರ್ಮಿಕ ಸ್ಥಳಗಳು, ಕ್ರೀಡಾಂಗಣ ಮತ್ತು ಮಕ್ಕಳ ಆಟದ ಮೈದಾನಗಳಂತಹ ಜನಸಂಚಾರ ಹೆಚ್ಚಿರುವ ಪ್ರದೇಶಗಳಲ್ಲಿ ನಾಯಿಗಳಿಗೆ ಆಹಾರ ನೀಡಬಾರದು ಎಂದು ಸೂಚಿಸಲಾಗಿದೆ. ಸಾರ್ವಜನಿಕರಿಗೆ ಹಾಗೂ ವಾಹನ ಸಂಚಾರಕ್ಕೆ ತೊಂದರೆ ಆಗದ ಸ್ಥಳಗಳನ್ನು ಗುರುತಿಸಿ ಸಂಬಂಧಿತ ವಲಯ ಕಚೇರಿ ಅಥವಾ ಪಶುಪಾಲನಾ ವಿಭಾಗದ ಗಮನಕ್ಕೆ ತರಲು ಮನವಿ ಮಾಡಲಾಗಿದೆ.



ನಗರ ಪಾಲಿಕೆಯ ಅಧಿಕಾರಿಗಳು ಸ್ಥಳ ಪರಿಶೀಲನೆ ನಡೆಸಿ ಸಾರ್ವಜನಿಕ ಹಿತಾಸಕ್ತಿ, ಸುರಕ್ಷತೆ, ಸ್ವಚ್ಛತೆ, ವಾಹನ ಸಂಚಾರದ ಮೇಲೆ ಪರಿಣಾಮ, ಸ್ಥಳೀಯ ನಿವಾಸಿಗಳ ಅಭಿಪ್ರಾಯ ಹಾಗೂ ಸಾರ್ವಜನಿಕ ಶಾಂತಿ ಸುವ್ಯವಸ್ಥೆ ಮೊದಲಾದ ಅಂಶಗಳನ್ನು ಪರಿಗಣಿಸಿ ಮಾತ್ರ ಅಧಿಕೃತ "ಫೀಡಿಂಗ್ ಸ್ಪಾಟ್"ಗಳಿಗೆ ಅನುಮೋದನೆ ನೀಡಲಿದ್ದಾರೆ.

ಅನುಮೋದಿತ ಸ್ಥಳಗಳಲ್ಲಿ ನಿಗದಿತ ಸಮಯದಲ್ಲಿ ಮಾತ್ರ ಆಹಾರ ನೀಡಬೇಕು. ಉಳಿದ ಆಹಾರ, ಪ್ಲಾಸ್ಟಿಕ್ ಮತ್ತು ತ್ಯಾಜ್ಯವನ್ನು ತೆರವುಗೊಳಿಸಿ ಸ್ಥಳವನ್ನು ಸ್ವಚ್ಛವಾಗಿಡಬೇಕು. ಸಾರ್ವಜನಿಕ ರಸ್ತೆ ಅಥವಾ ಪಾದಚಾರಿ ಮಾರ್ಗ ತಡೆದು ಆಹಾರ ನೀಡಬಾರದು ಹಾಗೂ ನಾಯಿಗಳು ಗುಂಪುಗೂಡಿ ಸಾರ್ವಜನಿಕರಿಗೆ ಭಯ ಅಥವಾ ತೊಂದರೆ ಉಂಟಾಗದಂತೆ ನೋಡಿಕೊಳ್ಳಬೇಕು ಎಂದು ಸೂಚಿಸಲಾಗಿದೆ.

# ರಾಜ್ಯಾದ್ಯಂತ 150 ನೂತನ ನಾಡ ಕಛೇರಿಗಳ ನಿರ್ಮಾಣಕ್ಕೆ ಸರ್ಕಾರ ಅಂಕಿತ



ಬೆಂಗಳೂರು

ಕರ್ನಾಟಕ ಕಂದಾಯ ಇಲಾಖೆ ವ್ಯಾಪ್ತಿಯಲ್ಲಿ ರಾಜ್ಯಾದ್ಯಂತ ಕಾರ್ಯನಿರ್ವಹಿಸುತ್ತಿರುವ ನಾಡ ಕಛೇರಿಗಳಿಗೆ ಸುಸಜ್ಜಿತ ಮೂಲಸೌಕರ್ಯ ಒದಗಿಸುವ ನಿಟ್ಟಿನಲ್ಲಿ ಸರ್ಕಾರ ಮಹತ್ವದ ನಿರ್ಧಾರ ಕೈಗೊಂಡಿದೆ. ರಾಜ್ಯದಲ್ಲಿ ಪ್ರಸ್ತುತ 771 ಹೋಬಳಿ ಮಟ್ಟದ ನಾಡ ಕಛೇರಿಗಳು ಕಾರ್ಯನಿರ್ವಹಿಸುತ್ತಿದ್ದು, ಸಾರ್ವಜನಿಕರು ವಿವಿಧ ದಾಖಲೆಗಳು, ಪ್ರಮಾಣ ಪತ್ರಗಳು ಸೇರಿದಂತೆ ಒಟ್ಟು 54 ಸೇವೆಗಳನ್ನು ಪಡೆಯಲು ಪ್ರತಿದಿನ ಹೆಚ್ಚಿನ ಸಂಖ್ಯೆಯಲ್ಲಿ ಭೇಟಿ ನೀಡುತ್ತಿದ್ದಾರೆ.

ಇದಲ್ಲದೆ ಉಪ ತಹಶೀಲ್ದಾರ್, ಕಂದಾಯ ನಿರೀಕ್ಷಕರು ಹಾಗೂ ಗ್ರಾಮ ಆಡಳಿತ ಅಧಿಕಾರಿಗಳ ಕಚೇರಿಗಳಲ್ಲಿಯೂ ಸಾರ್ವಜನಿಕರ ಓಡಾಟ ಹೆಚ್ಚಿದ್ದು, ಸರ್ಕಾರ ಮತ್ತು ಜನರ ನಡುವೆ ಪ್ರಮುಖ ಕೊಂಡಿಯಾಗಿ ನಾಡ ಕಛೇರಿಗಳು ಕಾರ್ಯನಿರ್ವಹಿಸುತ್ತಿವೆ. ಆದರೆ ಅನೇಕ ಕಡೆಗಳಲ್ಲಿ ಸ್ವಂತ ಕಟ್ಟಡಗಳ ಕೊರತೆ ಇದ್ದು, ಕೆಲವು ಕಚೇರಿಗಳು ಹಳೆಯ ಹಾಗೂ ಶಿಥಿಲಾವಸ್ಥೆಯ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿರುವುದರಿಂದ ಸಾರ್ವಜನಿಕರು ಮತ್ತು ಸಿಬ್ಬಂದಿ ತೊಂದರೆ ಅನುಭವಿಸುತ್ತಿದ್ದಾರೆ. ಈ ಪರಿಸ್ಥಿತಿಯನ್ನು ಮನಗಂಡು ಸರ್ಕಾರ ಸಾರ್ವಜನಿಕರಿಗೆ ಉತ್ತಮ ಸೇವೆ ಹಾಗೂ ಸಿಬ್ಬಂದಿಗೆ ಸುಸಜ್ಜಿತ ಕಚೇರಿ ಸೌಲಭ್ಯ ಕಲ್ಪಿಸುವ ಉದ್ದೇಶದಿಂದ ನೂತನ ಕಟ್ಟಡ ನಿರ್ಮಾಣಕ್ಕೆ ಮುಂದಾಗಿದೆ.

ಈಗಾಗಲೇ ಮೊದಲ ಹಂತದಲ್ಲಿ ಸ್ವಂತ ಕಟ್ಟಡವಿಲ್ಲದ ಹಾಗೂ ಹಳೆಯ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿರುವ 94 ನಾಡ ಕಛೇರಿಗಳ ನಿರ್ಮಾಣಕ್ಕೆ ಮಂಜೂರಾತಿ ನೀಡಲಾಗಿತ್ತು. ಇದೀಗ ಮತ್ತಷ್ಟು 56 ನಾಡ ಕಛೇರಿಗಳ ನಿರ್ಮಾಣಕ್ಕೂ ಅನುಮೋದನೆ ನೀಡಲಾಗಿದ್ದು, ಒಟ್ಟು 150 ನಾಡ ಕಛೇರಿಗಳಿಗೆ ನೂತನ ಕಟ್ಟಡ ನಿರ್ಮಿಸಲು ಸರ್ಕಾರ ತೀರ್ಮಾನಿಸಿದೆ. ಈ ಪರಿಸ್ಥಿತಿಯನ್ನು ಮನಗಂಡು ಸರ್ಕಾರ ಸಾರ್ವಜನಿಕರಿಗೆ ಉತ್ತಮ ಸೇವೆ ಹಾಗೂ ಸಿಬ್ಬಂದಿಗೆ ಸುಸಜ್ಜಿತ ಕಚೇರಿ ಸೌಲಭ್ಯ ಕಲ್ಪಿಸುವ ಉದ್ದೇಶದಿಂದ ನೂತನ ಕಟ್ಟಡ ನಿರ್ಮಾಣಕ್ಕೆ ಮುಂದಾಗಿದೆ.

ಈ ಹಿಂದೆ ನಾಡ ಕಛೇರಿ ಕಟ್ಟಡ ನಿರ್ಮಾಣಕ್ಕೆ ಕೇವಲ 18 ಲಕ್ಷ ರೂಪಾಯಿ ಅನುದಾನ ನೀಡಲಾಗುತ್ತಿತ್ತು. ಇದರಿಂದ ಸಮರ್ಪಕ ಹಾಗೂ ಸುಸಜ್ಜಿತ ಕಟ್ಟಡ ನಿರ್ಮಾಣ ಸಾಧ್ಯವಾಗುತ್ತಿರಲಿಲ್ಲ. ಹೀಗಾಗಿ ಸಾರ್ವಜನಿಕರ ಅಗತ್ಯಗಳನ್ನು ಗಮನದಲ್ಲಿಟ್ಟುಕೊಂಡು ಹೊಸ ವಿನ್ಯಾಸದ ಕಟ್ಟಡ ಮಾದರಿಯನ್ನು ರೂಪಿಸಲಾಗಿದೆ.

ನಗರ ಪ್ರದೇಶಗಳಲ್ಲಿ ಪ್ರತಿ ನಾಡ ಕಛೇರಿ ನಿರ್ಮಾಣಕ್ಕೆ 75 ಲಕ್ಷ ರೂಪಾಯಿ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ 55 ಲಕ್ಷ ರೂಪಾಯಿ ವೆಚ್ಚ ಮಂಜೂರು ಮಾಡಲಾಗಿದೆ. ಈ ಹೊಸ ಕಟ್ಟಡಗಳಿಂದ ಸಾರ್ವಜನಿಕರಿಗೆ ಉತ್ತಮ ಸೇವೆ ದೊರೆಯುವ ಜೊತೆಗೆ ಸಿಬ್ಬಂದಿಗೂ ಸೂಕ್ತ ಕಾರ್ಯ ವಾತಾವರಣ ಕಲ್ಪಿಸುವ ಉದ್ದೇಶ ಸರ್ಕಾರದ್ದಾಗಿದೆ ಎಂದು ಕಂದಾಯ ಸಚಿವ ಕೃಷ್ಣ ಬೈರೇಗೌಡ ತಿಳಿಸಿದ್ದಾರೆ.

# ಅಪಘಾತ; ಬಾಲಕ ದುರ್ಮರಣ, ನಾಲ್ವರಿಗೆ ಗಂಭೀರ ಗಾಯ

ಟೇಕಲ್

ಸಮೀಪದ ಲಕ್ಷ್ಮೀಸಾಗರ ಗ್ರಾಮದ ಬಳಿ ಇರುವ ಬೆಂಗಳೂರು-ಚೆನ್ನೈ ಎಕ್ಸ್‌ಪ್ರೆಸ್ ಹೆದ್ದಾರಿಯಲ್ಲಿ ಮಂಗಳವಾರ ಮಧ್ಯಾಹ್ನ ಸಂಭವಿಸಿದ ಭೀಕರ ರಸ್ತೆ ಅಪಘಾತದಲ್ಲಿ ಒಂಬತ್ತು ವರ್ಷದ ಬಾಲಕ ಸಾವನ್ನಪ್ಪಿದ್ದು, ನಾಲ್ವರು ಗಂಭೀರವಾಗಿ ಗಾಯಗೊಂಡಿದ್ದಾರೆ.

ಅತೀವೇಗದಿಂದ ಸಾಗುತ್ತಿದ್ದ ಇನ್ನೋವಾ ಕಾರು ಚಾಲಕನ ನಿಯಂತ್ರಣ ತಪ್ಪಿ ಡಿವೈಡರ್‌ಗೆ ಡಿಕ್ಕಿ ಹೊಡೆದ ಪರಿಣಾಮ ಈ ದುರ್ಘಟನೆ ಸಂಭವಿಸಿದೆ.

ಮೃತ ಬಾಲಕನನ್ನು ಮುಜಾಮಿಲ್ ಎಂದು ಗುರುತಿಸಲಾಗಿದೆ. ಬೆಂಗಳೂರಿನ ಒಂದೇ ಕುಟುಂಬದ ಸುಮಾರು ಏಳು ಮಂದಿ ಬಂಗಾರಪೇಟೆ ಕಡೆ ಪ್ರಯಾಣಿಸುತ್ತಿದ್ದ ವೇಳೆ ಈ ಅಪಘಾತ ಸಂಭವಿಸಿದೆ ಎಂದು ತಿಳಿದುಬಂದಿದೆ.

ಡಿವೈಡರ್‌ಗೆ ಡಿಕ್ಕಿ ಹೊಡೆದ ಬಳಿಕ ಇನ್ನೋವಾ ಕಾರು ಸುಮಾರು ಅರ್ಧ ಕಿಲೋಮೀಟರ್ ದೂರ ಮುಂದೆ ಸಾಗಿದ್ದು, ವಾಹನ ಸಂಪೂರ್ಣವಾಗಿ ಜಖಂಗೊಂಡಿದೆ.

ಅಪಘಾತದಲ್ಲಿ ಸೈಯದ್ ಉಲ್ಲಾ, ಸೈಯದ್ ಅನ್ವರ್, ಯಾಸ್ಮಿನ್ ಹಾಗೂ ಹಸಿಬಾ ಗಂಭೀರವಾಗಿ ಗಾಯಗೊಂಡಿದ್ದು, ಅವರನ್ನು ಕೋಲಾರ ಮತ್ತು ಬಂಗಾರಪೇಟೆ ಸರ್ಕಾರಿ ಆಸ್ಪತ್ರೆಗೆ ದಾಖಲಿಸಲಾಗಿದೆ. ಉಳಿದ ಪ್ರಯಾಣಿಕರು ಪ್ರಾಣಾಪಾಯದಿಂದ ಪಾರಾಗಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.

ಘಟನಾ ಸ್ಥಳಕ್ಕೆ ಮಾಸ್ತಿ ಪೊಲೀಸ್ ಠಾಣೆಯ ಪೊಲೀಸ್ ನಿರೀಕ್ಷಕ ಓಂ ಪ್ರಕಾಶ್ ಗೌಡ ಹಾಗೂ ಸಿಬ್ಬಂದಿ ಭೇಟಿ ನೀಡಿ ಪರಿಶೀಲನೆ ನಡೆಸಿದ್ದು, ಪ್ರಕರಣ ದಾಖಲಿಸಿಕೊಂಡು ಮುಂದಿನ ಕ್ರಮ ಕೈಗೊಂಡಿದ್ದಾರೆ.

ಇತ್ತೀಚಿನ ದಿನಗಳಲ್ಲಿ ಬೆಂಗಳೂರು-ಚೆನ್ನೈ ಹೆದ್ದಾರಿಯಲ್ಲಿ ಅಪಘಾತಗಳ ಸಂಖ್ಯೆ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಸಾರ್ವಜನಿಕರು ಆತಂಕ ವ್ಯಕ್ತಪಡಿಸಿದ್ದಾರೆ. ಹೆದ್ದಾರಿಯಲ್ಲಿ ಅತಿವೇಗ ನಿಯಂತ್ರಣಕ್ಕೆ ಸೂಕ್ತ ಕ್ರಮ ಕೈಗೊಳ್ಳಬೇಕು, ಭದ್ರತಾ ವ್ಯವಸ್ಥೆ ಬಲಪಡಿಸಬೇಕು ಹಾಗೂ ವಾಹನ ಸವಾರರಲ್ಲಿ ಜಾಗೃತಿ ಮೂಡಿಸಬೇಕು ಎಂದು ಸಾರ್ವಜನಿಕರು ಒತ್ತಾಯಿಸಿದ್ದಾರೆ.

# ವಿಧಾನಪರಿಷತ್ತಿನ ಏಳು ಸ್ಥಾನಗಳಿಗೆ ಜೂ.18ರಂದು ಚುನಾವಣೆ

ಬೆಂಗಳೂರು

ರಾಜ್ಯ ವಿಧಾನಪರಿಷತ್ತಿನ ದ್ವೈವಾರ್ಷಿಕ ಚುನಾವಣೆಗೆ, ಕೇಂದ್ರ ಚುನಾವಣಾ ಆಯೋಗ ವೇಳಾಪಟ್ಟಿ ಪ್ರಕಟಿಸಿದೆ.

ಕರ್ನಾಟಕದ ವಿಧಾನಸಭೆಯಿಂದ ವಿಧಾನ ಪರಿಷತ್ತಿನ ಏಳು ಸ್ಥಾನಗಳಿಗೆ ಜೂನ್ ಒಂದರಂದು ಅಧಿಸೂಚನೆ ಹೊರಬೀಳಲಿದ್ದು, ಜೂನ್ 18ರಂದು ಮತದಾನ ನಡೆಯಲಿದೆ.

ವಿಧಾನಪರಿಷತ್ತಿನ ಸದಸ್ಯರಾದ ಗೋವಿಂದರಾಜು, ನಸೀರ್ ಅಹಮದ್. ಎಂ.ಟಿ.ಬಿ. ನಾಗರಾಜು, ಪ್ರತಾಪ ಸಿಂಹ ನಾಯಕ್, ಕೆ. ತಿಪ್ಪಣ್ಣ, ಸುನಿಲ್ ವಲ್ಯಾಪುರ್ ಹಾಗೂ ಬಿ. ಕೆ. ಹರಿಪ್ರಸಾದ್ ಅವರ ಅವಧಿಯು ಜೂನ್ 30ರಂದು ಕೊನೆಗೊಳ್ಳಲಿದೆ.

ಅವರಿಂದ ತೆರವಾಗಲಿರುವ ಸ್ಥಾನಕ್ಕೆ ಚುನಾವಣೆ ಘೋಷಣೆಯಾಗಿದೆ. ನಾಮಪತ್ರ ಸಲ್ಲಿಕೆಗೆ ಜೂನ್ 8 ಕಡೆಯ ದಿನ. ಜೂನ್ 9ರಂದು ನಾಮಪತ್ರ ಪರಿಶೀಲನೆ ಹಾಗೂ ಉಮೇದುವಾರಿಕೆ ವಾಪಸ್ ಪಡೆಯಲು ಜೂನ್ 11 ಕಡೆಯ ದಿನವಾಗಿದೆ. ಮತದಾನ, ಜೂನ್ 18ರಂದು ನಡೆಯಲಿದ್ದು, ಅಂದೇ ಮತ ಎಣಿಕೆ ನಡೆದು ಫಲಿತಾಂಶ ಹೊರಬೀಳಲಿದೆ. ಕರ್ನಾಟಕದ 7 ಸ್ಥಾನಗಳ ಜೊತೆಗೆ ಬಿಹಾರದ 9 ಸ್ಥಾನಗಳಿಗೂ ಜೂನ್ 18ರಂದು ಮತದಾನ ನಡೆಯಲಿದೆ.

ವಿಧಾನಸಭೆಯಿಂದ ವಿಧಾನಪರಿಷತ್‌ಗೆ ನಡೆಯಲಿರುವ 7 ಸ್ಥಾನಗಳ ಚುನಾವಣೆಗೆ ಭಾರತೀಯ ಚುನಾವಣಾ ಆಯೋಗ ಅಧಿಸೂಚನೆ ಹೊರಡಿಸಿದ್ದು, ಜೂ.18ರಂದು ಮತದಾನ ನಡೆಯಲಿದೆ.

ವಿಧಾನಪರಿಷತ್‌ನ 7 ಸದಸ್ಯರ ಅಧಿಕಾರಾವಧಿ ಜೂ.30ಕ್ಕೆ ಕೊನೆಗೊಳ್ಳಲಿದ್ದು, ತೆರವಾಗಲಿರುವ ಈ ಸ್ಥಾನಕ್ಕೆ ಜೂ.18ರಂದು ಮತದಾನ ನಡೆದು ಅಂದೇ ಫಲಿತಾಂಶ ಪ್ರಕಟಗೊಳ್ಳಲಿದೆ. ಜೂ.1ರಂದು ಅಧಿಸೂಚನೆ ಹೊರಡಲಿದ್ದು, ಜೂ.8 ನಾಮಪತ್ರ ಸಲ್ಲಿಸಲು ಕೊನೆಯ ದಿನವಾಗಿದೆ. ಜೂ.9 ನಾಮಪತ್ರಗಳ ಪರಿಶೀಲನೆ ನಡೆದು, ನಾಮಪತ್ರ ಹಿಂಪಡೆಯಲು ಜೂ.11 ಕಡೆಯ ದಿನವಾಗಿದೆ.

ಜೂ.18ರಂದು ಬೆಳಗ್ಗೆ 9 ಗಂಟೆಯಿಂದ ಸಂಜೆ 4 ಗಂಟೆವರೆಗೆ ಮತದಾನ, 5 ಗಂಟೆ ನಂತರ ಮತ ಎಣಿಕೆ ನಡೆದು ಫಲಿತಾಂಶ ಪ್ರಕಟವಾಗಲಿದೆ. ವಿಧಾನಸಭೆಯಿಂದ ವಿಧಾನಪರಿಷತ್‌ಗೆ ನಡೆಯುವ ದ್ವೈವಾರ್ಷಿಕ ಚುನಾವಣೆಯಲ್ಲಿ ಮೇಲನೆಯ ಒಟ್ಟು 7 ಸದಸ್ಯರ ಅವಧಿ ಜೂ.30ಕ್ಕೆ ಕೊನೆಗೊಳ್ಳಲಿದೆ. ಬಿಜೆಪಿಯಿಂದ ನಾಲ್ವರು ಹಾಗೂ ಕಾಂಗ್ರೆಸ್‌ನಿಂದ ಮೂವರು ಸದಸ್ಯರ ಅಧಿಕಾರಾವಧಿ ಮುಕ್ತಾಯವಾಗಲಿದ್ದು, ಈ ಬಾರಿ ಚುನಾವಣೆಯಲ್ಲಿ ಕಾಂಗ್ರೆಸ್‌ಗೆ 4 ಸ್ಥಾನ ಹಾಗೂ ಬಿಜೆಪಿ-ಜೆಡಿಎಸ್ ಮೈತ್ರಿಕೂಟಕ್ಕೆ 3 ಸ್ಥಾನ ಲಭಿಸುವ ಸಾಧ್ಯತೆ ಇದೆ. ಈ ಚುನಾವಣೆಯಲ್ಲಿ ಬಿಜೆಪಿ -ಜೆಡಿಎಸ್ ಮೈತ್ರಿ ಮಾಡಿಕೊಂಡರೆ 3 ಸ್ಥಾನಗಳನ್ನು ಗೆಲ್ಲಬಹುದು.

# ಅವಿಭಕ್ತ ಕುಟುಂಬವೇ ಅಂತಿಮ ಪರಿಹಾರ

ಮೈಸೂರು

ಬಹುತೇಕ ಜನರನ್ನು ಇಂದು ಕಾಡುತ್ತಿರುವ ಸಮಸ್ಯೆಗಳಿಗೆ ಅವಿಭಕ್ತ ಕುಟುಂಬ ಪದ್ಧತಿಯೇ ಅಂತಿಮ ಪರಿಹಾರವಾಗಿದೆ ಎಂದು ಶ್ರೀಮನ್ ಮಧ್ವಾಚಾರ್ಯ ಮೂಲ ಮಹಾಸಂಸ್ಥಾನ ಉತ್ತರಾದಿ ಮಠದ ಶ್ರೀ ಸತ್ಯಾತ್ಮ ತೀರ್ಥ ಸ್ವಾಮೀಜಿ ಹೇಳಿದರು.

ಅಧಿಕ ಜ್ಯೇಷ್ಠ ಮಾಸದ ಅಂಗವಾಗಿ ಉತ್ತರಾದಿ ಮಠವು ಅಗ್ರಹಾರದ ಕಾಶಿ ವಿಶ್ವೇಶ್ವರ ಸನ್ನಿಧಿ ಆವರಣದ ಬೃಹತ್ ವೇದಿಕೆಯಲ್ಲಿ ಹಮ್ಮಿಕೊಂಡಿರುವ ಧರ್ಮ ಸಭೆಯಲ್ಲಿ ಅವರು ಭಾಗವತ ಸಂದೇಶ ನೀಡಿದರು.

ತಂದೆ- ತಾಯಿ, ಸಹೋದರ ಮತ್ತು ಸಹೋದರಿಯರು ಒಟ್ಟಾಗಿ ಬದುಕಬೇಕು. ವಿವಾಹವಾದ ನಂತರ ಅತ್ತೆ-ಮಾವಂದಿರನ್ನು ವೃದ್ಧಾಶ್ರಮಕ್ಕೆ ಕಳಿಸುವ ಕೃತ್ಯಕ್ಕೆ ಯಾರೂ ಮುಂದಾಗಬಾರದು ಎಂದು ಅವರು ಹೇಳಿದರು. ದೇವರು ಪ್ರತಿಮೆಯಲ್ಲಿ, ಗುಡಿಯಲ್ಲಿ ಇದ್ದಾನೆ ಎಂಬ ಉನ್ನತ ಭಾವ ಸತ್ಯ. ಅದರಂತೆ ಹಿರಿಯರ ಸೇವೆಯಲ್ಲೂ ಇದ್ದಾನೆ. ಯಾವ ಕುಟುಂಬದಲ್ಲಿ ಹಿರಿಯರಿಗೆ, ವೃದ್ಧರಿಗೆ ನೆಮ್ಮದಿ ಮತ್ತು ಶಾಂತಿ ಇಲ್ಲವೋ ಅವರ ಮುಂದಿನ ಪೀಳಿಗೆ ನೂರೆಂಟು ಸಮಸ್ಯೆಗಳಿಂದ ನರಳುವುದು ಖಚಿತ ಎಂದು ಶ್ರೀಗಳು ಎಚ್ಚರಿಸಿದರು.




ಅನೇಕ ಯುವ ದಂಪತಿಗಳು ತಮಗೆ ಸಂತಾನ ಆಗಿಲ್ಲ ಎಂದು ದೇವರಲ್ಲಿ ಬೇಡುತ್ತಾರೆ. ನಮ್ಮಲ್ಲಿ ಬಂದು ಅನುಗ್ರಹ ಮಂತ್ರಾಕ್ಷತೆ ಪಡೆಯುತ್ತಾರೆ. ಅದಕ್ಕೆಲ್ಲ ಕೆಲವು ಸಮಸ್ಯೆ ಮತ್ತು ವೈದ್ಯಕೀಯ ಪರಿಹಾರಗಳು ಇರಬಹುದು. ಆದರೆ ಮೂಲದಲ್ಲಿ ಕುಟುಂಬ ವ್ಯವಸ್ಥೆ ಸುಗಮವಾಗಿ, ಸೌಹಾರ್ದವಾಗಿ ಇರಬೇಕು. ನಮ್ಮ ಭಾಗವತ, ಮಹಾಭಾರತ ಮತ್ತು ರಾಮಾಯಣಗಳೂ ಇದನ್ನೇ ಪ್ರತಿಪಾದಿಸಿವೆ ಎಂದು ಸ್ವಾಮೀಜಿ ನುಡಿದರು.

ಕಿರಿಯರಲ್ಲೂ ದೇವರಿದ್ದಾನೆ:

ಮನೆಯ ಹಿರಿಯರು ಸೊಸೆಯನ್ನು ಮಗಳಂತೆ ಕಾಣಬೇಕು. ಕಿರಿಯರಲ್ಲೂ ದೇವರು ಇದ್ದಾನೆ ಎಂದು ಪ್ರೀತಿ ಭಾವ ತೋರಬೇಕು. ಒಂದೇ ಮನೆಯಲ್ಲಿ ಒಗ್ಗಟ್ಟಿನಿಂದ ಬದುಕಿದರೆ ಯಾವ ಯತಿಗಳ ಮಂತ್ರಾಕ್ಷತೆಯೂ ಬೇಡ. ನಿಮ್ಮ ನಿಮ್ಮ ಸಮಸ್ಯೆಗೆ ನಿಮ್ಮ ಕುಟುಂಬದ ಪ್ರತಿಯೊಬ್ಬರೂ ಸ್ಪಂದಿಸುತ್ತಾರೆ. ಇದು ಭಾರತೀಯ ಜೀವನ ಶೈಲಿ ಎಂದು ಅವರು ವಿವರಿಸಿದರು.

ಹಿರಿಯರು, ಕಿರಿಯರು ಅನೇಕ ತಪ್ಪುಗಳನ್ನು ಮಾಡಬಹುದು. ಅವೆಲ್ಲವೂ ಬದುಕಿನಲ್ಲಿ ಸಹಜ. ಪರಸ್ಪರ ಕ್ಷಮಾ ಭಾವನೆ, ಹೊಂದಾಣಿಕೆ, ಅಭಿಮಾನ ಗುಣ ರೂಢಿಸಿಕೊಂಡರೆ ಅಲ್ಲೇ ಒಮ್ಮತ ಮೂಡುತ್ತದೆ. ಕ್ಷಣಿಕವಾಗಿರುವ ಜೀವನದಲ್ಲಿ ಎಲ್ಲದಕ್ಕೂ ಪ್ರತ್ಯೇಕತೆ, ಪ್ರೈವೇಸಿ ಎನ್ನಬಾರದು.

ಅವಿಭಕ್ತ ಕುಟುಂಬ ಪರಿಪಾಲನೆಯೇ ಭಾಗವತ ಗ್ರಂಥ ನೀಡುವ ಮಹತ್ತರ ಸಂದೇಶವಾಗಿದೆ ಎಂದು ಶ್ರೀ ಸತ್ಯಾತ್ಮ ತೀರ್ಥ ಸ್ವಾಮೀಜಿ ನುಡಿದರು.

ವಿದ್ವಾಂಸರಾದ ಕಲ್ಲಾಪುರ ಪವಮಾನಾಚಾರ್ಯ, ಅರುಣಾಚಾರ್ಯ, ಪ್ರವೀಣ ಆಚಾರ್ಯ, ಆತನೂರು ಭೀಮಸೇನಾಚಾರ್ಯ ಮತ್ತು ರವಿ ಆಚಾರ್ಯ ಮತ್ತಿಹಳ್ಳಿ ಅವರು 'ಸಮಗ್ರ ಕುಟುಂಬ ವ್ಯವಸ್ಥೆ' ಕುರಿತಾದ ಸಂವಾದ ಗೋಷ್ಠಿಯಲ್ಲಿ ಭಾಗವಹಿಸಿದ್ದರು.

ಮುಂಜಾನೆ ಶ್ರೀಗಳಿಗೆ ಪಾದಪೂಜೆ, ಮುದ್ರಾಧಾರಣೆ, ವಾಸುದೇವ ಮೂರ್ತಿ ಮತ್ತು ತಂಡದವರಿಂದ ಸಚ್ಛಾಸ್ತ್ರ ಪಾರಾಯಣ, ಶ್ರೀಗಳಿಂದ ಸಂಸ್ಥಾನ ಪೂಜೆ, ವಿವಿಧ ಹೋಮಗಳು ನೆರವೇರಿತು.

# ಕದಿರೇನಹಳ್ಳಿ ಅಂಡರ್‌ಪಾಸ್ ಜಲಾವೃತ ಸಮಸ್ಯೆಗೆ ಶಾಶ್ವತ ಪರಿಹಾರಕ್ಕೆ ಸೂಚನೆ

ಬೆಂಗಳೂರು

ಕದಿರೇನಹಳ್ಳಿ ಅಂಡರ್‌ಪಾಸ್ನಲ್ಲಿ ಮಳೆ ನೀರು ನಿಲ್ಲುತ್ತಿರುವ ಹಿನ್ನೆಲೆಯಲ್ಲಿ ಬೆಂಗಳೂರು ದಕ್ಷಿಣ ನಗರ ಪಾಲಿಕೆ ಅಭಿವೃದ್ಧಿ ವಿಭಾಗದ ಅಪರ ಆಯುಕ್ತ ಡಾ. ನವೀನ್ ಕುಮಾರ್ ರಾಜು ದಿಢೀರ್ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಕದಿರೇನಹಳ್ಳಿ ಕ್ರಾಸ್ ಹಾಗೂ ಯಲಚೇನಹಳ್ಳಿ ಕೆರೆ ಸಮೀಪದ ತ್ಯಾಜ್ಯ ವರ್ಗಾವಣೆ ಕೇಂದ್ರಗಳನ್ನೂ ಅವರು ಪರಿಶೀಲಿಸಿದರು.

ಇತ್ತೀಚಿನ ಭಾರಿ ಮಳೆಯಿಂದ ಅಂಡರ್‌ಪಾಸ್‌ನಲ್ಲಿ ನೀರು ನಿಂತು ವಾಹನ ಸಂಚಾರ ಸಂಪೂರ್ಣ ಅಸ್ತವ್ಯಸ್ತಗೊಂಡ ಹಿನ್ನೆಲೆ ಸ್ಥಳ ಪರಿಶೀಲನೆ ನಡೆಸಿದ ಅಪರ ಆಯುಕ್ತರು, ಮಳೆ ನೀರು ಸರಾಗವಾಗಿ ಹರಿದು ಹೋಗಲು ಶಾಶ್ವತ ಹಾಗೂ ಸಮರ್ಪಕ ಚರಂಡಿ ವ್ಯವಸ್ಥೆ ಕಲ್ಪಿಸುವಂತೆ ಸಂಬಂಧಿತ ಅಭಿಯಂತರರಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು. ಅಂಡರ್‌ಪಾಸ್ ಗೋಡೆಗಳಿಂದ ನೀರು ಸೋರಿಕೆಯಾಗುತ್ತಿರುವುದನ್ನು ತಡೆಗಟ್ಟಲು ತಾಂತ್ರಿಕ ಕ್ರಮ ಕೈಗೊಳ್ಳಬೇಕು ಎಂದು ಸೂಚಿಸಿದರು.



ಡ್ರೈನೇಜ್ ಪೈಪ್‌ಲೈನ್ ಅಳವಡಿಕೆಗಾಗಿ ರಸ್ತೆ ಅಗೆದಿರುವ

ಪ್ರದೇಶಗಳಲ್ಲಿ ತಕ್ಷಣ ಕಾಂಕ್ರೀಟ್ ಮರು-ಮೇಲ್ಮೈ ಕಾಮಗಾರಿ ನಡೆಸಿ ರಸ್ತೆ ದುರಸ್ತಿಪಡಿಸುವಂತೆ ಅಧಿಕಾರಿಗಳಿಗೆ ಆದೇಶಿಸಲಾಯಿತು.

ಬಳಿಕ ಕದಿರೇನಹಳ್ಳಿ ಅಂಡರ್‌ಪಾಸ್ ಸಮೀಪದ ಕಸ ವರ್ಗಾವಣೆ ಕೇಂದ್ರ ಹಾಗೂ ಯಲಚೇನಹಳ್ಳಿ ಕೆರೆ ಬಳಿಯ ತ್ಯಾಜ್ಯ ವಿಲೇವಾರಿ ಪ್ರದೇಶಕ್ಕೆ ಭೇಟಿ ನೀಡಿದ ಡಾ. ನವೀನ್ ಕುಮಾರ್ ರಾಜು ಅವರು, ತ್ಯಾಜ್ಯವನ್ನು ವ್ಯವಸ್ಥಿತವಾಗಿ ವರ್ಗಾವಣೆ ಮಾಡಲು ಅಗತ್ಯ ಕ್ರಮ ಕೈಗೊಳ್ಳುವಂತೆ ಸೂಚಿಸಿದರು. ಸಾರ್ವಜನಿಕರಿಗೆ ತೊಂದರೆ ಆಗದಂತೆ ಈ ಎರಡೂ ಪ್ರದೇಶಗಳಲ್ಲಿ ತಕ್ಷಣವೇ ಘನತ್ಯಾಜ್ಯ ನಿರ್ವಹಣೆಯ ದ್ವಿತೀಯ ದರ್ಜೆ ವರ್ಗಾವಣೆ ಕೇಂದ್ರಗಳನ್ನು ಸ್ಥಾಪಿಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಪರಿಶೀಲನೆ ವೇಳೆ ಪದ್ಮನಾಭನಗರ ವಿಭಾಗದ ಕಾರ್ಯಪಾಲಕ ಎಂಜಿನಿಯರ್ ಶ್ರೀನಿವಾಸ್, ಬಿಎಸ್‌ಡಬ್ಲ್ಯೂಎಂಎಲ್ ಸಹಾಯಕ ಪ್ರಧಾನ ವ್ಯವಸ್ಥಾಪಕಿ ಶ್ವೇತಾ ಸೇರಿದಂತೆ ಪಾಲಿಕೆಯ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

# ಡೀಸೆಲ್ ಬೆಲೆ ಹೆಚ್ಚಳಕ್ಕೆ ಮೋದಿ ರಾಜತಾಂತ್ರಿಕ ವೈಫಲ್ಯ ಕಾರಣ: ರಾಮಲಿಂಗಾರೆಡ್ಡಿ

ಬೆಂಗಳೂರು

ಭಾರತದ ಇತಿಹಾಸದಲ್ಲಿಯೇ ಹಿಂದೆಂದೂ ಕಾಣದ ರೀತಿಯಲ್ಲಿ ಡೀಸೆಲ್ ಬೆಲೆ ಗಗನಕ್ಕೇರಿದೆ. ಕಳೆದ 10 ದಿನಗಳಲ್ಲಿ ಡೀಸೆಲ್ ಬೆಲೆ ರೂ. 7.81 ಹೆಚ್ಚಾಗಿದೆ. ಇದರಿಂದ ವಾಹನಗಳ ಮಾಲೀಕರಿಗೆ ದುಪ್ಪಟ್ಟು ಹಣಕಾಸಿನ ದುಬ್ಬರ ಏರ್ಪಡಲಿದೆ. ಇದು ಪ್ರಧಾನಿ ನರೇಂದ್ರ ಮೋದಿಯವರ ಅಂತರರಾಷ್ಟ್ರೀಯ ರಾಜತಾಂತ್ರಿಕತೆಯ ಘೋರ ವೈಫಲ್ಯಕ್ಕೆ ಸಾಕ್ಷಿಯಾಗಿದೆ ಎಂದು ಸಾರಿಗೆ ಮತ್ತು ಮುಜರಾಯಿ ಸಚಿವರಾದ ರಾಮಲಿಂಗಾರೆಡ್ಡಿ ಅವರು ಹೇಳಿದ್ದಾರೆ.



ತಮ್ಮ ಮುಖಪುಟದಲ್ಲಿ ಈ ಕುರಿತು ಬರೆದಿರುವ ಅವರು, ಡೀಸೆಲ್ ಬೆಲೆ ಹೆಚ್ಚಳದ ಪರಿಣಾಮ ಕರ್ನಾಟಕ ರಾಜ್ಯ ಸಾರಿಗೆಗೆ ಹೆಚ್ಚುವರಿ ಹೊರೆ ಬೀಳುತ್ತಿದೆ. ತಿಂಗಳಿಗೆ ರೂ. 40 ಕೋಟಿಯಾದರೆ, ವಾರ್ಷಿಕವಾಗಿ ರೂ. 480 ಕೋಟಿ ಹಣ ಹೆಚ್ಚುವರಿಯಾಗಿ ಸಾರಿಗೆ ಇಲಾಖೆಗೆ ಹೊರೆ ಆಗುತ್ತಿದೆ. ಪಂಚ ಗ್ಯಾರಂಟಿಗಳ ಪೈಕಿ ಸ್ತ್ರೀಶಕ್ತಿ ಯೋಜನೆಗೆ ರಾಜ್ಯ ಸರ್ಕಾರ ಮುಂದಾಗಿದ್ದು, ಇದರಿಂದ ಮಹಿಳೆಯರಿಗೆ ಅನುಕೂಲವಾಗಿದೆ.

ಜಾಗತಿಕ ತೈಲ ಬಿಕ್ಕಟ್ಟು ನಿರ್ವಹಣೆಯಲ್ಲಿ ಕೇಂದ್ರದ ವಿಫಲತೆಯು ಸಾಮಾನ್ಯ ಜನರಿಗೆ ಉಚಿತ ಹಾಗೂ ಕೈಗೆಟುಕುವ ಸಾರಿಗೆ ನೀಡುತ್ತಿರುವ ಕರ್ನಾಟಕ ಸೇರಿದಂತೆ ಬಹುತೇಕ ರಾಜ್ಯ ಸರ್ಕಾರಗಳನ್ನು ಆರ್ಥಿಕವಾಗಿ ಕಂಗಾಲು ಮಾಡಿದೆ.

ಈ ದರ ಏರಿಕೆ ಕೇವಲ ಬಸ್ಸುಗಳಿಗಷ್ಟೇ ಸೀಮಿತವಾಗಿಲ್ಲ. ಇಡೀ ದೇಶದ ಸರಕು ಸಾಗಣೆಯ ಬೆನ್ನೆಲುಬಾಗಿರುವ ಸಾರಿಗೆ ಲಾರಿಗಳ ಮೇಲೂ ಇದು ಮಾರಕ ಹೊರೆ ಉಂಟುಮಾಡಿದೆ.

28/05/2026
ಭಾರತ ಸಾರಥಿ
BHARATHA SARATHI KANNADA DAILY NEWS PAPER
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com



ಮಧುಗಿರಿ ತಾಲೂಕಿನ ಕಂದಾಯ ಇಲಾಖೆಯ ಗ್ರಾಮ ಆಡಳಿತಾಧಿಕಾರಿ ಶರಣಪ್ಪ ಎನ್. ಗೋನಾಳ ಅವರು 2025-26ನೇ ಸಾಲಿನ ಸರ್ಕಾರಿ ನೌಕರರ ರಾಜ್ಯಮಟ್ಟದ ಕ್ರೀಡಾಕೂಟದಲ್ಲಿ ಬೆಸ್ಟ್ ಫಿಸಿಕ್ 65 ಕೆಜಿ ವಿಭಾಗದಲ್ಲಿ ದ್ವಿತೀಯ ಸ್ಥಾನ ಪಡೆದು ಸಾಧನೆ ಮಾಡಿದ್ದಾರೆ. ಈ ಸಾಧನೆಯ ಸಂತೋಷವನ್ನು ಅವರು ತಮ್ಮ ಕುಟುಂಬದೊಂದಿಗೆ ಹಂಚಿಕೊಂಡಿದ್ದಾರೆ. ಶರಣಪ್ಪ ಅವರ ಈ ಸಾಧನೆಗೆ ಉಪವಿಭಾಗಾಧಿಕಾರಿ ಗೊಟೂರು ಶಿವಪ್ಪ ಹಾಗೂ ತಹಶೀಲ್ದಾರ್ ಶ್ರೀನಿವಾಸ್ ಅವರು ಅಭಿನಂದನೆ ಸಲ್ಲಿಸಿದ್ದು, ಸಹೋದ್ಯೋಗಿಗಳು ಸಹ ಸಂತೋಷ ವ್ಯಕ್ತಪಡಿಸಿದ್ದಾರೆ.

# ಸಾರ್ವಜನಿಕರು ಜಾಗರೂಕರಾಗಿರಬೇಕು: ಪಿಎಸ್‌ಐ ಗುರುರಾಜ್ ಚಿಂತಕಲ್

ಬೂದಿಕೋಟೆ

ಇತ್ತೀಚಿನ ದಿನಗಳಲ್ಲಿ ಸಮಾಜದಲ್ಲಿ ಅಪರಾಧಗಳ ಸ್ವರೂಪ ಬದಲಾಗುತ್ತಿದ್ದು, ಸಾರ್ವಜನಿಕರು ಹೆಚ್ಚಿನ ಜಾಗರೂಕತೆ ವಹಿಸಬೇಕೆಂದು ಬೂದಿಕೋಟೆ ಪಿಎಸ್‌ಐ ಗುರುರಾಜ್ ಚಿಂತಕಲ್ ತಿಳಿಸಿದ್ದಾರೆ.

ಬೂದಿಕೋಟೆ ಪೊಲೀಸ್ ಠಾಣಾ ವ್ಯಾಪ್ತಿಯ ಕಾರಮಾನಹಳ್ಳಿ ಗ್ರಾಮದಲ್ಲಿ ಪೊಲೀಸ್ ಇಲಾಖೆ ವತಿಯಿಂದ ನಡೆದ ಜನಸಂಪರ್ಕ ಹಾಗೂ ಬೀಟ್ ಸಭೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ದ್ವಿಚಕ್ರ ವಾಹನ ಸವಾರರು ಕಡ್ಡಾಯವಾಗಿ ಹೆಲ್ಮೆಟ್ ಧರಿಸಬೇಕು. ಅಪ್ರಾಪ್ತ ವಯಸ್ಕರಿಗೆ ಯಾವುದೇ ಕಾರಣಕ್ಕೂ ವಾಹನ ಚಾಲನೆ ಮಾಡಲು ನೀಡಬಾರದು ಎಂದು ಹೇಳಿದರು. ಅತಿವೇಗ ಹಾಗೂ ಬೇಜವಾಬ್ದಾರಿ ಚಾಲನೆಯೇ ರಸ್ತೆ ಅಪಘಾತಗಳಿಗೆ ಪ್ರಮುಖ ಕಾರಣವಾಗಿದ್ದು, ನಿಯಮ ಪಾಲನೆಯ ಮೂಲಕ ಪ್ರಾಣಹಾನಿ ತಪ್ಪಿಸಬಹುದು ಎಂದು ಅವರು ತಿಳಿಸಿದರು.

ಇಂಟರ್ನೆಟ್ ಮತ್ತು ಮೊಬೈಲ್ ಬಳಕೆಯ ಹೆಚ್ಚಳದೊಂದಿಗೆ ಸೈಬರ್ ವಂಚನೆ ಪ್ರಕರಣಗಳು ಹೆಚ್ಚಾಗುತ್ತಿದ್ದು, ಲಾಟರಿ ಬಂದಿದೆ, ಕಡಿಮೆ ಬಡ್ಡಿಗೆ ಸಾಲ ನೀಡಲಾಗುವುದು ಎಂಬಂತಹ ಆಮಿಷಗಳಿಗೆ



ಸಾರ್ವಜನಿಕರು ಬಲಿಯಾಗಬಾರದು ಎಂದು ಎಚ್ಚರಿಸಿದರು. ಬ್ಯಾಂಕ್ ಖಾತೆ ವಿವರಗಳು ಹಾಗೂ ಒಟಿಪಿ ಮಾಹಿತಿಯನ್ನು ಯಾರಿಗೂ ಹಂಚಿಕೊಳ್ಳಬಾರದು. ವಂಚನೆಗೆ ಒಳಗಾದರೆ ತಕ್ಷಣ 1930 ಸಹಾಯವಾಣಿಗೆ ಕರೆ ಮಾಡಿ ದೂರು ದಾಖಲಿಸಬೇಕೆಂದು ಅವರು ತಿಳಿಸಿದರು.

ಮಾದಕ ವಸ್ತುಗಳ ಬಳಕೆ ಯುವ ಪೀಳಿಗೆಯನ್ನು ದಾರಿ ತಪ್ಪಿಸುತ್ತಿದ್ದು, ಇದು ವ್ಯಕ್ತಿಯ ಆರೋಗ್ಯ ಮಾತ್ರವಲ್ಲದೆ ಇಡೀ ಕುಟುಂಬದ ನೆಮ್ಮದಿಯನ್ನೂ ಹಾಳುಮಾಡುತ್ತದೆ ಎಂದು ಅವರು ಹೇಳಿದರು. ಪೋಷಕರು ತಮ್ಮ ಮಕ್ಕಳ ನಡೆನುಡಿಗಳ ಮೇಲೆ ನಿಗಾ ವಹಿಸಬೇಕು ಹಾಗೂ ಗ್ರಾಮದಲ್ಲಿ ಯಾವುದೇ ಅಕ್ರಮ ಚಟುವಟಿಕೆಗಳು ಕಂಡುಬಂದರೆ ತಕ್ಷಣ ಪೊಲೀಸರಿಗೆ ಮಾಹಿತಿ ನೀಡಬೇಕು ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಗ್ರಾಮ ಮುಖಂಡರು, ಯುವಕರು, ಮಹಿಳೆಯರು ಹಾಗೂ ಸ್ಥಳೀಯ ಬೀಟ್ ಪೊಲೀಸ್ ಸಿಬ್ಬಂದಿ ಉಪಸ್ಥಿತರಿದ್ದರು.

# ದುಗ್ಗಲಮ್ಮ ದೇವಿ ಜಾತ್ರಾ ಮಹೋತ್ಸವ



ದೊಡ್ಡಬಳ್ಳಾಪುರ

ನಗರದ ವೀರಭದ್ರನ ಪಾಳ್ಯದ ಗ್ರಾಮದೇವತೆಗಳಾದ ಶ್ರೀ ದುಗ್ಗಲಮ್ಮ ದೇವಿ ಹಾಗೂ ಶ್ರೀ ದುರ್ಗಮ್ಮ ದೇವಿ ಜಾತ್ರಾ ಮಹೋತ್ಸವ ಸೋಮವಾರದಿಂದ ಗುರುವಾರದ ವರೆಗೂ ಅದ್ದೂರಿಯಾಗಿ ನಡೆಯಲಿದೆ.

ಜಾತ್ರಾ ಮಹೋತ್ಸವದ ಅಂಗವಾಗಿ ಧಾರ್ಮಿಕ ಕಾರ್ಯಕ್ರಮಗಳು ನಡೆಯಲಿದ್ದು ಮೇ 25ರಂದು ಆಂಜನೇಯ ಸ್ವಾಮಿ ಹಾಗೂ ಮೈಲಾರ ಲಿಂಗೇಶ್ವರ ಸ್ವಾಮಿಗೆ ಆರತಿಗಳು ನಡೆಯಲಿವೆ. 26ರಂದು ಬೆಳಿಗ್ಗೆ 10 ಗಂಟೆಗೆ ಮಾರಮ್ಮ ದೇವತೆ ಆಗಮನವಾಗಲಿದ್ದು, ಮದ್ಯಾಹ್ನ 12 ಗಂಟೆಗೆ ದೊಡ್ಡಬಳ್ಳಾಪುರ ನಗರ ದೇವತೆ ಮುತ್ಯಾಲಮ್ಮ ದೇವಿಗೆ ಆರತಿಗಳು ನಡೆಯಲಿದ್ದು ನಂತರ ಸಂಜೆ ಗ್ರಾಮದೇವತೆಯನ್ನು ಕರೆತರಲಾಗುವುದು.

ರಾತ್ರಿ 10 ಗಂಟೆಗೆ ದುರ್ಗಮ್ಮ ದೇವಿ ಹಾಗೂ ದುಗ್ಗಲಮ್ಮ ದೇವಿಗೆ ಆರತಿ ಹಾಗೂ ಪೂಜಾ ಕಾರ್ಯಕ್ರಮವಿರುತ್ತದೆ.27 ರಂದು ಬೆಳಿಗ್ಗೆ 8ಗಂಟೆಗೆ ಎಲ್ಲಮ್ಮ ದೇವಿಗೆ ಆರತಿಗಳು ನಡೆಯಲಿವೆ. 28 ರಂದು ಮದ್ಯಾಹ್ನ ದುಗ್ಗಲಮ್ಮ ದೇವಿ ಹಾಗೂ ದುರ್ಗಮ್ಮ ದೇವಿಯ ಉತ್ಸವ ವೈಭವದಿಂದ ನಡೆಯಲಿದೆ ಎಂದು ಜಾತ್ರಾ ಸಮಿತಿಯವರು ತಿಳಿಸಿದ್ದಾರೆ.

# ಬೆಲೆ ಏರಿಕೆಗೆ ಮುಂದಾದ ಲಾರೀ ಮಾಲೀಕರು..!

ಬೆಂಗಳೂರು

ಕಳೆದ 10 ದಿನಗಳಲ್ಲಿ ಡೀಸೆಲ್ ದರವು ಒಟ್ಟು ರೂ.7.81 ಹಾಗೂ ಪೆಟ್ರೋಲ್ ದರ ರೂ.7.97 ಏರಿಕೆಯಾದ ಬೆನ್ನಲ್ಲೇ ಕರ್ನಾಟಕದ ಲಾರಿ ಮಾಲೀಕರು ಮತ್ತು ಸಾರಿಗೆ ಸಂಸ್ಥೆಗಳು ಸಾಗಣೆ ದರವನ್ನು ಕನಿಷ್ಠ ಶೇ.10ರಷ್ಟು ಹೆಚ್ಚಿಸುವ ಕುರಿತು ಚಿಂತನೆ ನಡೆಸಿದ್ದಾರೆಂದು ತಿಳಿದುಬಂದಿದೆ.

ಇದರಿಂದ ತರಕಾರಿ, ದಿನಸಿ ವಸ್ತುಗಳು, ಪ್ಲೈವುಡ್, ಕಬ್ಬಿಣ ಸೇರಿದಂತೆ ವಿವಿಧ ಅಗತ್ಯ ವಸ್ತುಗಳ ಬೆಲೆ ಏರಿಕೆಯಾಗುವ ಸಾಧ್ಯತೆ ಇದೆ.

ಇಂಧನ ದರ ಏರಿಕೆಯಿಂದ ಸಾಗಣೆ ವೆಚ್ಚ ಹೆಚ್ಚಾಗುತ್ತಿರುವ ಕಾರಣ ದರ ಹೆಚ್ಚಳ ಅನಿವಾರ್ಯವಾಗಿದೆ ಎಂದು ಸಾರಿಗೆ ವಲಯದ ಪ್ರತಿನಿಧಿಗಳು ಅಭಿಪ್ರಾಯಪಟ್ಟಿದ್ದಾರೆ.

ಜೂನ್ ಮೊದಲ ವಾರದಿಂದಲೇ ತರಕಾರಿ ಮತ್ತು ಕೃಷಿ ಉತ್ಪನ್ನಗಳ ಚಿಲ್ಲರೆ ಬೆಲೆಯಲ್ಲಿ ಪ್ರತಿ ಕೆಜಿಗೆ ಕನಿಷ್ಠ 50 ಪೈಸೆಯಷ್ಟು ಹೆಚ್ಚಳವಾಗುವ ಸಾಧ್ಯತೆ ಇದೆ ಎಂದು ಕೃಷಿ ವಲಯದ ಪ್ರತಿನಿಧಿಗಳು ಹೇಳಿದ್ದಾರೆ.

ಕರ್ನಾಟಕ ರಾಜ್ಯ ಲಾರಿ ಮಾಲೀಕರ ಹಾಗೂ ಏಜೆಂಟರ ಒಕ್ಕೂಟದ ಅಧ್ಯಕ್ಷ ಜಿ.ಆರ್. ಶಣ್ಮುಗಪ್ಪ ಮಾತನಾಡಿ, ಡೀಸೆಲ್ ದರ ಏರಿಕೆಯಾದಾಗ ಸಾಗಣೆ ವೆಚ್ಚವೂ ಸ್ವಯಂಚಾಲಿತವಾಗಿ ಹೆಚ್ಚಾಗುತ್ತದೆ. ಪ್ರಸ್ತುತ ಪರಿಸ್ಥಿತಿಯಲ್ಲಿ ಸಾಗಣೆ ದರ ಹೆಚ್ಚಳ ಹೊರತುಪಡಿಸಿ ಬೇರೆ ಮಾರ್ಗವಿಲ್ಲ ಎಂದು ಹೇಳಿದ್ದಾರೆ.

ಬುಧವಾರ ಸಾರಿಗೆ ಸಂಸ್ಥೆಗಳ ಸಭೆ ನಡೆಯಲಿದ್ದು, ಅದರಲ್ಲಿ ದರ ಹೆಚ್ಚಳದ ಪ್ರಮಾಣದ ಕುರಿತು ಅಂತಿಮ ನಿರ್ಧಾರ ಕೈಗೊಳ್ಳಲಾಗುತ್ತದೆ. ಇತ್ತೀಚಿನ ಡೀಸೆಲ್ ದರ ಏರಿಕೆಗೆ ಅನುಗುಣವಾಗಿ ಕನಿಷ್ಠ ಶೇ.10ರಷ್ಟು ಸಾಗಣೆ ದರ ಹೆಚ್ಚಳದ ಬಗ್ಗೆ ಚರ್ಚೆ ನಡೆಯುತ್ತಿದೆ ಎಂದು ತಿಳಿಸಿದ್ದಾರೆ.

# ಅಧ್ಯಕ್ಷರಾಗಿ ಎ. ಅಶೋಕ್ ಕುಮಾರ್ ಆಯ್ಕೆ

ಚಿಕ್ಕಬಳ್ಳಾಪುರ

ಜಿಲ್ಲಾ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘಕ್ಕೆ ನಡೆದ ಚುನಾವಣೆಯಲ್ಲಿ ಎ. ಅಶೋಕ್ ಕುಮಾರ್ ಅವರು ಜಿಲ್ಲಾಧ್ಯಕ್ಷರಾಗಿ ಆಯ್ಕೆಯಾಗಿದ್ದಾರೆ ಎಂದು ಚುನಾವಣಾಧಿಕಾರಿ ಮಂಜುಳಾ ಘೋಷಿಸಿದರು.

ಜಿಲ್ಲಾಧ್ಯಕ್ಷ ಸ್ಥಾನಕ್ಕೆ ಸ್ಪರ್ಧಿಸಿದ್ದ ಅಶೋಕ್ ಕುಮಾರ್ ಅವರು 38 ಮತಗಳನ್ನು ಪಡೆದು ಜಯಗಳಿಸಿದರೆ, ಪ್ರತಿಸ್ಪರ್ಧಿ ಡಿ.ಎಂ. ಶ್ರೀರಾಮ್ ಅವರು 19 ಮತಗಳನ್ನು ಪಡೆದು ಸೋಲು ಅನುಭವಿಸಿದರು. ಜಿಲ್ಲಾ ಕಾರ್ಯದರ್ಶಿ ಸ್ಥಾನಕ್ಕೆ ನಡೆದ ಚುನಾವಣೆಯಲ್ಲಿ ನಾಗರಾಜಪ್ಪ ಅವರು 37 ಮತಗಳನ್ನು ಪಡೆದು ವಿಜಯಿಯಾಗಿದ್ದು, ವಸಂತ್ ರೆಡ್ಡಿ ಅವರು 20 ಮತಗಳನ್ನು ಪಡೆದರು.

ಉಪಾಧ್ಯಕ್ಷ ಸ್ಥಾನಕ್ಕೆ ಸ್ಪರ್ಧಿಸಿದ್ದ ಚಂದ್ರಮ್ಮ ಅವರು 39 ಮತಗಳನ್ನು ಪಡೆದು ಆಯ್ಕೆಯಾಗಿದ್ದು, ಪ್ರೇಮಕುಮಾರಿ ಅವರು 18 ಮತಗಳನ್ನು ಪಡೆದು ಸೋಲುಂಡರು. ಖಜಾಂಚಿ ಸ್ಥಾನಕ್ಕೆ ರವಿಕುಮಾರ್ ಅವರು ಒಬ್ಬರೇ ನಾಮಪತ್ರ ಸಲ್ಲಿಸಿದ್ದರಿಂದ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ನೂತನ ಜಿಲ್ಲಾಧ್ಯಕ್ಷ ಎ. ಅಶೋಕ್ ಕುಮಾರ್ ಮಾತನಾಡಿ, ಮಕ್ಕಳ ಹಾಗೂ ಪೋಷಕರ ಹಿತದೃಷ್ಟಿಯಿಂದ ಶಿಕ್ಷಣ ಇಲಾಖೆಯನ್ನು ಮತ್ತಷ್ಟು ಬಲಪಡಿಸುವ ನಿಟ್ಟಿನಲ್ಲಿ ಸಂಘವನ್ನು ಮುನ್ನಡೆಸುವುದಾಗಿ ಹೇಳಿದರು. ಶಿಕ್ಷಕರ ಸಂಘವು ಲಾಭದಾಯಕ ಹುದ್ದೆಯಲ್ಲ, ಇದು ಜವಾಬ್ದಾರಿಯುತ ಸ್ಥಾನವಾಗಿದೆ. ಎಲ್ಲ ಶಿಕ್ಷಕರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಅವರ ಸಮಸ್ಯೆಗಳನ್ನು ಪರಿಹರಿಸಲು ಪ್ರಾಮಾಣಿಕವಾಗಿ ಕೆಲಸ ಮಾಡಲಾಗುವುದು ಎಂದು ಅವರು ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಬಾಗೇಪಲ್ಲಿ ಹನುಮಂತರೆಡ್ಡಿ, ಚಿಕ್ಕಬಳ್ಳಾಪುರ ತಾಲೂಕಿನ ಎಂ.ಆರ್. ಸುಬ್ಬಾರೆಡ್ಡಿ, ಸಿ.ವಿ. ವೆಂಕಟರಾಯಪ್ಪ, ಸುನೀಲ್ ಕುಮಾರ್, ಶಿಡ್ಲಘಟ್ಟ ನೌಕರ ಸಂಘದ ಅಧ್ಯಕ್ಷ ಸುಬ್ಬಾರೆಡ್ಡಿ ಸೇರಿದಂತೆ ಗುಡಿಬಂಡೆ ಮತ್ತು ಗೌರಿಬಿದನೂರು ತಾಲ್ಲೂಕಿನ ಪದಾಧಿಕಾರಿಗಳು ಉಪಸ್ಥಿತರಿದ್ದರು.

# ದೊಡ್ಡಬಳ್ಳಾಪುರ ನಗರಸಭೆ ಉಪಾಧ್ಯಕ್ಷರಾಗಿ ಬಂತಿ ವೆಂಕಟೇಶ್ ಅವಿರೋಧ ಆಯ್ಕೆ

ದೊಡ್ಡಬಳ್ಳಾಪುರ

ನಗರಸಭೆ ಉಪಾಧ್ಯಕ್ಷ ಸ್ಥಾನಕ್ಕೆ ಮಲ್ಲೇಶ್ ಅವರು ರಾಜೀನಾಮೆ ನೀಡಿದ ಹಿನ್ನೆಲೆಯಲ್ಲಿ ತೆರವಾದ ಸ್ಥಾನಕ್ಕೆ ಇಂದು ನಡೆದ ಚುನಾವಣೆಯಲ್ಲಿ ಬಂತಿ ವೆಂಕಟೇಶ್ ಅವರು ಅವಿರೋಧವಾಗಿ ನೂತನ ಉಪಾಧ್ಯಕ್ಷರಾಗಿ ಆಯ್ಕೆಯಾಗಿದ್ದಾರೆ.

ಬಿಜೆಪಿ–ಜೆಡಿಎಸ್ ಮೈತ್ರಿ ಕೂಟದ ಅಭ್ಯರ್ಥಿಯಾಗಿ ಬಿಜೆಪಿ ಸದಸ್ಯರಾಗಿರುವ ಬಂತಿ ವೆಂಕಟೇಶ್ ಅವರು ಒಬ್ಬರೇ ನಾಮಪತ್ರ ಸಲ್ಲಿಸಿದ್ದರಿಂದ ಚುನಾವಣಾಧಿಕಾರಿ ಟಿ.ಆರ್. ಮಂಜುನಾಥ ಅವರು ಅವರ ಆಯ್ಕೆಯನ್ನು ಅಧಿಕೃತವಾಗಿ ಘೋಷಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಶಾಸಕ ಧೀರಜ್ ಮುನಿರಾಜು ಅವರು, ಎನ್.ಡಿ.ಎ ಮೈತ್ರಿ ಒಪ್ಪಂದದಂತೆ ಮುಂದಿನ ದಿನಗಳಲ್ಲಿ ಅಧ್ಯಕ್ಷ ಸ್ಥಾನವನ್ನು ಜೆಡಿಎಸ್‌ಗೆ ಬಿಟ್ಟುಕೊಡಲಾಗುವುದು ಎಂದು ತಿಳಿಸಿದರು. ನಗರಸಭೆಯ ಸದಸ್ಯರು ಉಪಾಧ್ಯಕ್ಷರಾಗಿ ಆಯ್ಕೆಯಾಗಿರುವ ಬಂತಿ ವೆಂಕಟೇಶ್ ಅವರು ನಗರದ ಮೂಲಭೂತ ಸೌಕರ್ಯಗಳು ಸೇರಿದಂತೆ ಜ್ವಲಂತ ಸಮಸ್ಯೆಗಳ ಪರಿಹಾರಕ್ಕೆ ಶ್ರಮಿಸಬೇಕು ಎಂದು ಅವರು ಹೇಳಿದರು.

ನೂತನ ಉಪಾಧ್ಯಕ್ಷ ಬಂತಿ ವೆಂಕಟೇಶ್ ಮಾತನಾಡಿ, ನಗರಸಭೆಯ ಸದಸ್ಯರು ಸರ್ವಾನುಮತದಿಂದ



ತಮ್ಮನ್ನು ಅವಿರೋಧವಾಗಿ ಆಯ್ಕೆ ಮಾಡಿರುವುದು ಗೌರವದ ವಿಷಯವಾಗಿದೆ. ಲೋಕಸಭಾ ಸದಸ್ಯ ಡಾ. ಕೆ. ಸುಧಾಕರ್, ಶಾಸಕ ಧೀರಜ್ ಮುನಿರಾಜು ಹಾಗೂ ಜೆಡಿಎಸ್ ತಾಲೂಕು ಘಟಕದ ಅಧ್ಯಕ್ಷ ಹರೀಶ್ ಗೌಡ ಅವರ ಸಹಕಾರದಿಂದ ತಾವು ಈ ಸ್ಥಾನಕ್ಕೆ ಆಯ್ಕೆಯಾಗಿದ್ದೇನೆ ಎಂದು ಹೇಳಿದರು. ಎಲ್ಲ ಸದಸ್ಯರು ತಮಗೆ ತೋರಿದ ನಂಬಿಕೆಯನ್ನು ಉಳಿಸಿಕೊಂಡು ನಗರದ ಅಭಿವೃದ್ಧಿಗೆ ಹೆಚ್ಚಿನ ಆದ್ಯತೆ ನೀಡುವುದಾಗಿ ಅವರು ಭರವಸೆ ನೀಡಿದರು.

ನಗರಸಭೆ ಅಧ್ಯಕ್ಷೆ ಸುಮಿತ್ರಾ ಆನಂದ್, ಮಾಜಿ ಉಪಾಧ್ಯಕ್ಷ ಮಲ್ಲೇಶ್, ಮಾಜಿ ನಗರಸಭಾಧ್ಯಕ್ಷ ತ.ನ. ಪ್ರಭುದೇವ್, ವಿವಿಧ ಪಕ್ಷಗಳ ನಗರಸಭೆ ಸದಸ್ಯರು ಹಾಗೂ ಬಿಜೆಪಿ ಮತ್ತು ಜೆಡಿಎಸ್ ಪಕ್ಷದ ಪ್ರಮುಖರು ನೂತನ ಉಪಾಧ್ಯಕ್ಷರಿಗೆ ಅಭಿನಂದನೆ ಸಲ್ಲಿಸಿದರು.

# ‘ಡಿ.ಕೆ.ಶಿವಕುಮಾರ್ ಮೊದಲು ತಮ್ಮ ಸ್ಥಿತಿಯನ್ನು ನೋಡಿಕೊಳ್ಳಲಿ’

ಕನಕಪುರ

ಜೆಡಿಎಸ್ ಯುವ ಅಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಅವರ ‘ಸ್ಥಿತಿಗತಿ’ ಬಗ್ಗೆ ಮಾತನಾಡುವ ನೈತಿಕತೆ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಇಲ್ಲ ಎಂದು ತಾಲೂಕು ಜೆಡಿಎಸ್ ಅಧ್ಯಕ್ಷ ಬಿ. ನಾಗರಾಜು ಟೀಕಿಸಿದ್ದಾರೆ.

ನಗರದ ಕೋಟೆ ಗಣಪತಿ ದೇವಸ್ಥಾನದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡ ಹಾಗೂ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಅವರು ಈ ಜಿಲ್ಲೆಯನ್ನು ಪ್ರತಿನಿಧಿಸಿದ ನಂತರ ಜಿಲ್ಲೆಯ ಅಭಿವೃದ್ಧಿಯ ಚಿತ್ರಣವೇ ಬದಲಾಗಿದೆ ಎಂದು ಹೇಳಿದರು. ರಾಮನಗರವನ್ನು ಜಿಲ್ಲಾ ಕೇಂದ್ರವನ್ನಾಗಿ ಮಾಡಿದ ಹೆಗ್ಗಳಿಕೆ ಜೆಡಿಎಸ್ ನಾಯಕರದ್ದು ಎಂದು ಅವರು ಹೇಳಿದರು.

ಇಗ್ಗಲೂರು ಮತ್ತು ಹಾರೋಬೆಲೆ ಡ್ಯಾಂ ನಿರ್ಮಾಣದಿಂದ ರೈತರ ಕೃಷಿ ಭೂಮಿಗೆ ನೀರು ಹರಿದು ಬಂದಿದ್ದು ಕೃಷಿ ಕ್ಷೇತ್ರಕ್ಕೆ ಸಹಾಯವಾಗಿದೆ ಎಂದು ಹೇಳಿದರು. ನಿಖಿಲ್ ಕುಮಾರಸ್ವಾಮಿ ಅವರು ಮೂರು ಚುನಾವಣೆಗಳಲ್ಲಿ ಸೋತರೂ ಸಹ ರಾಜಕೀಯದಿಂದ ಹಿಂದೆ ಸರಿಯದೆ ರೈತರು, ಕಾರ್ಮಿಕರು ಮತ್ತು ಜನರ ಪರವಾಗಿ ಹೋರಾಟ ಮುಂದುವರಿಸಿದ್ದಾರೆ ಎಂದು ಅವರು ತಿಳಿಸಿದರು.

ಮೇಕೆದಾಟು ಯೋಜನೆ ಜಾರಿಗೆ ತರುವಲ್ಲಿ ವಿಫಲರಾಗಿದ್ದಾರೆ ಎಂದು ಆರೋಪಿಸಿದರು. ಬಿಡದಿ ಬಳಿ ಉಪನಗರ ನಿರ್ಮಾಣದ ಹೆಸರಿನಲ್ಲಿ ರೈತರ ಫಲವತ್ತಾದ ಭೂಮಿಯನ್ನು ಕಬಳಿಸುವ ಸಂಚು ನಡೆಯುತ್ತಿದೆ ಎಂದು ಅವರು ದೂರಿದರು.

ಈ ವೇಳೆ ತಾಲೂಕು ಜೆಡಿಎಸ್ ಹಿರಿಯ ಮುಖಂಡ ಸಿದ್ದಮರಿಗೌಡ, ಉಪಾಧ್ಯಕ್ಷ ರಾಮಕೃಷ್ಣ, ಕುಮಾರ್, ರಾಜಗೋಪಾಲ್, ಮಹಿಳಾ ಅಧ್ಯಕ್ಷೆ ಪವಿತ್ರ, ಸುವರ್ಣಮ್ಮ ಹಾಗೂ ಅನೇಕ ಮುಖಂಡರು ಮತ್ತು ಕಾರ್ಯಕರ್ತರು ಉಪಸ್ಥಿತರಿದ್ದರು.

# ಮೇ.31ರಂದು ಕೆಜಿಎಫ್‌ನಲ್ಲಿ ಬುದ್ಧ ಹುಣ್ಣಿಮೆ ಕಾರ್ಯಕ್ರಮ

ಕೆಜಿಎಫ್

ಮೇ.31 ರಂದು ಭಾನುವಾರದಂದು ಭಗವಾನ್ ಬುದ್ಧ ಹುಣ್ಣಿಮೆಯನ್ನು ವಿಜೃಂಭಣೆಯಿಂದ ಆಯೋಜಿಸುವಂತೆ ಅಶೋಕ ದಮ್ಮ ಧೂತ ಬುದ್ಧ ಸಂಘದ ವತಿಯಿಂದ ಕೆಜಿಎಫ್‌ನಲ್ಲಿ ಕಾರ್ಯಕ್ರಮ ಆಯೋಜಿಸಲಾಗಿದ್ದು, ಕಾರ್ಯಕ್ರಮದಲ್ಲಿ ಗೃಹ ಸಚಿವ ಡಾ॥ ಜಿ.ಪರಮೇಶ್ವರ್ ಅವರು ಮುಖ್ಯ ಅತಿಥಿಗಳಾಗಿ ಭಾಗವಹಿಸುವರೆಂದು ಬುದ್ಧ ಸಂಘದ ಸಂಚಾಲಕ ಡಾ॥ ಆರ್.ಪ್ರಭುರಾಂ ಅವರು ತಿಳಿಸಿದರು.

ಅಶೋಕ ದಮ್ಮ ಧೂತ ಬುದ್ಧ ಸಂಘದ ವತಿಯಿಂದ ಕೆಜಿಎಫ್‌ನ ಗೌತಮನಗರದ ಹೆಚ್.ಎಂ.ಗಂಗಾಧರಯ್ಯ ಸ್ಮಾರಕ ಆಧ್ಯಾತ್ಮಿಕ ಮಂದಿರದಲ್ಲಿ ಭಗವಾನ್ ಬುದ್ಧರ ಹುಣ್ಣಿಮೆಯನ್ನು ಆಯೋಜಿಸಲಾಗಿದೆ.

ಬೆಂಗಳೂರು ಮಹಾಬೋಧಿ ಸಮಾಜದ ಭಂತೇಜಿ ಧಮ್ಮಚಿತ್ತ ಮಹಾತೀರ, ಕಾರ್ಯದರ್ಶಿ ಭಂತೇಜಿಜೀನವಾಸಂ ಬಿಕ್ಕು, ಅಶೋಕ ದಮ್ಮದತ್ತ ಬೌದ್ಧ ಸಮಾಜದ ಕಾರ್ಯದರ್ಶಿ ಭಂತೇಜಿ ಖೇಮಿಂಡೋ ಅವರುಗಳ ಸಾನ್ನಿಧ್ಯದಲ್ಲಿ ಹಲವಾರು ಭಂತೇಜಿಗಳು, ಉಪಾಸಕರು ಮತ್ತು ಉಪಾಸಿಕರು ಭಕ್ತಿಭಾವದಿಂದ ಕಾರ್ಯಕ್ರಮದಲ್ಲಿ ಭಾಗವಹಿಸಿ ಧಾರ್ಮಿಕ ವಿಧಿವಿಧಾನಗಳನ್ನು ನಡೆಸಿಕೊಡುವರು.

ವೈಶಾಖ ಬುದ್ಧ ಹುಣ್ಣಿಮೆಯ ಆಚರಣೆ ಕಾರ್ಯಕ್ರಮದಲ್ಲಿ ಸಮಸ್ತ ನಾಗರೀಕ ಬಂಧುಗಳು, ಬುದ್ದನ ಅನುಯಾಯಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಕಾರ್ಯಕ್ರಮ ಯಶಸ್ವಿಗೊಳಿಸಲು ಬುದ್ಧ ಸಂಘದ ಉಪಾಸಕ ಡಾ॥ ಆರ್.ಪ್ರಭುರಾಂ ಅವರು ಕೋರಿದ್ದಾರೆ.

ಮೇ.31 ರಂದು ಭಾನುವಾರ ಬೆಳಿಗ್ಗೆ 11 ಗಂಟೆಗೆ ನಡೆಯುವ ಧಮ್ಮ ಪಾದ ಉತ್ಸವ ಹಾಗೂ ಬುದ್ಧ ಜಯಂತಿಯ ಆಚರಣೆ ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಗೃಹ ಸಚಿವ ಡಾ॥ ಜಿ.ಪರಮೇಶ್ವರ್, ಬಂಗಾರಪೇಟೆ ಶಾಸಕ ಎಸ್.ಎನ್. ನಾರಾಯಣಸ್ವಾಮಿ, ಕೆಜಿಎಫ್ ಶಾಸಕ ಡಾ॥ ಎಂ.ರೂಪಕಲಾ ಶಶಿಧರ್, ವಿಧಾನಪರಿಷತ್ ಸದಸ್ಯ ಡಾ॥ ಕೆ.ಶಿವಕುಮಾರ್ ಅವರುಗಳು ಭಾಗವಹಿಸುವರು.

# ಜಾಹ್ನವಿಗೆ ಹಳೆಯ ವಿದ್ಯಾರ್ಥಿ ಸಂಘದಿಂದ ಅಭಿನಂದನೆ



ಮಾಲೂರು

ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ರಾಜ್ಯಕ್ಕೆ 5ನೇ ಸ್ಥಾನ ಪಡೆದ ವಿದ್ಯಾರ್ಥಿನಿ ಜಾಹ್ನವಿ ರವರನ್ನು ರಮಾ ಮಾಧವ ಪ್ರೌಢಶಾಲೆಯ ಹಳೆಯ ವಿದ್ಯಾರ್ಥಿಗಳು ಅಭಿನಂದಿಸಿ ಆರ್ಥಿಕ ಸಹಕಾರ ನೀಡಿ ಗೌರವಿಸಿದರು.

ತಾಲ್ಲೂಕಿನ ತೊರ್ನಹಳ್ಳಿ ಗ್ರಾಮದ ರಮಾ ಮಾಧವ ಪ್ರೌಢಶಾಲೆಯಲ್ಲಿ 2001ನೇ ಸಾಲಿನಲ್ಲಿ ವ್ಯಾಸಂಗ ಮಾಡಿದ ವಿಜಯಲಕ್ಷ್ಮಿ ರವರು ಮಗಳು ಜಾಹ್ನವಿ 2026 ದ್ವಿತಿಯ ಪಿಯುಸಿ ಪರೀಕ್ಷೆಯ ವಾಣಿಜ್ಯ ವಿಭಾಗದಲ್ಲಿ 600–596 ಅಂಕಗಳನ್ನು ಪಡೆದು ರಾಜ್ಯದಲ್ಲಿ 5ನೇ ಸ್ಥಾನ ಪಡೆದಿದ್ದರಿಂದ ವಿದ್ಯಾರ್ಥಿಯನ್ನು ಹಳೆಯ ವಿದ್ಯಾರ್ಥಿಗಳು ಮುಂದಿನ ವಿದ್ಯಾಭ್ಯಾಸಕ್ಕಾಗಿ 54ಸಾವಿರ ರೂಗಳನ್ನು ಪ್ರೋತ್ಸಾಹ ಧನವನ್ನು ನೀಡಿ ಅಭಿನಂದಿಸಿದರು.

ಈ ಸಂದರ್ಭದಲ್ಲಿ ರಮಾ ಮಾದವ ಪ್ರೌಢಶಾಲೆಯ ಹಳೆಯ ವಿದ್ಯಾರ್ಥಿಗಳಾದ ಶಶಿಕಲ, ವಿಕ್ರಂ, ಅಂಜಿ ಕನ್ನಡಿಗ, ಅಶ್ವಥ್, ಮಂಜುನಾಥ್, ಸಂತೋಷ್ ಕುಮಾರ್, ಅಂಬರೀಶ್, ವಿಜಯಲಕ್ಷ್ಮಿ, ಮತ್ತಿರರು ಹಾಜರಿದ್ದರು.

# ಟ್ಯಾಲಿ ತರಬೇತಿಗೆ ಅರ್ಜಿಆಹ್ವಾನ

ತುಮಕೂರು

ರುಡ್‌ಸೆಟ್ ಸಂಸ್ಥೆ ವತಿಯಿಂದ ಜೂನ್ 16 ರಿಂದ ಕಂಪ್ಯೂಟರ್ ಟ್ಯಾಲಿ ಕುರಿತು 38 ದಿನಗಳ ಉಚಿತ ತರಬೇತಿ ನೀಡಲು ಉದ್ದೇಶಿಸಿದ್ದು, ತರಬೇತಿ ಪಡೆಯಲಿಚ್ಚಿಸುವ ಆಸಕ್ತ ಗ್ರಾಮೀಣ ನಿರುದ್ಯೋಗಿ ಯುವಕ/ಯುವತಿಯರಿಂದ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು 18 ರಿಂದ 50 ವರ್ಷ ವಯೋಮಾನದವರಾಗಿದ್ದು, ಕನ್ನಡ ಭಾಷೆ ಓದಲು ಮತ್ತು ಬರೆಯಲು ಬಲ್ಲವರಾಗಿರಬೇಕು. ಗ್ರಾಮೀಣ ಭಾಗದ ಬಿಪಿಎಲ್ ಕಾರ್ಡ್ ಹಾಗೂ ಆಧಾರ್ ಕಾರ್ಡ್ ಹೊಂದಿರಬೇಕು.

ತರಬೇತಿಯು ವಸತಿಯುತವಾಗಿದ್ದು, ತರಬೇತಿ ಅವಧಿಯಲ್ಲಿ ಉಚಿತ ಊಟದ ವ್ಯವಸ್ಥೆ ಕಲ್ಪಿಸಲಾಗುವುದು. ತರಬೇತಿ ಪೂರ್ಣಗೊಂಡ ನಂತರ ಕೇಂದ್ರ ಸರ್ಕಾರದ ಗ್ರಾಮೀಣಾಭಿವೃದ್ಧಿ ಸಚಿವಾಲಯದಿಂದ ಪ್ರಮಾಣಪತ್ರವನ್ನು ವಿತರಿಸಲಾಗುವುದು. ಆಸಕ್ತರು ಹೆಚ್ಚಿನ ಮಾಹಿತಿಗಾಗಿ ರುಡ್‌ಸೆಟ್ ಸಂಸ್ಥೆ, ಅರಿಶಿನಕುಂಟೆ, ನೆಲಮಂಗಲ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ ಅಥವಾ ಮೊಬೈಲ್ ಸಂಖ್ಯೆ: 9380162042, 9481506564, 9113880324ನ್ನು ಸಂಪರ್ಕಿಸಬಹುದಾಗಿದೆ.

# ದಾಖಲಾತಿ ಆಂದೋಲನ 2026–27ಕ್ಕೆ ಚಾಲನೆ

ಬಂಗಾರಪೇಟೆ

ತಾಲ್ಲೂಕಿನ ಕಾಮಸಮುದ್ರ ಗ್ರಾಮದ ಕೆ.ಪಿ.ಎಸ್. ಸರ್ಕಾರಿ ಮಾದರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ 2026–27ನೇ ಸಾಲಿನ ದಾಖಲಾತಿ ಆಂದೋಲನಕ್ಕೆ ವಿಶೇಷ ಚಾಲನೆ ನೀಡಲಾಗಿದೆ. ಶಾಲೆಯಲ್ಲಿ ಎಲ್.ಕೆ.ಜಿ. ಮತ್ತು ಯು.ಕೆ.ಜಿ.ದಿಂದ 8ನೇ ತರಗತಿ ವರೆಗೆ ಕನ್ನಡ ಹಾಗೂ ಇಂಗ್ಲಿಷ್ ಮಾಧ್ಯಮದಲ್ಲಿ ಗುಣಮಟ್ಟದ ಶಿಕ್ಷಣ ನೀಡಲಾಗುತ್ತಿದ್ದು, ಉಚಿತ ದಾಖಲಾತಿ ಪ್ರಕ್ರಿಯೆ ಆರಂಭವಾಗಿದೆ.

ಶಾಲಾ ಶಿಕ್ಷಣ ಇಲಾಖೆ, ಗ್ರಾಮ ಪಂಚಾಯಿತಿ ಸದಸ್ಯರು, ಎಸ್.ಡಿ.ಎಂ.ಸಿ. ಸದಸ್ಯರು, ಶಿಕ್ಷಕರು ಹಾಗೂ ಸಾರ್ವಜನಿಕರು ಒಟ್ಟಾಗಿ ಈ ಅಭಿಯಾನಕ್ಕೆ ಕೈಜೋಡಿಸಿದ್ದಾರೆ. ಗ್ರಾಮದ ವಿವಿಧ ಭಾಗಗಳಲ್ಲಿ ಆಟೋ ಪ್ರಚಾರ, ಗ್ರಾಮ ಪಂಚಾಯಿತಿ ಕಾರ್ಯಾಲಯ, ಸಾರ್ವಜನಿಕ ಸ್ಥಳಗಳು ಹಾಗೂ ಮನೆಮನೆಗೆ ಭೇಟಿ ಮೂಲಕ ದಾಖಲಾತಿ ಕುರಿತು ಜಾಗೃತಿ ಮೂಡಿಸಲಾಗುತ್ತಿದೆ.

ಸಿಎಂ ಸಿದ್ದರಾಮಯ್ಯ, ಶಾಸಕ ಎಸ್.ಎನ್. ನಾರಾಯಣಸ್ವಾಮಿ ಹಾಗೂ ಶಿಕ್ಷಣ ಸಚಿವ ಮಧು ಬಂಗಾರಪ್ಪ ಅವರ ಮಾರ್ಗದರ್ಶನದ ಸಂದೇಶಗಳನ್ನು



ಒಳಗೊಂಡ ಲಿಥೋ ಪ್ರಚಾರ ಫಲಕಗಳ ಮೂಲಕವೂ ಅಭಿಯಾನ ನಡೆಸಲಾಗುತ್ತಿದೆ ಎಂದು ಶಾಲಾ ಮೂಲಗಳು ತಿಳಿಸಿವೆ.

ಶಾಲೆಯಲ್ಲಿ ಮಕ್ಕಳ ಸಮಗ್ರ ಬೆಳವಣಿಗೆಗೆ ಅನುಕೂಲವಾಗುವಂತೆ ಹಲವು ಸೌಲಭ್ಯಗಳನ್ನು ಒದಗಿಸಲಾಗಿದೆ. ಕ್ಷೀರ ಭಾಗ್ಯ, ರಾಗಿ ಮಾಲ್ಟ್, ಮೊಟ್ಟೆ ಹಾಗೂ ಬಾಳೆಹಣ್ಣು ಸೇರಿದಂತೆ ಪೌಷ್ಟಿಕ ಆಹಾರ ಯೋಜನೆ ಜಾರಿಯಲ್ಲಿದ್ದು, ಮಕ್ಕಳಿಗೆ ಉಚಿತ ಸಾರಿಗೆ, ಉಚಿತ ಪಠ್ಯಪುಸ್ತಕಗಳು, ಎರಡು ಜೋಡಿ ಸಮವಸ್ತ್ರ, ಶೂ ಹಾಗೂ ಸಾಕ್ಸ್ ವಿತರಿಸಲಾಗುತ್ತಿದೆ.

ಅರ್ಹ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ, ಎನ್‌ಎಂಎಂಎಸ್ ಸ್ಪರ್ಧಾತ್ಮಕ ಪರೀಕ್ಷಾ ತರಬೇತಿ, ಸ್ಕೌಟ್ ಮತ್ತು ಗೈಡ್ಸ್ ಚಟುವಟಿಕೆಗಳು ಹಾಗೂ ವಿಜ್ಞಾನ ಪ್ರಯೋಗಾಲಯದ ಮೂಲಕ ಪ್ರಾಯೋಗಿಕ ಶಿಕ್ಷಣ ನೀಡಲಾಗುತ್ತಿದೆ. ಅಗಸ್ತ್ಯ ಫೌಂಡೇಶನ್ ಸಹಭಾಗಿತ್ವದಲ್ಲಿ ಗಣಿತ, ವಿಜ್ಞಾನ, ಕಲೆ ಮತ್ತು ಭಾಷಾ ತರಬೇತಿ ನೀಡಲಾಗುತ್ತಿದ್ದು, ಮೇಘಶಾಲಾ ಸಹಯೋಗದಲ್ಲಿ ಡಿಜಿಟಲ್ ಪಾಠಗಳು ಹಾಗೂ ಓಸ್ಕಾಟ್ ಮೂಲಕ ಸ್ಮಾರ್ಟ್ ತರಬೇತಿ ನೀಡಲಾಗುತ್ತಿದೆ.

2025–26ನೇ ಸಾಲಿನಲ್ಲಿ ಶಾಲೆಯ ಎಸ್‌ಡಿಎಂಸಿ ರಾಜ್ಯಮಟ್ಟದ ಉತ್ತಮ ಪ್ರಶಸ್ತಿಯನ್ನು ಪಡೆದಿದ್ದು, ಓಸ್ಯಾಟ್ ಸಂಸ್ಥೆಯ ಸಹಯೋಗದಲ್ಲಿ ನೂತನ ಕಟ್ಟಡಗಳ ನಿರ್ಮಾಣವೂ ಆರಂಭವಾಗಿದೆ. ಶುದ್ಧ ಕುಡಿಯುವ ನೀರಿನ ವ್ಯವಸ್ಥೆ ಹಾಗೂ ವರ್ಷಕ್ಕೆ ಎರಡು ಬಾರಿ ಆರೋಗ್ಯ ತಪಾಸಣೆ ಕೂಡ ಶಾಲೆಯ ಪ್ರಮುಖ ಸೌಲಭ್ಯಗಳಾಗಿವೆ.

ಮೂರು ವರ್ಷ ಐದು ತಿಂಗಳ ವಯಸ್ಸಿನಿಂದಲೇ ಮಕ್ಕಳ ದಾಖಲಾತಿಗೆ ಅವಕಾಶವಿದ್ದು, ಪೋಷಕರು ಸರ್ಕಾರಿ ಶಾಲೆಯ ಸೌಲಭ್ಯಗಳನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದು ಮುಖ್ಯೋಪಾಧ್ಯಾಯರು ಮನವಿ ಮಾಡಿದ್ದಾರೆ.

ಈ ಕುರಿತು ಹೆಚ್ಚಿನ ಮಾಹಿತಿಗಾಗಿ 994538044 / 8095266365 ಸಂಖ್ಯೆಗೆ ಸಂಪರ್ಕಿಸಬಹುದು.

ಈ ಕಾರ್ಯಕ್ರಮದಲ್ಲಿ ಮುಖ್ಯ ಶಿಕ್ಷಕ ಕೆ.ಜಿ. ಶ್ರೀನಿವಾಸ, ರಮೇಶಾಚಾರಿ, ಡಿ.ಎಂ. ನಾರಾಯಣಪ್ಪ, ಎಸ್.ಡಿ.ಎಂ.ಸಿ ಅಧ್ಯಕ್ಷ ಶ್ರೀನಿವಾಸ್, ರಮಾದೇವಿ, ರೂಪ, ಗಾನಶ್ರೀ, ಗೀತಾರಾಣಿ, ಮಂಜುಳ ಹಾಗೂ ಇತರೆ ಶಿಕ್ಷಕರು ಉಪಸ್ಥಿತರಿದ್ದರು.

# ಒತ್ತುವರಿ ತೆರವಿಗೆ ಆಗ್ರಹ

ಶಿಡ್ಲಘಟ್ಟ

ತಾಲೂಕು ದ್ಯಾವಪ್ಪನಗುಡಿಯ ಶ್ರೀಯೋಗಿ ದ್ಯಾವಪ್ಪ ತಾತನ ಎತ್ತುಗಳ ಜಾತ್ರೆಗೆ ಮೀಸಲಾದ ಸರಕಾರಿ ಜಾಗವನ್ನು ಕೆಲವರು ಒತ್ತುವರಿ ಮಾಡಿದ್ದು ಒತ್ತುವರಿಯನ್ನು ತೆರವುಗೊಳಿಸಿ ಸದರಿ ಜಾಗವನ್ನು ಎತ್ತುಗಳ ಜಾತ್ರೆಯ ಪರಿಷೆಗೆ ಮೀಸಲು ಇಡಬೇಕೆಂದು ಶ್ರೀಯೋಗಿ ದ್ಯಾವಪ್ಪ ತಾತನ ಭಕ್ತರು ಆಗ್ರಹಿಸಿದರು.

ತಾಲೂಕು ದ್ಯಾವಪ್ಪನಗುಡಿಯ ಶ್ರೀಯೋಗಿ ದ್ಯಾವಪ್ಪ ತಾತನ ಗುಡಿಯಿದ್ದು ಇಲ್ಲಿನ ಸರಕಾರಿ ಜಾಗದಲ್ಲಿ ವರ್ಷಗಳಿಂದಲೂ ಪ್ರತಿ ವರ್ಷವೂ ದ್ಯಾವಪ್ಪ ತಾತನ ಉತ್ಸವದಂದು ಎತ್ತುಗಳ ಪರಿಷೆ ನಡೆಯುತ್ತಿತ್ತು. ಜಿಲ್ಲೆಯ ವಿವಿದ ಕಡೆಯಿಂದ ನೂರಾರು ಜೋಡಿ ಎತ್ತುಗಳು ಪರಿಷೆಯಲ್ಲಿ ಸೇರುತ್ತಿದ್ದವು ಎತ್ತುಗಳ ಮಾರಾಟ ಮತ್ತು ಖರೀದಿ ಜೋರಾಗಿ ನಡೆಯುತ್ತಿತ್ತು.

ಆದರೆ ಇದೀಗ ಎತ್ತುಗಳ ಪರಿಷೆ ನಡೆಯುತ್ತಿದ್ದ ಸರಕಾರಿ ಜಾಗಕ್ಕೂ ಒತ್ತುವರಿದಾರರ ಕಣ್ಣು ಬಿದ್ದಿದ್ದು ಅಕ್ಕ ಪಕ್ಕದ ಕೆಲವರು ಒತ್ತುವರಿ ಮಾಡಿದ್ದು ಒತ್ತುವರಿಯನ್ನು ತೆರವುಗೊಳಿಸಿ ಸದರಿ ಜಾಗವನ್ನು ಶ್ರೀಯೋಗಿ ದ್ಯಾವಪ್ಪ ತಾತನ ಎತ್ತುಗಳ ಪರಿಷೆಗೆ ಮೀಸಲು ಇಡುವಂತೆ ಯೋಗಿ ದ್ಯಾವಪ್ಪ ತಾತನ ಭಕ್ತರು, ಕೋಟಹಳ್ಳಿ ಗ್ರಾಮಸ್ಥರು ಸುದ್ದಿಗೋಷ್ಠಿ ನಡೆಸಿ ಒತ್ತಾಯಿಸಿದರು.

ಮುಖಂಡ ಕೋಟಹಳ್ಳಿ ಈರೇಗೌಡ ಮಾತನಾಡಿ, ಸರಕಾರಿ ಜಮೀನು ಸರ್ವೆ ನಂಬರ್ 28ರಲ್ಲಿ 12 ಎಕರೆ ಜಮೀನು ಇದ್ದು ಇದರಲ್ಲಿ 3 ಎಕರೆ ಜಮೀನು ಸರಕಾರಿ ತೋಪು ನಿರ್ಮಾಣಕ್ಕೆ ಮೀಸಲಾಗಿದೆ. ಇನ್ನುಳಿದ ಜಮೀನಿನಲ್ಲಿ ಅನೇಕ ವರ್ಷಗಳಿಂದಲೂ ಶ್ರೀಯೋಗಿ ದ್ಯಾವಪ್ಪ ತಾತನ ಜಾತ್ರೆಯಂದು ಎತ್ತುಗಳ ಪರಿಷೆ ನಡೆಯುತ್ತಿತ್ತು.

ಆದರೆ ಈ ಜಾಗವನ್ನು ಕೋಟಹಳ್ಳಿ ಗ್ರಾಮದ ಅಶ್ವತ್ಥಪ್ಪ, ಅನಿಲ್ ಕುಮಾರ್ ಎನ್ನುವವರು ಒತ್ತುವರಿ ಮಾಡಿಕೊಂಡಿದ್ದಾರೆ. ಜತೆಗೆ ಈ ಜಾಗಕ್ಕೆ ಹೋಗುವ ದಾರಿಯನ್ನು ಕೂಡ ಮುಚ್ಚಿದ್ದಾರೆ ಎಂದು ದೂರಿದರು.

ಈ ಬಗ್ಗೆ ಶಾಸಕರು, ಜಿಲ್ಲಾಧಿಕಾರಿಗಳು ಹಾಗೂ ತಹಸೀಲ್ದಾರರಿಗೂ ಮನವಿ ನೀಡಿ ಒತ್ತುವರಿ ಜಾಗ ತೆರವುಗೊಳಿಸಿ ಸದರಿ ಜಾಗವನ್ನು ಎತ್ತುಗಳ ಪರಿಷೆಗೆ ಮೀಸಲು ಇಡುವಂತೆ ಮನವಿ ಮಾಡಿದ್ದೆವು. ತಹಸೀಲ್ದಾರರು ಸ್ಥಳಕ್ಕೆ ಭೇಟಿ ನೀಡಿ ಯಾವುದೆ ಕಾರಣಕ್ಕೂ ಒತ್ತುವರಿ ಮಾಡಬಾರದು ಎಂದು ಒತ್ತುವರಿದಾರರಿಗೆ ಸೂಚಿಸಿದ್ದರು.

ಆದರೆ ಏನೂ ಉಪಯೋಗವಾಗಿಲ್ಲ. ಬದಲಿಗೆ ನಾವು ಮನವಿ ನೀಡಿದ ಮೇಲೆ ಇನ್ನಷ್ಟು ಒತ್ತುವರಿ ಮಾಡಿದ್ದಾರಲ್ಲದೆ ಅಲ್ಲಿ ಇದ್ದ ವಾಡಿಕೆ ರಸ್ತೆಯನ್ನ ಕೂಡ ಮುಚ್ಚಿದ್ದಾರೆ ಎಂದು ಆರೋಪಿಸಿದರು.

ಕೂಡಲೆ ಸಂಬಂಧಿಸಿದ ಅಧಿಕಾರಿಗಳು ಸ್ಥಳ ಪರಿಶೀಲಿಸಿ ಒತ್ತುವರಿಯನ್ನು ತೆರವುಗೊಳಿಸಿ ಸದರಿ ಜಾಗವನ್ನು ಶ್ರೀಯೋಗಿ ದ್ಯಾವಪ್ಪ ತಾತನ ಎತ್ತುಗಳ ಪರಿಷೆಗೆ ಮೀಸಲು ಇಡುವಂತೆ ಆಗ್ರಹಿಸಿದರು.

ದಾರಿ ಮುಚ್ಚಿ ಹಾಕಿದ್ದನ್ನು ಹಾಗೂ ಒತ್ತುವರಿಯನ್ನು ಪ್ರಶ್ನಿಸಿದ್ದಕ್ಕೆ ನಮ್ಮ ಮೇಲೆ ಸೇರಿದಂತೆ ಎಂಟು ಮಂದಿಯ ವಿರುದ್ದ ಜಾತಿ ನಿಂದನೆ ಕೇಸನ್ನು ನೀಡಿದ್ದಾರೆ. ನಾವು ಯಾರೂ ಸ್ಥಳದಲ್ಲೇ ಇರಲಿಲ್ಲ. ಆದರೂ ಉದ್ದೇಶಪೂರ್ವಕವಾಗಿ ನಮ್ಮ ಮೇಲೆ ದೂರು ನೀಡಿ ಇನ್ನಿಲ್ಲದ ಕಿರುಕುಳ ನೀಡುತ್ತಿದ್ದಾರೆ ಎಂದು ದೂರಿದರು. ಚಿಕ್ಕತೇಕಹಳ್ಳಿ ಮಂಜುನಾಥ್, ತಾತಹಳ್ಳಿ ಮಂಜುನಾಥ್, ಚೌಡರೆಡ್ಡಿಹಳ್ಳಿ ರಾಮಕೃಷ್ಣಪ್ಪ, ಅಜ್ಜಕದಿರೇನಹಳ್ಳಿ ಕೇಶವ, ಕೋಟಹಳ್ಳಿ ಗಿರೀಶ್, ಮಧುಸೂಧನ್ ಸುದ್ದಿಗೋಷ್ಠಿಯಲ್ಲಿ ಹಾಜರಿದ್ದರು.

# ಶಿಕ್ಷಣದಿಂದ ಉತ್ತಮ ಸಮಾಜ ನಿರ್ಮಾಣ



ರಾಮನಗರ

ಪೋಷಕರು ತಮ್ಮ ಮಕ್ಕಳಿಗೆ ಉತ್ತಮ ಶಿಕ್ಷಣ ಕೊಡಿಸುವುದರಿಂದ ಉತ್ತಮ ಸಮಾಜದ ನಿರ್ಮಾಣದ ಸಾಧ್ಯ ಎಂದು ರಾಮನಗರ ವಿಧಾನಸಭಾ ಕ್ಷೇತ್ರದ ಶಾಸಕರಾದ ಎಚ್.ಎ. ಇಕ್ಬಾಲ್ ಹುಸೇನ್ ಅವರು ಅಭಿಪ್ರಾಯಪಟ್ಟರು.

ಅವರು ಮೇ. 25ರ ಸೋಮವಾರ ನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಆವರಣದಲ್ಲಿ ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ ಹಾಗೂ ರಾಮನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ವತಿಯಿಂದ 2025–26ನೇ ಶೈಕ್ಷಣಿಕ ಸಾಲಿನ ಸಾಂಸ್ಕೃತಿಕ, ಕ್ರೀಡಾ ಎನ್.ಸಿ.ಸಿ., ಎನ್.ಎಸ್.ಎಸ್, ರೆಡ್‌ಕ್ರಾಸ್, ರೆಡ್‌ರಿಬ್ಬನ್, ರೋವರ್ಸ್ ಮತ್ತು ರೇಂಜರ್ಸ್ ಹಾಗೂ ಇತರೆ ಚಟುವಟಿಕೆಗಳ ಸಮಾರೋಪ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದರು.

ಸಮಾಜದಲ್ಲಿ ಸಹಸ್ರಾರು ಜನ ಹುಟ್ಟುತ್ತಾರೆ, ಸಾಯುತ್ತಾರೆ, ಆದರೆ ಕೆಲವರು ಮಾತ್ರ ಇತಿಹಾಸದಲ್ಲಿ ಅಮರರಾಗಿರುತ್ತಾರೆ. ಒಂದು ಮಗುವಿಗೆ ಚೆನ್ನಾಗಿ ಅಕ್ಷರ ಕಲಿಸಿದರೆ ಅದೇ ನಿಜವಾದ ಪುಣ್ಯ, ವಿದ್ಯಾರ್ಥಿಗಳು ತಮ್ಮ ಶಿಕ್ಷಣದ ವೇಳೆಯಲ್ಲಿ ಮೊಬೈಲ್ ಬಳಕೆಯನ್ನು ಸಾಧ್ಯವಾದಷ್ಟು ಕಡಿಮೆ ಮಾಡಬೇಕು, ಅಗತ್ಯವಿದ್ದಾಗ ಮಾತ್ರ ಮೊಬೈಲ್ ಉಪಯೋಗಿಸಬೇಕು. ನಿಯಮಿತವಾಗಿ ಮಕ್ಕಳು ವ್ಯಾಯಾಮವನ್ನು ಅಭ್ಯಾಸ ಮಾಡಿದರೆ ಮಾನಸಿಕ ಹಾಗೂ ದೈಹಿಕವಾಗಿ ಆರೋಗ್ಯ ಕಾಪಾಡಿಕೊಳ್ಳಬಹುದು ಎಂದರು.

ಇದೇ ಸಂದರ್ಭದಲ್ಲಿ ಎನ್.ಸಿ.ಸಿ., ಎನ್.ಎಸ್.ಎಸ್ ರೆಡ್‌ಕ್ರಾಸ್, ರೆಡ್‌ರಿಬ್ಬನ್, ರೋವರ್ಸ್, ರೇಂಜರ್ಸ್, ಕುಸ್ತಿ ಹಾಗೂ ಹಗ್ಗಜಗ್ಗಾಟದ ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಿ, ಸನ್ಮಾನಿಸಲಾಯಿತು.

ಸಾಹಿತಿ, ರಂಗಕರ್ಮಿ ಹಾಗೂ ಜಾನಪದ ವಿದ್ವಾಂಸರಾದ ಡಾ. ಎಂ. ಬೈರೇಗೌಡ, ಸಮರ್ಥನಂ ಅಂಗವಿಕಲರ ಟ್ರಸ್ಟ್ ಸಂಸ್ಥಾಪಕರಾದ ಡಾ. ಮಹಾಂತೇಶ್ ಘಟಿವಾಳಪ್ಪ ಕಿವಡಸಣ್ಣವರ, ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲರಾದ ಮೇಜರ್ ಡಾ. ಲಕ್ಷ್ಮೀ ಟಿ., ಐ.ಕ್ಯೂ.ಎ.ಸಿ ಸಂಚಾಲಕರಾದ ಡಾ. ದೀಪ. ಆರ್ ಹೆಬ್ಬಾರ್, ದೈಹಿಕ ಶಿಕ್ಷಣ ನಿರ್ದೇಶಕರಾದ ಶಿವಕುಮಾರ್, ರೆಡ್‌ಕ್ರಾಸ್ ಮತ್ತು ರೆಡ್‌ರಿಬ್ಬನ್ ಸಂಚಾಲಕರಾದ ಗಾಯತ್ರಿ ಸೇರಿದಂತೆ ಬೋಧಕ ಸಿಬ್ಬಂದಿ, ಉಪನ್ಯಾಸಕರು, ಬೋಧಕೇತರ ಸಿಬ್ಬಂದಿ, ಕಾಲೇಜು ಅಭಿವೃದ್ಧಿ ಸಮಿತಿ ಅಧ್ಯಕ್ಷರು ಮತ್ತು ಸದಸ್ಯರು ಹಾಗೂ ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

# ಲಿಂಕ್ ವ್ಯಾಪಾರ ಕಡಿವಾಣಕ್ಕೆ ರೈತ ಸಂಘ ಆಗ್ರಹ

ಮುಳಬಾಗಿಲು



ಮುಂಗಾರು ಕೃಷಿ ಚಟುವಟಿಕೆಗೆ ಅಗತ್ಯವಿರುವ ಬಿತ್ತನೆ ಬೀಜ ಹಾಗೂ ರಸಗೊಬ್ಬರಗಳನ್ನು ಸಮರ್ಪಕವಾಗಿ ಪೂರೈಕೆ ಮಾಡಬೇಕು ಹಾಗೂ ಕೃತಕ ಅಭಾವ ಸೃಷ್ಟಿಸಿ ಕಳಪೆ ಬಿತ್ತನೆ ಬೀಜಗಳನ್ನು ವಿತರಣೆ ಮಾಡುವ ದಂಧೆಕೋರರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ರೈತ ಸಂಘವು ಕೃಷಿ ಅಧಿಕಾರಿ ಪ್ರಮೋದ್ ಅವರಿಗೆ ಮನವಿ ಸಲ್ಲಿಸಿ ಆಗ್ರಹಿಸಿದೆ.

ಹಾವೇರಿ ರೈತರ ಮೇಲೆ 18 ವರ್ಷಗಳ ಹಿಂದೆ ರಸಗೊಬ್ಬರ ಹಾಗೂ ಬಿತ್ತನೆ ಬೀಜ ಸಮಸ್ಯೆ ಹಿನ್ನೆಲೆಯಲ್ಲಿ ನಡೆದ ಗೋಲಿಬಾರ್ ಘಟನೆ ಮತ್ತೆ ಮರುಕಳಿಸದಂತೆ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಎಚ್ಚರಿಕೆ ವಹಿಸಬೇಕು ಎಂದು ರೈತ ಸಂಘದ ರಾಜ್ಯ ಉಪಾಧ್ಯಕ್ಷ ಕೆ. ನಾರಾಯಣಗೌಡ ಅವರು ಒತ್ತಾಯಿಸಿದರು. ಮುಂಗಾರು ಕೃಷಿ ಅವಧಿಯಲ್ಲಿ ಅಗತ್ಯ ವಸ್ತುಗಳನ್ನು ಸಮರ್ಪಕವಾಗಿ ವಿತರಣೆ ಮಾಡಿ ರೈತರ ಬದುಕನ್ನು ರಕ್ಷಿಸಬೇಕಾಗಿದೆ ಎಂದು ಅವರು ಹೇಳಿದರು.

ಕಳಪೆ ಬಿತ್ತನೆ ಬೀಜ ಮಾರಾಟಗಾರರ ವಿರುದ್ಧ ತಕ್ಷಣ ಕಠಿಣ ಕ್ರಮ ಕೈಗೊಳ್ಳಬೇಕು. ಸರ್ಕಾರ ಹಾಗೂ ತಾಲೂಕು ಆಡಳಿತ ಕೂಡಲೇ ಎಚ್ಚೆತ್ತುಕೊಂಡು ರೈತರ ಬೇಡಿಕೆಗಳನ್ನು ಈಡೇರಿಸಬೇಕು. ನಕಲಿ ಹಾಗೂ ಕಳಪೆ ಉತ್ಪನ್ನಗಳನ್ನು ಮಾರಾಟ ಮಾಡುವ ವ್ಯಾಪಾರಸ್ಥರ ವಿರುದ್ಧ ಕಾನೂನು ಕ್ರಮ ಜರುಗಿಸಬೇಕು. ಜೊತೆಗೆ ನಿಗದಿತ ಎಂ.ಆರ್.ಪಿ ದರಕ್ಕಿಂತ ಹೆಚ್ಚಿನ ಬೆಲೆಯನ್ನು ವಸೂಲಿ ಮಾಡುವವರ ಮೇಲೂ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಲಾಯಿತು.

ರಾಜ್ಯ ಪ್ರಧಾನ ಕಾರ್ಯದರ್ಶಿ ಪಾರುಕ್ ಪಾಷ ಅವರು ಮಾತನಾಡಿ, ರಸಗೊಬ್ಬರ ಕಂಪನಿಗಳಿಗೆ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಹೆಚ್ಚಿನ ಸಬ್ಸಿಡಿ ನೀಡುತ್ತಿದ್ದರೂ, ಸ್ಥಳೀಯ ಡೀಲರ್‌ಗಳು ರೈತರಿಗೆ ಯೂರಿಯಾ ಖರೀದಿಯ ಜೊತೆಗೆ ಇತರೆ ಉತ್ಪನ್ನಗಳನ್ನು ಕಡ್ಡಾಯವಾಗಿ ಖರೀದಿಸಬೇಕೆಂದು ಒತ್ತಾಯಿಸುವ ಮೂಲಕ ಲಿಂಕ್ ವ್ಯವಸ್ಥೆಯ ಮೂಲಕ ಶೋಷಣೆ ಮಾಡುತ್ತಿದ್ದಾರೆ. ಈ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿ ತಾಲೂಕು ಮಟ್ಟದ ಎಲ್ಲಾ ಕೃಷಿ ಪತ್ತಿನ ಸಹಕಾರ ಸಂಘಗಳು ಹಾಗೂ ಸೊಸೈಟಿಗಳ ಮೂಲಕವೇ ರಸಗೊಬ್ಬರ ಮತ್ತು ಬಿತ್ತನೆ ಬೀಜಗಳನ್ನು ವಿತರಿಸಬೇಕು ಎಂದು ಅವರು ಒತ್ತಾಯಿಸಿದರು.

ಮಧ್ಯಪ್ರಾಚ್ಯದ ಯುದ್ಧ ಪರಿಸ್ಥಿತಿಯನ್ನು ನೆಪ ಮಾಡಿಕೊಂಡು ರಸಗೊಬ್ಬರ ಹಾಗೂ ಬಿತ್ತನೆ ಬೀಜಗಳಲ್ಲಿ ಕೃತಕ ಅಭಾವ ಸೃಷ್ಟಿಸಿ ದುಬಾರಿ ಬೆಲೆಗೆ ಮಾರಾಟ ಮಾಡುವ ವ್ಯಾಪಾರಸ್ಥರ ವಿರುದ್ಧ ಕ್ರಮ ಕೈಗೊಳ್ಳಲು ವಿಶೇಷ ತಂಡ ರಚಿಸಬೇಕು ಎಂದು ರೈತ ಸಂಘ ಮನವಿ ಮಾಡಿದೆ.

ಮನವಿ ಸ್ವೀಕರಿಸಿ ಮಾತನಾಡಿದ ಕೃಷಿ ಅಧಿಕಾರಿ ಪ್ರಮೋದ್ ಅವರು, ಮುಂಗಾರು ಕೃಷಿ ಚಟುವಟಿಕೆಗೆ ಅಗತ್ಯವಿರುವ ಬಿತ್ತನೆ ಬೀಜ ಹಾಗೂ ರಸಗೊಬ್ಬರಗಳ ಕೊರತೆ ಉಂಟಾಗದಂತೆ ಕ್ರಮ ಕೈಗೊಳ್ಳಲಾಗುವುದು. ದುಬಾರಿ ಬೆಲೆಗೆ ಮಾರಾಟ ಮಾಡುವ ಕುರಿತು ದೂರು ಬಂದಲ್ಲಿ ಅಂತಹ ಅಂಗಡಿಗಳ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದರು.

ಈ ಸಂದರ್ಭದಲ್ಲಿ ತಾಲೂಕು ಪ್ರಧಾನ ಕಾರ್ಯದರ್ಶಿ ರಾಜೇಶ್, ಸುನೀಲ್ ಕುಮಾರ್, ಜಿಲ್ಲಾಧ್ಯಕ್ಷ ಈಕಂಬಳ್ಳಿ ಮಂಜುನಾಥ್, ಜುಬೇರ್ ಪಾಷ, ನಾಗರಾಜ್, ಸುಪ್ರಿಂ ಚಲ, ಗಿರೀಶ್ ಪುತ್ತೇರಿ, ರಾಜು ಹೆಬ್ಬಣಿ, ಆನಂದರೆಡ್ಡಿ, ನಂಗಲಿ ನಾಗೇಶ್, ಧರ್ಮ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ‘ಶಿಕ್ಷಣದಿಂದ ಎಲ್ಲವನ್ನೂ ಗಳಿಸಬಹುದು’

ಮಧುಗಿರಿ




ಶಿಕ್ಷಣದಿಂದ ಎಲ್ಲವನ್ನೂ ಗಳಿಸಬಹುದು, ಪರಿಶ್ರಮ ಎಂದಿಗೂ ಸೋಲುವುದಿಲ್ಲ ಹಾಗೂ ಕಷ್ಟ ಶಾಶ್ವತವಲ್ಲ ಎಂದು ತುಮಕೂರಿನ ರಾಮಕೃಷ್ಣ ವಿವೇಕಾನಂದ ಆಶ್ರಮದ ಪೂಜ್ಯ ಶ್ರೀ ಸ್ವಾಮಿ ವೀರೇಶಾನಂದ ಸರಸ್ವತಿ ಮಹಾರಾಜರು ಹೇಳಿದರು.

ತಾಲೂಕಿನ ಕಸಬ ಗುಡಿರೊಪ್ಪದಲ್ಲಿ ಕಾರ್ಡಿಯಲ್ ಇಂಟರ್ ನ್ಯಾಷನಲ್ ಶಾಲೆ ಹಾಗೂ ಕಾರ್ಡಿಯಲ್ ಪ್ರೀ ಯೂನಿವರ್ಸಿಟಿ ಕಾಲೇಜಿನ ಪ್ರಾರಂಭೋತ್ಸವದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಆರ್‌ಎನ್‌ಎಸ್‌ಐಟಿಯಲ್ಲಿ ಉನ್ನತ ಸ್ಥಾನದಲ್ಲಿದ್ದ ಸುಧೀರ್ ಪೈ ಅವರು ಗ್ರಾಮೀಣ ಭಾಗದ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ನೀಡುವ ಉದ್ದೇಶದಿಂದ ಈ ಶಿಕ್ಷಣ ಸಂಸ್ಥೆ ಆರಂಭಿಸಿರುವುದು ಈ ಭಾಗಕ್ಕೆ ವರದಾನವಾಗಿದೆ ಎಂದು ಹೇಳಿದರು.

ಶಿಕ್ಷಣ ಎಂಬುದು ಕೇವಲ ಅಂಕಪಟ್ಟಿಗೆ ಸೀಮಿತವಾಗಬಾರದು; ಅದು ಬದುಕುವ ಶಕ್ತಿಯನ್ನು ನೀಡಬೇಕು. ಅಂಕಪಟ್ಟಿ ಮಾತ್ರ ಮಾನದಂಡವಾದರೆ ಅದು ಹೊಟ್ಟೆಪಾಡಿನ ಶಿಕ್ಷಣವಾಗುತ್ತದೆ. ಆದರೆ ಶಿಕ್ಷಣದ ಜೊತೆಗೆ ಸಂಸ್ಕಾರವನ್ನೂ ಕಲಿಸಿದಾಗ ಮಾತ್ರ ಮಕ್ಕಳು ಸಮಾಜಕ್ಕೆ ಆಸ್ತಿಯಾಗುತ್ತಾರೆ ಎಂದು ಅವರು ಅಭಿಪ್ರಾಯಪಟ್ಟರು.

ಯೌವನದಲ್ಲಿ ಶಿಕ್ಷಣ ಮತ್ತು ಸಂಸ್ಕಾರವನ್ನು ನಿರ್ಲಕ್ಷಿಸಿದರೆ ಭವಿಷ್ಯ ಕತ್ತಲಾಗುತ್ತದೆ. ಹಣ ಸಂಪಾದನೆಗೆ ಮಾತ್ರ ಶಿಕ್ಷಣವಲ್ಲ; ಸರಸ್ವತಿಯನ್ನು ಒಲಿಸಿಕೊಂಡರೆ ಲಕ್ಷ್ಮೀ ತಾನಾಗಿಯೇ ಬರುತ್ತಾಳೆ. ಆ ಹಣವನ್ನು ಸಮಾಜದ ಹಿತಕ್ಕೆ ಬಳಸಬೇಕು ಎಂದು ಅವರು ಹೇಳಿದರು. ಹೆತ್ತವರು ಮಕ್ಕಳಿಗೆ ಸಂಸ್ಕಾರಯುತ ಶಿಕ್ಷಣ ನೀಡುವಲ್ಲಿ ಹೆಚ್ಚಿನ ಗಮನ ಹರಿಸಬೇಕು ಎಂದೂ ಅವರು ಸಲಹೆ ನೀಡಿದರು.

ಗುರು–ಶಿಷ್ಯರ ಸಂಬಂಧವು ಶಾಶ್ವತವಾಗಿರಬೇಕು ಎಂದು ಹೇಳಿದ ಸ್ವಾಮೀಜಿ, ವಿದ್ಯಾವಂತ ವ್ಯಕ್ತಿ ಇತಿಹಾಸವನ್ನು ಬದಲಾಯಿಸಬಲ್ಲನು. ಮಕ್ಕಳಲ್ಲಿ ಚಾರಿತ್ರ್ಯ ನಿರ್ಮಾಣ ಮಾಡುವ ಶಿಕ್ಷಣ ಈ ಸಂಸ್ಥೆಯಲ್ಲಿ ದೊರಕಲಿ ಎಂದು ಹಾರೈಸಿದರು.

ಸಂಸ್ಥೆಯ ಅಧ್ಯಕ್ಷ ಸುಧೀರ್ ಪೈ ಕೆ.ಎಲ್. ಮಾತನಾಡಿ, ಬಡ ಕುಟುಂಬದಲ್ಲಿ ಹುಟ್ಟಿ ಬಸ್ ಕಂಡಕ್ಟರ್ ಆಗಿ ಕೆಲಸ ಮಾಡುತ್ತಲೇ ಶಿಕ್ಷಣ ಪಡೆದು ಇಂದು ಈ ಹಂತಕ್ಕೆ ಬಂದಿದ್ದೇನೆ ಎಂದು ತಮ್ಮ ಜೀವನ ಅನುಭವ ಹಂಚಿಕೊಂಡರು. ಮಧುಗಿರಿಯನ್ನು ಶಿಕ್ಷಣ ಕಾಶಿಯನ್ನಾಗಿ ರೂಪಿಸುವ ಸಂಕಲ್ಪ ಹೊಂದಿದ್ದೇವೆ. ಶಿಕ್ಷಣದ ಜೊತೆಗೆ ಸಂಸ್ಕಾರ ನೀಡುವುದು ನಮ್ಮ ಗುರಿ ಎಂದು ಅವರು ಹೇಳಿದರು.

ಅಂಕಪಟ್ಟಿ ಮುಂದಿನ ಶಿಕ್ಷಣ ಮತ್ತು ಉದ್ಯೋಗಕ್ಕೆ ಶಿಫಾರಸು ಪತ್ರದಂತೆಯೇ ಆದರೆ, ಸಂಸ್ಕಾರ ಮತ್ತು ಮಾನವೀಯತೆ ನಮ್ಮನ್ನು ದೇಶದ ಆಸ್ತಿಯನ್ನಾಗಿ ಮಾಡುತ್ತದೆ ಎಂದು ಅವರು ಅಭಿಪ್ರಾಯಪಟ್ಟರು. ಗ್ರಾಮೀಣ ಮಕ್ಕಳಿಗೆ ಆಧುನಿಕ ಶಿಕ್ಷಣ ನೀಡಲು ವಿವಿಧ ಸಂಸ್ಥೆಗಳ ಸಹಕಾರ ದೊರಕಿದ್ದು, ಮುಂದಿನ ದಿನಗಳಲ್ಲಿ ವಿದ್ಯಾರ್ಥಿವೇತನವೂ ನೀಡಲಾಗುವುದು ಎಂದು ತಿಳಿಸಿದರು.

ಅಕಾಡೆಮಿಕ್ ನಿರ್ದೇಶಕಿ ರಾಧಾ ಸಂಪತ್ ಮಾತನಾಡಿ, ಪೋಷಕರ ಜೊತೆಗಿನ ಸಂಪರ್ಕ, ಅಜ್ಜ–ಅಜ್ಜಿ ಸಹವಾಸ, ಮೊಬೈಲ್ ಬಳಕೆ ನಿಯಂತ್ರಣ ಮತ್ತು ಪುಸ್ತಕ ಓದುವ ಹವ್ಯಾಸವು ಮಕ್ಕಳ ಸಾಧನೆಗೆ ಸಹಾಯಕವಾಗುತ್ತದೆ ಎಂದು ಹೇಳಿದರು.

ಪ್ರಾಂಶುಪಾಲ ಕಿರಣ್ ಸಿದ್ಧ ಮಾತನಾಡಿ, ಗ್ರಾಮೀಣ ಮಕ್ಕಳಿಗೆ ಈ ಸಂಸ್ಥೆ ಉತ್ತಮ ಭವಿಷ್ಯ ನಿರ್ಮಿಸಲಿದೆ. ಮುಂದಿನ ಎರಡು ವರ್ಷಗಳಲ್ಲಿ ಸಂಸ್ಥೆಯ ಸಾಧನೆಯನ್ನು ರಾಜ್ಯಮಟ್ಟದಲ್ಲಿ ಗುರುತಿಸಬಹುದಾದ ಮಟ್ಟಕ್ಕೆ ತಲುಪಿಸಲಾಗುವುದು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಗಿನಿಮೈಂಡ್ಸ್ ಕಂಪನಿಯ ಸಿಇಒ ಶೆನ್‌ಐ ಕಟಪಾಡಿ ರಂಗನಾಥ್, ಸಿಟಿಒ ವೆಂಕಟೇಶ್ ಸಾಗರೆ ನಾಗರಾಜ್, ಸಂಸ್ಥೆಯ ಕಾರ್ಯದರ್ಶಿ ಡಾ. ರಮೇಶ್ ಪ್ರಭು ಸೇರಿದಂತೆ ಹಲವು ಗಣ್ಯರು, ಪೋಷಕರು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.

# ಕಂಪ್ಯೂಟರ್ ಟ್ಯಾಲಿ ಉಚಿತ ತರಬೇತಿಗೆ ಅರ್ಜಿಆಹ್ವಾನ

ರಾಮನಗರ

ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಶಿಕ್ಷಣ ಟ್ರಸ್ಟ್ ಮತ್ತು ಕೆನರಾ ಬ್ಯಾಂಕ್‌ನ ಸಹಯೋಗದಲ್ಲಿ ನಡೆಸುತ್ತಿರುವ ರುಡ್‌ಸೆಟ್ ಸಂಸ್ಥೆಯ ವತಿಯಿಂದ ಕಂಪ್ಯೂಟರ್ ಟ್ಯಾಲಿ ಕುರಿತ 38 ದಿನಗಳ ಉಚಿತ ತರಬೇತಿಯನ್ನು ಜೂನ್ 16 ರಿಂದ ಹಮ್ಮಿಕೊಳ್ಳಲಾಗಿದ್ದು, ಗ್ರಾಮೀಣ ಆಸಕ್ತ ನಿರುದ್ಯೋಗಿ ಯುವಕ–ಯುವತಿಯರು ಅರ್ಜಿ ಸಲ್ಲಿಸಬಹುದಾಗಿದೆ.

ಆಸಕ್ತರು 18 ರಿಂದ 50 ವರ್ಷ ವಯೋಮಾನದವರಾಗಿದ್ದು, ಕನ್ನಡ ಭಾಷೆ ಓದಲು ಮತ್ತು ಬರೆಯಲು ಬಲ್ಲವರಾಗಿರಬೇಕು. ಗ್ರಾಮೀಣ ಭಾಗದ ಬಿಪಿಎಲ್ ಕಾರ್ಡ್ ಹಾಗೂ ಆಧಾರ್ ಕಾರ್ಡ್ ಅನ್ನು ಕಡ್ಡಾಯವಾಗಿ ಹೊಂದಿರಬೇಕು.

ತರಬೇತಿಯ ಅವಧಿಯಲ್ಲಿ ಉಚಿತ ಊಟ ಮತ್ತು ವಸತಿ ನೀಡಲಾಗುವುದು ಹಾಗೂ ತರಬೇತಿಯ ಅವಧಿ ಪೂರ್ಣಗೊಂಡ ನಂತರ ಕೇಂದ್ರ ಸರ್ಕಾರದ ಗ್ರಾಮೀಣಾಭಿವೃದ್ಧಿ ಸಚಿವಾಲಯದಿಂದ ಪ್ರಮಾಣಪತ್ರವನ್ನು ವಿತರಿಸಲಾಗುವುದು.

ಆಸಕ್ತರು ಅರ್ಜಿ ಸಲ್ಲಿಸಲು ಹಾಗೂ ಹೆಚ್ಚಿನ ಮಾಹಿತಿಗೆ ರುಡ್‌ಸೆಟ್ ಸಂಸ್ಥೆ, ಅರಿಶಿನಕುಂಟೆ, ನೆಲಮಂಗಲ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ ಅಥವಾ ಮೊಬೈಲ್ ಸಂಖ್ಯೆ: 9481506564, 9380162042, 9113880324 ಅನ್ನು ಸಂಪರ್ಕಿಸಬಹುದಾಗಿದೆ ಎಂದು ರುಡ್‌ಸೆಟ್ ಸಂಸ್ಥೆಯ ಬೆಂಗಳೂರು ಶಾಖೆಯ ನಿರ್ದೇಶಕರಾದ ರವಿಕುಮಾರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿದ್ಯಾರ್ಥಿಗಳಿಗೆ ಉಚಿತ ಪಠ್ಯಪುಸ್ತಕ ವಿತರಣೆ

ಗುಡಿಬಂಡೆ



2025–26ನೇ ಶೈಕ್ಷಣಿಕ ಸಾಲಿನ ಉಚಿತ ಪಠ್ಯಪುಸ್ತಕಗಳನ್ನು ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿ ಆವರಣದಲ್ಲಿ ಶಿಕ್ಷಣ ಸಂಯೋಜಕರಾದ ನಂಜುಂಡಪ್ಪ ಅವರು ಇತ್ತೀಚೆಗೆ ವಿತರಣೆ ಮಾಡಿದರು.

ಈ ಕಾರ್ಯಕ್ರಮದಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿಯ ಅಧೀಕ್ಷಕಿ ಎಚ್.ಎ. ವಾಣಿ, ಪ್ರೌಢ ವಿಭಾಗದ ಶಿಕ್ಷಣ ಸಂಯೋಜಕ ಶ್ರೀನಿವಾಸ್, ದೈಹಿಕ ಶಿಕ್ಷಣ ಪರಿವೀಕ್ಷಕ ಆಂಜಿನಪ್ಪ ಹಾಗೂ ಕರ್ನಾಟಕ ರಾಜ್ಯ ಸರ್ಕಾರಿ ಎಸ್‌ಸಿ/ಎಸ್‌ಟಿ ನೌಕರರ ಸಮನ್ವಯ ಸಮಿತಿಯ ಅಧ್ಯಕ್ಷರಾದ ವಿ. ಶ್ರೀರಾಮಪ್ಪ. ಯರ್ರಲಕ್ಕೇನಹಳ್ಳಿ ಶಾಲೆಯ ಮುಖ್ಯ ಶಿಕ್ಷಕ ಆಂಜನಪ್ಪ, ಬೀಚಿಗಾನಹಳ್ಳಿ ಶಾಲೆಯ ಮುಖ್ಯ ಶಿಕ್ಷಕ ಗೋಪಾಲಕೃಷ್ಣ ಸಿಂಗ್, ದಪ್ಪರ್ತಿ ಶಾಲೆಯ ಮುಖ್ಯ ಶಿಕ್ಷಕ ಸಿ.ವೈ. ನರಸಿಂಹಪ್ಪ ಹಾಗೂ ಸಹ ಶಿಕ್ಷಕ ರಜನಿ ಕುಮಾರ್ ಸೇರಿದಂತೆ ಇತರರು ಹಾಜರಿದ್ದು, ತಮ್ಮ ಶಾಲೆಗಳಿಗೆ ಉಚಿತ ಪಠ್ಯಪುಸ್ತಕಗಳನ್ನು ಪಡೆದುಕೊಂಡರು.

# ‘ಮಾದಕ ವಸ್ತುಗಳ ಮಾಯಾ ಜಾಲ: ಯುವ ಪೀಳಿಗೆ ಜಾಗೃತರಾಗಿ’




ಬೆಂ.ಗ್ರಾ.ಜಿಲ್ಲೆ

ಯುವ ಪೀಳಿಗೆಯನ್ನು ಗುರಿಯಾಗಿಸಿ ಡ್ರಗ್ ಮಾಫಿಯಾಗಳ ಜಾಲ ವ್ಯಾಪಕವಾಗಿ ಹರಡುತ್ತಿದ್ದು ಯುವ ಸಮೂಹ ಮಾಯಾ ಜಾಲಕ್ಕೆ ಸಿಲುಕದೆ ಜಾಗೃತರಾಗಿರಬೇಕು ಎಂದು ಬೆಂಗಳೂರು ಗ್ರಾಮಾಂತರ ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಶಿವಕುಮಾರ್ ಹೇಳಿದರು.

ಜಿಲ್ಲಾಡಳಿತ ಭವನದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಮಾದಕ ವಸ್ತುಗಳ ಬಳಕೆ, ದುಷ್ಪರಿಣಾಮ, ನಿಷೇಧ ಕುರಿತು ಹಾಸ್ಟೆಲ್ ವಾರ್ಡನ್ ಗಳಿಗೆ ನಡೆದ ತರಬೇತಿ ಕಾರ್ಯಾಗಾರ ಉದ್ಘಾಟಿಸಿ ಅವರು ಮಾತನಾಡಿದರು.

ಇತ್ತೀಚಿನ ದಿನಗಳಲ್ಲಿ ಡ್ರಗ್ಸ್ ಹಾವಳಿ ಜಾಸ್ತಿ ಆಗಿದೆ. ಯುವ ಸಮೂಹ ಈ ದೇಶದ ಆಸ್ತಿ, ಅವರನ್ನು ಗುರಿಯಾಗಿಸಿ ಡ್ರಗ್ಸ್ ಪೆಡ್ಲರ್ ಗಳು ತಮ್ಮ ಮಾಯಾ ಜಾಲ ವ್ಯಾಪಕವಾಗಿ ಹರಡುತ್ತಿದ್ದಾರೆ.

ಎಸ್ಸೆಸ್ಸೆಲ್ಸಿ, ಪಿಯುಸಿ, ಪದವಿ ವಿದ್ಯಾರ್ಥಿಗಳೇ ಅವರ ಟಾರ್ಗೆಟ್. ಮಾದಕ ವಸ್ತುಗಳು ಎಲ್ಲಿಂದ ಸರಬರಾಜು ಆಗುತ್ತವೆ, ಯಾರು, ಹೇಗೆ ಮಾರಾಟ ಮಾಡುತ್ತಾರೆ. ಅದು ಯುವ ಸಮೂಹಕ್ಕೆ ಹೇಗೆ ಸಿಗುತ್ತದೆ ಎಂಬುದು ನಿಗೂಢ. ಈ ಮಾಯಾ ಜಾಲದಲ್ಲಿ ಯುವ ಸಮೂಹ ಸಿಕ್ಕಿಕೊಳ್ಳಬಾರದು. ಮದ್ಯಪಾನ, ಧೂಮಪಾನ, ಮಾದಕ ವಸ್ತುಗಳ ಸೇವನೆ ಅದು ಆರೋಗ್ಯಕ್ಕೆ ಹಾನಿಕಾರಕ ಜೊತೆಗೆ ನೀವು, ನಿಮ್ಮ ಕುಟುಂಬ ಹಾಳಾಗುತ್ತದೆ. ಇದರ ಬಗ್ಗೆ ಜಾಗೃತರಾಗಿರಿ ಎಂದರು.

ಪೋಷಕರು ಕೂಡ ತಮ್ಮ ಮಕ್ಕಳ ಭವಿಷ್ಯದ ಬಗ್ಗೆ ಯೋಚನೆ ಮಾಡಬೇಕು. ಅವರ ಪ್ರತಿದಿನದ ಚಲನವಲನ ಗಮನಿಸಬೇಕು, ನಡವಳಿಕೆಯಲ್ಲಿ ಬದಲಾವಣೆ ಕಂಡು ಬಂದಲ್ಲಿ ವಿಚಾರಿಸಬೇಕು.

ಹಾಸ್ಟೆಲ್, ಶಾಲಾ–ಕಾಲೇಜುಗಳಲ್ಲಿ ವಾರ್ಡನ್ಗಳು, ಶಿಕ್ಷಕರು, ಪ್ರಾಂಶುಪಾಲರು ವಿದ್ಯಾರ್ಥಿಗಳ ಚಲನವಲನ ಗಮನಿಸಿ ಮಾದಕ ವಸ್ತುಗಳ ವ್ಯಸನಿಗಳಾಗಂತೆ ಅವರನ್ನು ಜಾಗೃತಿಗೊಳಿಸಿ ಎಂದರು.

ಮನೋರೋಗ ತಜ್ಞರಾದ ಡಾ. ಗಿರೀಶ್ ಕುಮಾರ್ ಮಾತನಾಡಿ ದೇಶದಲ್ಲಿ ಅಂದಾಜು 14 ಕೋಟಿ ಜನ ಮದ್ಯ ಸೇವನೆ ಮಾಡುತ್ತಾರೆ. ಮದ್ಯಪಾನ, ಧೂಮಪಾನ ಜೊತೆಗೆ ಮಾದಕ ವಸ್ತುಗಳ ಸೇವನೆ ದೇಶಾದ್ಯಂತ ಹರಡಿದೆ. ಗಾಂಜಾ, ಅಫೀಮು, ಹೆರಾಯಿನ್, ಬ್ರೌನ್ ಶುಗರ್, ಕೊಕೇನ್ ಮುಂತಾದ ಅನೇಕ ವಿಧದ ಮಾದಕ ವಸ್ತುಗಳಿವೆ. ಅವುಗಳ ಸೇವನೆ ಮನುಷ್ಯನನ್ನೇ ನಾಶ ಮಾಡುತ್ತದೆ. ಅನೇಕರು ಈ ವ್ಯಸನಕ್ಕೆ ಸಿಲುಕಿ ಜೀವನ ಹಾಳು ಮಾಡಿಕೊಂಡಿದ್ದಾರೆ ಎಂದರು.

ಮಾದಕ ವಸ್ತುಗಳ ಮಾರಾಟ, ಬಳಕೆ ಸೇವನೆ ಇವೆಲ್ಲವೂ ಕೂಡ ಕಾನೂನು ಬಾಹಿರವಾಗಿದ್ದು, ಯಾವುದೇ ವ್ಯಕ್ತಿ ಇಂತಹ ಪ್ರಕರಣದಲ್ಲಿ ಸಿಲುಕಿದರೆ ಆರೋಪಿಗೆ ಜೈಲು ಶಿಕ್ಷೆ ಜೊತೆಗೆ, ದಂಡ ವಿಧಿಸಲಾಗುತ್ತದೆ. ಸಾರ್ವಜನಿಕರು ಕೂಡ ಮಾದಕ ವಸ್ತುಗಳ ಜಾಲ ಪತ್ತೆ ಆದಲ್ಲಿ ಹತ್ತಿರದ ಪೊಲೀಸ್ ಠಾಣೆಗೆ ಮಾಹಿತಿ ನೀಡಬಹುದು ಎಂದು ಹೇಳಿದರು.

ಕಾರ್ಯಾಗಾರದಲ್ಲಿ ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕರಾದ ಪ್ರೇಮ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಜಯಶ್ರೀ ಹೆಂಡೇಗಾರ್, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಅವಿನಾಶ್, ಪರಿಶಿಷ್ಟ ಪಂಗಡಗಳ ಕಲ್ಯಾಣಾಧಿಕಾರಿ ಪಾಂಡುರಂಗ ಸೇರಿದಂತೆ ತಾಲೂಕು ಸಹಾಯಕ ನಿರ್ದೇಶಕರು, ವಸತಿ ಶಾಲೆಗಳ ಪ್ರಾಂಶುಪಾಲರು, ವಾರ್ಡನ್ ಗಳು ಉಪಸ್ಥಿತರಿದ್ದರು.

# ಹುದ್ದೆಗಳ ಭರ್ತಿಗೆ ಅರ್ಜಿ ಆಹ್ವಾನ

ರಾಮನಗರ

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಲ್ಲಿ ಬೆಂಗಳೂರು ದಕ್ಷಿಣ ಜಿಲ್ಲೆಯಲ್ಲಿ ಆಯ್ಕೆಯಾದ ಚನ್ನಪಟ್ಟಣ ಶಿಶು ಅಭಿವೃದ್ಧಿ ಯೋಜನಾ ವ್ಯಾಪ್ತಿಯ ಅಂಗನವಾಡಿ ಕಂ ಕ್ರೀಚ್ ಕೇಂದ್ರಗಳಾದ ಹಲಸಿನಮರದೊಡ್ಡಿ, ಇಂದಿರಾಕಾಟೇಜ್–2, ಅಭಿದ್‌ಪುರ್‌ಮೊಹಲ್ಲಾ, ಟಿಪ್ಪುನಗರ–1, ಬೀಡಿಕಾಲೋನಿ–1 ಹಾಗೂ ಇಸ್ಲಾಂಪುರ ಇಲ್ಲಿ ಕಾರ್ಯನಿರ್ವಹಿಸಲು 6 ಕ್ರೀಚ್ ಕಾರ್ಯಕರ್ತೆಯರು ಮತ್ತು 6 ಕ್ರೀಚ್ ಸಹಾಯಕಿಯರ ಹುದ್ದೆಗಳನ್ನು ಭರ್ತಿ ಮಾಡಲು ಆಫ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ನಿಗಧಿತ ಅರ್ಜಿ ನಮೂನೆಯನ್ನು ಶಿಶು ಅಭಿವೃದ್ಧಿ ಯೋಜನಾ ಕಚೇರಿ, ನಂ, 4823, ಆ1, ಅಪ್ಪಾಜಿ ಕಾಂಪ್ಲೆಕ್ಸ್, ಚಾನಲ್ ರಸ್ತೆ (3ನೇ ಅಡ್ಡರಸ್ತೆ), ವಿವೇಕಾನಂದನಗರ, ಚನ್ನಪಟ್ಟಣ, ಬೆಂಗಳೂರು ದಕ್ಷಿಣ ಜಿಲ್ಲೆ. ಈ ಕಚೇರಿಯಲ್ಲಿ ಪಡೆದು 2026ರ ಜೂನ್ 24ರ ಸಂಜೆ 5.30ರೊಳಗೆ ಅರ್ಜಿ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗೆ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿ, ನಂ 4823 ಆ1, ಅಪ್ಪಾಜಿ ಕಾಂಪ್ಲೆಕ್ಸ್, ಚಾನಲ್ ರಸ್ತೆ (3ನೇ ಅಡ್ಡರಸ್ತೆ), ವಿವೇಕಾನಂದನಗರ, ಚನ್ನಪಟ್ಟಣ, ಬೆಂಗಳೂರು ದಕ್ಷಿಣ ಜಿಲ್ಲೆ–562159ಅನ್ನು ಸಂಪರ್ಕಿಸುವಂತೆ ಚನ್ನಪಟ್ಟಣ ತಾಲ್ಲೂಕಿನ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಉಚಿತ ಮಾದರಿ ಸ್ಪರ್ಧಾತ್ಮಕ ಪರೀಕ್ಷೆ

ತುಮಕೂರು

ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ಹಾಗೂ ಅಭ್ಯಾಸ್ ಅಕಾಡಮಿಯ ಸಹಯೋಗದೊಂದಿಗೆ ಮೇ 28ರಂದು ಬೆಳಿಗ್ಗೆ 10 ಗಂಟೆಗೆ ಅಭ್ಯಾಸ್ ಅಕಾಡಮಿ, 80 ಅಡಿ ರಸ್ತೆ, ಅಧಿತಿ ಆಸ್ಪತ್ರೆ ಎದುರು ಸಿರಾ ಗೇಟ್ ಇಲ್ಲಿ ಉಚಿತ ಮಾದರಿ ಸ್ಪರ್ಧಾತ್ಮಕ ಪರೀಕ್ಷೆ ಹಾಗೂ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಸಂಬಂಧಿಸಿದಂತೆ ಒಂದು ದಿನದ ಉಚಿತ ಕಾರ್ಯಾಗಾರವನ್ನು ಆಯೋಜಿಸಲಾಗಿದೆ.

ಸದರಿ ಕಾರ್ಯಕ್ರಮದಲ್ಲಿ ಹೆಸರಾಂತ ಸಂಪನ್ಮೂಲ ವ್ಯಕ್ತಿಗಳು ಅಭ್ಯರ್ಥಿಗಳಿಗೆ ಉಪನ್ಯಾಸ ನೀಡಲಿದ್ದಾರೆ.

ಜಿಲ್ಲೆಯ ಅಭ್ಯರ್ಥಿಗಳು ಅತಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 0816–2278488, ಮೊ.ಸಂ. 9513136642ನ್ನು ಸಂಪರ್ಕಿಸಬಹುದಾಗಿದೆ.

28/05/2026

# ಭಾರತ ಸಾರಥಿ

BHARATHA SARATHI KANNADA DAILY NEWS PAPER

ಬೆಂಗಳೂರು । ಬೆಂ.ಗ್ರಾಮಾಂತರ । ತುಮಕೂರು । ಮೈಸೂರು । ಮಂಡ್ಯ । ರಾಮನಗರ । ಕೋಲಾರ । ಚಿಕ್ಕಬಳ್ಳಾಪುರ । ಚಿತ್ರದುರ್ಗ । ದಾವಣಗೆರೆ । ಶಿವಮೊಗ್ಗ । ಮಂಗಳೂರು । ಉಡುಪಿ । ಹುಬ್ಬಳ್ಳಿ । ಮಡಿಕೇರಿ । ಚಿಕ್ಕಮಗಳೂರು । ಹಾಸನ । ಬಳ್ಳಾರಿ

ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

## 27ರಂದು ಫ್ರೀಡಂ ಪಾರ್ಕ್‌ನಲ್ಲಿ ಬೃಹತ್ ಪ್ರತಿಭಟನೆ

ತಿಪಟೂರು

ಒಳಮೀಸಲಾತಿ ಜಾರಿಯಲ್ಲಿ ಸರ್ಕಾರ ಮಾದಿಗ ಸಮುದಾಯಕ್ಕೆ ಅನ್ಯಾಯ ಮಾಡಿದೆ ಎಂದು ಆರೋಪಿಸಿ, ನ್ಯಾಯಮೂರ್ತಿ ಎ.ಜೆ. ಸದಾಶಿವ ಆಯೋಗ ಹಾಗೂ ನ್ಯಾಯಮೂರ್ತಿ ನಾಗಮೋಹನ್ ದಾಸ್ ಆಯೋಗಗಳ ವರದಿ ಆಧಾರದಲ್ಲಿ ಸಂಪೂರ್ಣ ಒಳಮೀಸಲಾತಿ ಜಾರಿಗೊಳಿಸಬೇಕೆಂದು ಒತ್ತಾಯಿಸಿ ಮೇ 27ರಂದು ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ ಎಂದು ಬಹುಜನ ಚಳುವಳಿ ರಾಜ್ಯಾಧ್ಯಕ್ಷ ಕನಕೇನಹಳ್ಳಿ ಕೃಷ್ಣಪ್ಪ ತಿಳಿಸಿದ್ದಾರೆ.

ನಗರದ ಪ್ರವಾಸಿ ಮಂದಿರದಲ್ಲಿ ಆಯೋಜಿಸಿದ್ದ ಬಹುಜನ ಚಳುವಳಿ ಕಾರ್ಯಕರ್ತರ ಸಭೆಯನ್ನುದ್ದೇಶಿಸಿ ಮಾತನಾಡಿದ ಅವರು, ಹಲವು ದಶಕಗಳಿಂದ ಮಾದಿಗ ಸಂಘಟನೆಗಳು ಒಳಮೀಸಲಾತಿಗಾಗಿ ಹೋರಾಟ ನಡೆಸುತ್ತಿವೆ. ಆದರೆ ಸರ್ಕಾರ ಓಲೈಕೆ ರಾಜಕಾರಣ ಮಾಡುತ್ತಿದ್ದು, ರಾಜ್ಯದಲ್ಲೇ ಅತಿ ಹೆಚ್ಚು ಜನಸಂಖ್ಯೆ ಹೊಂದಿರುವ ಮಾದಿಗ ಸಮಾಜಕ್ಕೆ ಮೀಸಲಾತಿ ಹಂಚಿಕೆಯಲ್ಲಿ ಅನ್ಯಾಯವಾಗಿದೆ ಎಂದು ಆರೋಪಿಸಿದರು.

ರೋಸ್ಟರ್ ಬಿಂದು ಹಂಚಿಕೆಯಲ್ಲಿ ಅವೈಜ್ಞಾನಿಕವಾಗಿ ಎಸ್‌ಸಿ ಸಾಮಾನ್ಯ ವರ್ಗ ಎಂದು ವಿಂಗಡಣೆ ಮಾಡಲಾಗಿದ್ದು, ಇದರಿಂದ ಮಾದಿಗರ ಹಕ್ಕುಗಳು ಕಸಿದುಕೊಳ್ಳಲ್ಪಟ್ಟಿವೆ ಎಂದು ಅವರು ದೂರಿದರು. ಒಳಮೀಸಲಾತಿ ಹಂಚಿಕೆಯಲ್ಲಿ ಮಾದಿಗ ಸಮುದಾಯಕ್ಕೆ ನ್ಯಾಯಸಮ್ಮತ ಪಾಲು ನೀಡಬೇಕು ಹಾಗೂ ರಾಜಕೀಯ ಕ್ಷೇತ್ರ ಮತ್ತು ಪರಿಶಿಷ್ಟ ಮೀಸಲು ನಿಧಿ ಹಂಚಿಕೆಯಲ್ಲಿ ಒಳಮೀಸಲಾತಿ ಜಾರಿಗೊಳಿಸಬೇಕು ಎಂದು ಅವರು ಆಗ್ರಹಿಸಿದರು.

ಅಲೆಮಾರಿ ಸಮುದಾಯಗಳಿಗೆ ಒಳಮೀಸಲಾತಿಯಲ್ಲಿ ಆಗಿರುವ ಅನ್ಯಾಯವನ್ನು ಸರಿಪಡಿಸಿ ಶೇಕಡಾ 1ರಷ್ಟು ವಿಶೇಷ ಒಳಮೀಸಲಾತಿ ನೀಡಬೇಕು ಎಂದು ಅವರು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಬಹುಜನ ಚಳುವಳಿ ರಾಜ್ಯ ಕಾರ್ಯಾಧ್ಯಕ್ಷ ವಿಜಯ್ ಕುಮಾರ್, ಜಿಲ್ಲಾಧ್ಯಕ್ಷ ರಂಗಸ್ವಾಮಿ, ನೌಕರರ ಸಂಘದ ಅಧ್ಯಕ್ಷ ಎಂ.ಸಿ. ಕಾಂತರಾಜು, ತಾಲೂಕು ಅಧ್ಯಕ್ಷ ಕರೀಕೆರೆ ಉಮೇಶ್, ಶಾಂತರಾಜು ಸೇರಿದಂತೆ ಹಲವು ಪದಾಧಿಕಾರಿಗಳು ಹಾಗೂ ಮುಖಂಡರು ಉಪಸ್ಥಿತರಿದ್ದರು.

## ಧನ ಧಾನ್ಯ ಕೃಷಿ ಯೋಜನೆ ಕಾಮಗಾರಿ ಪರಿಶೀಲನೆ

ತುಮಕೂರು

ಪ್ರಧಾನ ಮಂತ್ರಿ ಧನ ಧಾನ್ಯ ಕೃಷಿ ಯೋಜನೆಯಡಿ ಕೈಗೊಂಡ ಕಾಮಗಾರಿಗಳ ಪರಿಶೀಲನೆಗೆ ಜಿಲ್ಲೆಯ ನೋಡಲ್ ಅಧಿಕಾರಿಗಳು ಹಾಗೂ ಆರ್ಥಿಕ ಇಲಾಖೆಯ ಜಂಟಿ ಕಾರ್ಯದರ್ಶಿ ಡಾ. ಏಕರೂಪ್ ಕೌರ್ ಅವರು ಜಿಲ್ಲೆಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ತುಮಕೂರು ಮತ್ತು ಕೊರಟಗೆರೆ ತಾಲ್ಲೂಕಿನಲ್ಲಿ ಕೃಷಿ ಮತ್ತು ತೋಟಗಾರಿಕಾ ಇಲಾಖೆಯಡಿ ಕೈಗೊಂಡ ಕಾಮಗಾರಿಗಳನ್ನು ಪರಿಶೀಲಿಸಿದರು. ತುಮಕೂರು ತಾಲೂಕಿನ ಮಾಕೇನಹಳ್ಳಿ ಬದು ನಿರ್ಮಾಣ ಕಾಮಗಾರಿ, ಕೌ ಮ್ಯಾಟ್, ಚಾಪ್ ಕಟ್ಟರ್, ಊರ್ಡಿಗೆರೆ ಗ್ರಾಮದ ಚೆಕ್ ಡ್ಯಾಮ್ ವೀಕ್ಷಿಸಿದರು.

ನಂತರ ಕೊರಟಗೆರೆ ತಾಲ್ಲೂಕಿನ ಚಿನ್ನೇನನಹಳ್ಳಿ, ಲಕ್ಕಯ್ಯನಪಾಳ್ಯ, ಪಾತಗನಹಳ್ಳಿಯಲ್ಲಿ ಫಲಾನುಭವಿಗಳನ್ನು ಭೇಟಿ ಮಾಡಿ ಯೋಜನೆಯ ಕುರಿತು ಸಂವಾದ ನಡೆಸಿದರು.



ಈ ವೇಳೆ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಅಶ್ವಿಜ ಬಿ.ವಿ, ಕೃಷಿ ಜಂಟಿ ನಿರ್ದೇಶಕ ಲಕ್ಷ್ಮಣ್ ಸೇರಿದಂತೆ ಜಿಲ್ಲಾ ಮತ್ತು ತಾಲೂಕು ಮಟ್ಟದ ಅಧಿಕಾರಿಗಳು ಭಾಗಿಯಾಗಿದ್ದರು.

ಜಿಲ್ಲಾಧಿಕಾರಿಗಳು ಹಾಗೂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಸಹಭಾಗಿತ್ವದಲ್ಲಿ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಪ್ರಧಾನ ಮಂತ್ರಿ ಧನ ಧಾನ್ಯ ಕೃಷಿ ಯೋಜನೆ ಕುರಿತು ಪ್ರಗತಿ ಪರಿಶೀಲನ ಸಭೆಯನ್ನು ಹಮ್ಮಿಕೊಳ್ಳಲಾಗಿತ್ತು.

ಸಭೆಯಲ್ಲಿ ಮಾತನಾಡಿದ ನೋಡಲ್ ಅಧಿಕಾರಿಗಳು ಹಾಗೂ ಆರ್ಥಿಕ ಇಲಾಖೆಯ ಜಂಟಿ ಕಾರ್ಯದರ್ಶಿಗಳಾದ ಡಾ. ಏಕರೂಪ್ ಕೌರ್, ಜಿಲ್ಲೆಯಲ್ಲಿ ಸಾವಯವ ಕೃಷಿಗೆ ಹೆಚ್ಚು ಒತ್ತು ನೀಡಬೇಕು. ಯೂರಿಯಾ ಸೇರಿದಂತೆ ರಸಗೊಬ್ಬರಗಳ ಬಳಕೆಯನ್ನು ಕಡಿಮೆ ಮಾಡಲು ರೈತರಿಗೆ ಶಿಕ್ಷಣ ಮತ್ತು ಮಾಹಿತಿಯನ್ನು ನೀಡಿ ಅವರ ಮನವೊಲಿಸುವಂತೆ ಅಧಿಕಾರಿಗಳಿಗೆ ತಿಳಿಸಿದರು.

ಜಿಲ್ಲೆಯಲ್ಲಿ ರಾಗಿ ಮತ್ತು ತೆಂಗು ಬೆಳೆಗಾರರು ಹೆಚ್ಚಿದ್ದು ಅವರಿಗೆ ವೈಜ್ಞಾನಿಕ ಕೃಷಿ ಮಾಡಲು ಪ್ರೋತ್ಸಾಹ ನೀಡಬೇಕು ಎಂದರು. ಜಿಲ್ಲೆಯಲ್ಲಿ ಸಿರಿಧಾನ್ಯಗಳನ್ನು ಬೆಳೆಯಲು ಅವಕಾಶವಿದ್ದು, ರೈತರಿಗೆ ಈ ಬೆಳೆಗಳ ಬಗ್ಗೆ ಮಾಹಿತಿ ನೀಡಬೇಕು ಎಂದರು.

ಇದೇ ವೇಳೆ ಮಾತನಾಡಿದ ಜಿಲ್ಲಾಧಿಕಾರಿ ಶುಭ ಕಲ್ಯಾಣ್, ಜಿಲ್ಲೆಯಲ್ಲಿ ಕೃಷಿ ವಿಸ್ತರಣೆಯನ್ನು ಹೆಚ್ಚು ಮಾಡುವಂತೆ ಅಧಿಕಾರಿಗಳಿಗೆ ತಾಕೀತು ಮಾಡಿದರು.

ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಅಶ್ವಿಜ ಬಿ.ವಿ. ಮಾತನಾಡಿ, ಪ್ರತಿ ಅಧಿಕಾರಿಗಳಿಗೆ ಗುರಿ ನೀಡಿ, ರೈತರ ಜೊತೆ ಸಂವಾದ ನಡೆಸಿ, ರೈತರ ಮನವೊಲಿಸಿ, ಕೃಷಿ ವಿಸ್ತರಿಸುವಂತೆ ಕೃಷಿ ಇಲಾಖೆ ಜಂಟಿ ನಿರ್ದೇಶಕರಿಗೆ ಸೂಚಿಸಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯಿತಿ ಉಪ ಕಾರ್ಯದರ್ಶಿ ಈಶ್ವರಪ್ಪ, ಕೃಷಿ ಇಲಾಖೆ ಜಂಟಿ ನಿರ್ದೇಶಕ ಲಕ್ಷ್ಮಣ್, ತೋಟಗಾರಿಕೆ ಇಲಾಖೆ ಜಂಟಿ ನಿರ್ದೇಶಕಿ ಶಾರದಮ್ಮ, ಕೃಷಿ ಇಲಾಖೆಯ ಉಪ ನಿರ್ದೇಶಕರು ಸೇರಿದಂತೆ ಜಿಲ್ಲಾ ಮತ್ತು ತಾಲೂಕು ಮಟ್ಟದ ಅಧಿಕಾರಿಗಳು ಭಾಗಿಯಾಗಿದ್ದರು.



ಕೋಲಾರದ ಬೆಂಗಳೂರು ಉತ್ತರ ವಿಶ್ವವಿದ್ಯಾಲಯ ಕುಲಪತಿ ಪ್ರೊ.ಬಿ.ಕೆ. ರವಿ ವಿವಿ ವ್ಯಾಪ್ತಿಯಲ್ಲಿನ ಬಿಎಡ್ ವಿಯ ಬಿಇಡಿ ಪರೀಕ್ಷಾ ಕೇಂದ್ರಗಳಿಗೆ ಹಠಾತ್ ಭೇಟಿ ನೀಡಿ ಪರಿಶೀಲನೆ ನಡೆಸಿ, ಗೊಂದಲಗಳಿಗೆ ಅವಕಾಶ ನೀಡದಿರಿ, ಸುಗಮ ಪರೀಕ್ಷೆ ಜತೆಗೆ ಪರೀಕ್ಷಾ ಪಾವಿತ್ರ್ಯತೆಗೆ ಧಕ್ಕೆಯಾಗದಂತೆ ಕೆಲಸ ನಿರ್ವಹಿಸಿ ಎಂದು ಸೂಚಿಸಿದರು. ಈ ಸಂದರ್ಭದಲ್ಲಿ ಅವರೊಂದಿಗೆ ಕುಲಸಚಿವರು, ವಿತ್ತಾಧಿಕಾರಿಗಳು ಹಾಜರಿದ್ದರು.

## ಬೆತಮಂಗಲ: ನೂತನ ಪದಾಧಿಕಾರಿಗಳ ಆಯ್ಕೆ

ಬೇತಮಂಗಲ

ತಾಲೂಕಿನ ಬೇತಮಂಗಲ ಪ್ರವಾಸಿ ಮಂದಿರದಲ್ಲಿ ಬಹುಜನ ವಿಚಾರ ವೇದಿಕೆ ಸಂಘಟನೆಯ ನೂತನ ಪದಾಧಿಕಾರಿಗಳ ಆಯ್ಕೆ ಪ್ರಕ್ರಿಯೆ ಜಿಲ್ಲಾಧ್ಯಕ್ಷ ಚಿನ್ನ ಅವರ ನೇತೃತ್ವದಲ್ಲಿ ನಡೆಯಿತು. ಸಭೆಯಲ್ಲಿ ಮಹಾತ್ಮ ಪುಲೆ ಅಕ್ಷರ ಅಕಾಡೆಮಿಯ ಅಧ್ಯಕ್ಷ ಕೆ.ಸಿ. ರಾಜಣ್ಣ ಅವರು ಮಾತನಾಡಿ, ಸಂಘಟನೆಯ ಮೂಲ ಉದ್ದೇಶಗಳು ಹಾಗೂ ಭವಿಷ್ಯದ ಶೈಕ್ಷಣಿಕ ಯೋಜನೆಗಳ ಕುರಿತು ವಿವರಿಸಿದರು.

ನಂತರ ಸಂಘಟನೆಯ ತಾಲೂಕು ಶಾಖೆಯ ವಿವಿಧ ಹುದ್ದೆಗಳಿಗೆ ನೂತನ ಪದಾಧಿಕಾರಿಗಳನ್ನು ಒಮ್ಮತದಿಂದ ಆಯ್ಕೆ ಮಾಡಲಾಗಿದ್ದು, ಅವರಿಗೆ ಅಭಿನಂದನೆ ಸಲ್ಲಿಸಲಾಯಿತು. ನೂತನ ಅಧ್ಯಕ್ಷರಾಗಿ ನ್ಯೂಟನ್ ಪ್ರಶಾಂತ್, ಹಿರಿಯ ಉಪಾಧ್ಯಕ್ಷರಾಗಿ ವಿ. ಹರೀಶ್ ಮತ್ತು ಎನ್. ಮಂಜುನಾಥ್, ಪ್ರಧಾನ ಕಾರ್ಯದರ್ಶಿಯಾಗಿ ವಿ. ಜಯರಾಮ್, ಕಾರ್ಯದರ್ಶಿಗಳಾಗಿ ಎಂ. ಮುನೇಶ್, ಸುಪ್ರೀತ್ ಹಾಗೂ ಎನ್.ಎಸ್. ಸುದೀಪ್, ಖಜಾಂಚಿಯಾಗಿ ಎಂ.ಆರ್. ಸುನಿಲ್ ಕುಮಾರ್ ಅವರನ್ನು ಆಯ್ಕೆ ಮಾಡಲಾಗಿದೆ.

ನಂತರ ಮಾತನಾಡಿದ ಕೆ.ಸಿ. ರಾಜಣ್ಣ ಅವರು, ಸಮಾಜದಲ್ಲಿ ಸಾಮಾಜಿಕ ಮತ್ತು ಆರ್ಥಿಕ ಬದಲಾವಣೆಯನ್ನು ತರುವುದು ಸಂಘಟನೆಯ ಪ್ರಮುಖ ಉದ್ದೇಶವಾಗಿದೆ ಎಂದು ಹೇಳಿದರು. ಸಂವಿಧಾನವನ್ನು ಯಥಾವತ್ತಾಗಿ ಜಾರಿಗೊಳಿಸುವುದೇ ಸಂಘಟನೆಯ ಏಕೈಕ ಅಜೆಂಡಾ ಆಗಿದ್ದು, ಯಾವುದೇ ಗುಪ್ತ ಉದ್ದೇಶಗಳಿಲ್ಲ ಎಂದು ಸ್ಪಷ್ಟಪಡಿಸಿದರು. ಸಂವಿಧಾನದ ಆಶಯಗಳ ಮೂಲಕ ಪ್ರಬುದ್ಧ ಭಾರತ ನಿರ್ಮಾಣ ಮಾಡುವ ಗುರಿಯನ್ನು ಸಂಘಟನೆ ಹೊಂದಿದೆ ಎಂದು ಅವರು ತಿಳಿಸಿದರು.

ಅವರು ಮುಂದುವರಿದು, ಕೋಲಾರದಲ್ಲಿ ಮಹಾತ್ಮ ಪುಲೆ ಅಕ್ಷರ ಅಕಾಡೆಮಿ ಹೆಸರಿನಲ್ಲಿ 50ಥ30 ಅಳತೆಯ ನಾಲ್ಕು ಅಂತಸ್ತಿನ ಬೃಹತ್ ಕಟ್ಟಡ ನಿರ್ಮಾಣ ನಡೆಯುತ್ತಿದೆ ಎಂದು ಮಾಹಿತಿ ನೀಡಿದರು. ಒಳಾಂಗಣ ಕಾಮಗಾರಿ ಬಹುತೇಕ ಪೂರ್ಣಗೊಂಡಿದ್ದು, ಹೊರಾಂಗಣ ಕಾಮಗಾರಿ ಶೀಘ್ರದಲ್ಲೇ ಆರಂಭವಾಗಲಿದೆ. ಈ ಯೋಜನೆಗೆ ಈಗಾಗಲೇ ಸುಮಾರು 40 ಲಕ್ಷ ರೂಪಾಯಿ ವೆಚ್ಚವಾಗಿದ್ದು, ಒಟ್ಟು ಒಂದು ಕೋಟಿ ರೂಪಾಯಿ ವೆಚ್ಚದ ನಿರೀಕ್ಷೆಯಿದೆ ಎಂದು ಹೇಳಿದರು.

ಸಮಾಜದಿಂದ ಶಿಕ್ಷಣ ಪಡೆದು ಆರ್ಥಿಕವಾಗಿ ಸಬಲರಾಗಿರುವವರು ಮತ್ತೆ ಸಮಾಜಕ್ಕೆ ಕೊಡುಗೆ ನೀಡಬೇಕೆಂಬ 'ಸಮಾಜಕ್ಕೆ ಮರಳಿಸುವ' ಆಶಯದಡಿ ಈ ಯೋಜನೆ ರೂಪಿಸಲಾಗಿದೆ ಎಂದು ಅವರು ಹೇಳಿದರು. ಮುಂದಿನ ದಿನಗಳಲ್ಲಿ ಈ ಅಕ್ಷರ ಅಕಾಡೆಮಿಯ ಮೂಲಕ ಪಿಡಿಒ, ಪೊಲೀಸ್ ಸಬ್ ಇನ್ಸ್‌ಪೆಕ್ಟರ್, ಎಸ್‌ಡಿಎ ಹಾಗೂ ಎಫ್‌ಡಿಎ ಹುದ್ದೆಗಳ ಆಕಾಂಕ್ಷಿಗಳಿಗೆ ತರಬೇತಿ ಕೇಂದ್ರ ಆರಂಭಿಸುವ ಯೋಜನೆ ಇದೆ ಎಂದು ಅವರು ವಿವರಿಸಿದರು.

ಈ ಸಂದರ್ಭದಲ್ಲಿ ಅಶ್ವಿನ್, ಅಶೋಕ್, ಅಫ್ರೋಜ್ ಪಾಷಾ, ಪ್ರಸನ್ನ, ಪ್ರಕಾಶ್, ಶ್ರೀಕಾಂತ್, ನಿತಿನ್, ಆನಂದ್, ದೀಕ್ಷಿತ್, ಬಿಸಿಎಂ ಬಾಬು, ಗುರಪ್ಪ, ಜಿ. ವೆಂಕಟೇಶ್, ಕೆ.ಎಂ. ರಾಜು, ವೆಂಕಟರಾಮ್, ಮಂಜುನಾಥ್, ಗಂಗಾಧರಂ, ಎಂ. ಕೇಶವ, ಬಾಬು, ಕೆಜಿಎಫ್ ಗುರಪ್ಪ, ಅಂಬರೀಷ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಎಸ್.ಆರ್.ಜಗದೀಶ್ ಅಧಿಕಾರ ಸ್ವೀಕಾರ



ಬೇತಮಂಗಲ

ಇಲ್ಲಿನ ಪೊಲೀಸ್ ವೃತ್ತದ ನೂತನ ವೃತ್ತ ನಿರೀಕ್ಷಕರಾಗಿ ಎಸ್.ಆರ್. ಜಗದೀಶ್ ಅವರು ಅಧಿಕಾರ ಸ್ವೀಕರಿಸಿದರು.

ಇತ್ತೀಚೆಗೆ ವರ್ಗಾವಣೆಗೊಂಡು ಬೇತಮಂಗಲಕ್ಕೆ ಆಗಮಿಸಿದ ಅವರು ಅಧಿಕೃತವಾಗಿ ತಮ್ಮ ಜವಾಬ್ದಾರಿಯನ್ನು ವಹಿಸಿಕೊಂಡರು. ಅಧಿಕಾರ ಸ್ವೀಕಾರದ ಬಳಿಕ ಬೇತಮಂಗಲ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಬಿ. ನಾಗರಾಜ್ ಹಾಗೂ ಮುಖಂಡರು ಕಚೇರಿಗೆ ಭೇಟಿ ನೀಡಿ ನೂತನ ಅಧಿಕಾರಿಗೆ ಅಭಿನಂದನೆ ಸಲ್ಲಿಸಿದರು.

ಈ ಸಂದರ್ಭದಲ್ಲಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಬಿ. ನಾಗರಾಜ್, ಮುಖಂಡರಾದ ನಲ್ಲೂರು ಶಂಕರ್, ಸುರೇಂದ್ರ ಗೌಡ, ಮಂಜುನಾಥ್ ಸೇರಿದಂತೆ ಹಲವು ಮಂದಿ ಉಪಸ್ಥಿತರಿದ್ದರು.

## 'ಪಾಠಶಾಲೆಯಾಗಬೇಕಾದ ಮಠಗಳು ಪಠ್ಯಶಾಲೆಗಳಾಗುತ್ತಿವೆ'

ತುಮಕೂರು

ಹಿಂದೆ ಮಠಗಳು ವಿದ್ಯಾರ್ಥಿಗಳಿಗೆ ನೈತಿಕ ಶಿಕ್ಷಣ, ಸಂಸ್ಕಾರ, ಧಾರ್ಮಿಕ ಚಿಂತನೆಗಳನ್ನು ಬೋಧಿಸುತ್ತಿದ್ದವು. ಈಗ ಮಠಗಳು ಶಿಕ್ಷಣಸಂಸ್ಥೆಗಳನ್ನು ಹೊಂದಿ ಸರ್ಕಾರ ನಿಗಧಿಪಡಿಸಿರುವ ನೈತಿಕ ಶಿಕ್ಷಣವಿಲ್ಲದ ಸರ್ಕಾರದ ಪಠ್ಯಕ್ರಮ ಬೋಧಿಸುತ್ತಿರುವುದು ದುರಾದೃಷ್ಟಕರ. ಪಾಠಶಾಲೆಗಳಾಗಬೇಕಾದ ಮಠಗಳು ಪಠ್ಯಶಾಲೆಗಳಾಗುತ್ತಿವೆ ಎಂದು ಹಿರೇಮಠದ ಡಾ.ಶಿವಾನಂದ ಶಿವಾಚಾರ್ಯ ಸ್ವಾಮೀಜಿ ವಿಷಾದಿಸಿದರು.

ನಗರದ ಹಿರೇಮಠದ ಕರ್ತೃಶ್ರೀ ಮಲ್ಲಿಕಾರ್ಜುನ ಸ್ವಾಮಿಯ ಪುನರ್ ಪ್ರತಿಷ್ಠಾಪನಾ ಮಹೋತ್ಸವದ ವಾರ್ಷಿಕೋತ್ಸವದ ಅಂಗವಾಗಿ ಭಾನುವಾರ ಮಠದಲ್ಲಿ ಹಮ್ಮಿಕೊಂಡಿದ್ದ ಪೂಜಾ, ಧಾರ್ಮಿಕ ಕಾರ್ಯಕ್ರಮದ ಸಂದರ್ಭದಲ್ಲಿ ಉಪನ್ಯಾಸ ನೀಡಿದ ಸ್ವಾಮೀಜಿ, ಹಿರೇಮಠ ಧಾರ್ಮಿಕತೆಗೆ ಹೆಚ್ಚು ಒತ್ತು ನೀಡುತ್ತದೆ. ನಿಜ ಅರ್ಥದ ಪಾಠಶಾಲೆಯಾಗಿ ಉಪನ್ಯಾಸ, ಭಜನೆ, ಸತ್ಸಂಗ, ಸಂಸ್ಕಾರ ಕಲಿಸುವ ಚಟುವಟಿಕೆಗಳನ್ನು ನಿರಂತರವಾಗಿ ನಡೆಸಿಕೊಂಡು ಬರಲಾಗುತ್ತಿದೆ ಎಂದರು.

ಈ ಹಿಂದೆ ಹಿರೇಮಠವು ಹಾಳುಮಂಟಪವಾಗಿ ಇತಿಹಾಸ ಸಮಾಧಿಯಾಗಿತ್ತು. 1996ರ ತಾವು ಶ್ರೀಮಠದ ಪಟ್ಟಾಧಿಕಾರ ಸ್ವೀಕಾರ ಮಾಡಿದ ನಂತರ ಭಕ್ತರ ಸಹಕಾರದಿಂದ ಹೊಸ ಇತಿಹಾಸ ಸೃಷ್ಟಿ ಮಾಡಿದೆ. ಈ ಮಠಕ್ಕೆ ಈ ಕಟ್ಟಡ ಬಿಟ್ಟರೆ ಬೇರೆ ಆಸ್ತಿ ಇಲ್ಲ. ಆದರೆ ಇಲ್ಲೊಂದು ಶಕ್ತಿ ಇದೆ. ಆ ಶಕ್ತಿ ಎಲ್ಲವನ್ನೂ ನಡೆಸಿಕೊಂಡು ಹೋಗುತ್ತಿದೆ ಎಂದು ಹೇಳಿದರು.

ಮಠದಲ್ಲಿ ಉತ್ತರಾಭಿಮುಖಿಯಾಗಿ ಪ್ರತಿಷ್ಠಾಪನೆಯಾಗಿದ್ದ ಮಲ್ಲಿಕಾರ್ಜುನ ಸ್ವಾಮಿಯನ್ನು ಕಳೆದ ವರ್ಷ ಪೂರ್ವಾಭಿಮುಖಿಯಾಗಿ ಪುನರ್ ಪ್ರತಿಷ್ಠಾಪಿಸಲಾಯಿತು.



ಅದರ ವಾರ್ಷಿಕೋತ್ಸವದ ಅಂಗವಾಗಿ ಇಂದು ಮಲ್ಲಿಕಾರ್ಜುನ ಸ್ವಾಮಿಗೆ ಕುಂಭಾಭಿಷೇಕ, ನವಗ್ರಹ ಪೂಜೆ, ವಿವಿಧ ಹೋಮ, ಹವನ, ಪೂರ್ಣಾಹುತಿ ಹಮ್ಮಿಕೊಳ್ಳಲಾಗಿದೆ. ತೋಟದ ಶನಿಮಹಾತ್ಮ ದೇವಸ್ಥಾನದ ಬಳಿ ಗಂಗಾಪೂಜೆ ನೆರವೇರಿಸಿ, ಹಿರೇಮಠದವರೆಗೆ ಸುಮಂಗಳೆಯರ ಪೂರ್ಣಕುಂಭಾ ಮೆರವಣಿಗೆ ನಡೆಯಿತು. ಇದರ ಅಂಗವಾಗಿ 50 ವರ್ಷ ದಾಂಪತ್ಯ ಬದುಕು ಸಾಗಿಸಿದ ಮೂವರು ಆದರ್ಶ ದಂಪತಿಗಳು, ಸೈನಿಕರು, ಕ್ರೀಡಾಪಟುಗಳು ಹಾಗೂ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡುತ್ತಿರುವವರನ್ನು ಸನ್ಮಾನಿಸಿ ಗೌರವಿಸಲಾಯಿತು ಎಂದು ಡಾ.ಶಿವಾನಂದ ಶಿವಾಚಾರ್ಯ ಸ್ವಾಮೀಜಿ ಹೇಳಿದರು.

ಸುನಿಲ್ ಶಾಸ್ತ್ರಿಗಳು, ಸ್ವರೂಪ್ ಶಾಸ್ತ್ರಿಗಳ ಸಮ್ಮುಖದಲ್ಲಿ ಪೂಜಾ ಕೈಂಕರ್ಯ ನೆರವೇರಿದವು. ವೀರಶೈವ ಸಮಾಜ ಸೇರಿದಂತೆ ವಿವಿಧ ಸಮಾಜದ ಮುಖಂಡರು, ಸಾವಿರಾರು ಭಕ್ತರು ಮಠಕ್ಕೆ ಆಗಮಿಸಿ ಪೂಜಾಕಾರ್ಯಕ್ರಮಗಳಲ್ಲಿ ಪಾಲ್ಗೊಂಡಿದ್ದರು. ಭಕ್ತರಿಗೆ ದಿನವಿಡೀ ದಾಸೋಹ ವ್ಯವಸ್ಥೆ ಮಾಡಲಾಗಿತ್ತು.

## 'ದೇವರಾಗಿ ಅಜರಾಮರರಾದ ಅನೇಕ ಮಂದಿ ಮಹನೀಯರಿದ್ದಾರೆ'

ಶಿಡ್ಲಘಟ್ಟ

ಮಾನವರಾಗಿ ಜನಿಸಿ ತಾವು ಮಾಡುವ ಪುಣ್ಯ ಕೆಲಸ, ಸಾಮಾಜಿಕ ಕಾರ್ಯಗಳ ಮೂಲಕ ದೇವರಾಗುತ್ತಾರೆ ಎನ್ನುವುದಕ್ಕೆ ಶ್ರೀವೀರಣ್ಣಸ್ವಾಮಿ ಹಾಗೂ ಶ್ರೀಕೆಂಪಣ್ಣಸ್ವಾಮಿಗಳು ನಮ್ಮ ಮುಂದೆ ಜೀವಂತ ಉದಾಹರಣೆಯಾಗಿದ್ದಾರೆ ಎಂದು ವಿಜಯಪುರದ ಶ್ರೀಗುರಪ್ಪಸ್ವಾಮಿ ಮಠದ ಪೀಠಾಧ್ಯಕ್ಷ ಶ್ರೀನಂಜಾವಧೂತ ಮಹಾಸ್ವಾಮಿ ತಿಳಿಸಿದರು.

ಹಂಡಿಗನಾಳದ ಶ್ರೀವೀರಣ್ಣಸ್ವಾಮಿ ಶ್ರೀಕೆಂಪಣ್ಣಸ್ವಾಮಿ ದೇವಾಲಯ ಟ್ರಸ್ಟ್‌ನಿಂದ ಹಂಡಿಗನಾಳದ ಕೆವಿ ಭವನದಲ್ಲಿ ಭಾನುವಾರ ಹಮ್ಮಿಕೊಂಡಿದ್ದ 2025–26ನೇ ಸಾಲಿನ 12ನೇ ವರ್ಷದ ಪ್ರತಿಭಾ ಪುರಸ್ಕಾರ ಕಾರ್ಯಕ್ರಮದಲ್ಲಿ ಆಶೀರ್ವಚನ ನೀಡಿ ಮಾತನಾಡಿದರು.

ಸಮಾಜದಲ್ಲಿ ಮನುಷ್ಯರಾಗಿ ಹುಟ್ಟಿ ನಂತರ ಅವರು ತಮ್ಮ ಬದುಕಿನ ಉದ್ದಕ್ಕೂ ಮಾಡುವ ಪುಣ್ಯದ ಕೆಲಸ ಕಾರ್ಯಗಳ ಮೂಲಕ ಜನ ಮಾನಸದಲ್ಲಿ ದೇವರಾಗಿ ಅಜರಾಮರರಾದ ಅನೇಕ ಮಂದಿ ಮಹನೀಯರು ಇದ್ದಾರೆ. ಅವರು ಇದ್ದ ಈ ನೆಲದಲ್ಲಿ ಹುಟ್ಟಿದ ನಾವು ಧನ್ಯರು ಎಂದರು.

ಶ್ರೀವೀರಣ್ಣ ಶ್ರೀಕೆಂಪಣ್ಣ ಅವರು ಈ ನೆಲದ ಸಾಂಸ್ಕೃತಿಕ ಪ್ರತಿನಿಧಿಗಳು, ರಾಯಭಾರಿಗಳು. ಧ್ವನಿ ಇಲ್ಲದವರ ಪರ, ಶೋಷಿತರ ಪರ ನಿಂತವರು ಮತ್ತು ಅವರ ತ್ಯಾಗ ಧಾನ ಧರ್ಮದ ಒಳ್ಳೆಯ ಚಿಂತನೆಗಳಿಂದ ಮತ್ತು ಹಾಗೆಯೆ ಬದುಕಿ ದೇವರ ಸ್ವರೂಪ ಪಡೆದವರು ಎಂದು ಹೇಳಿದರು.

ಈ ಟ್ರಸ್ಟ್‌ನವರು ಮಾಡುತ್ತಿರುವ ಪ್ರತಿಭಾ ಪುರಸ್ಕಾರ ಕಾರ್ಯಕ್ರಮವು ಅನೇಕ ವಿದ್ಯಾರ್ಥಿಗಳಿಗೆ ಪ್ರೇರಣೆದಾಯಕ ಹಾಗೂ ಸ್ಫೂರ್ತಿದಾಯಕವಾಗಿದೆ. ಇಲ್ಲಿ ಪ್ರೇರಣೆ ಪಡೆದು ಸಮಾಜದಲ್ಲಿ ಉನ್ನತ ಸ್ಥಾನ ಮಾನ ಪಡೆದವರು ಮತ್ತೆ ಸಮಾಜಕ್ಕೆ ಏನಾದರೂ ಕೊಡುವ ಮನಸ್ಥಿತಿ ಬೆಳೆಸಿಕೊಳ್ಳಬೇಕೆಂದರು.

ವಿದ್ಯಾರ್ಥಿಗಳು ಮತ್ತು ಯುವ ಜನರ ಮೇಲೆ ಈ ಸಮಾಜ ಬಹಳ ನಿರೀಕ್ಷೆಗಳನ್ನು ಇಟ್ಟುಕೊಂಡಿದೆ. ಆ ಎಲ್ಲ ನಿರೀಕ್ಷೆಗಳನ್ನು ಹುಸಿಗೊಳಿಸದೆ ಎಲ್ಲವನ್ನೂ ಸಾಕಾರಗೊಳಿಸುವ ನಿಟ್ಟಿನಲ್ಲಿ ನಿಮ್ಮ ಬದುಕು ಸಾಗಬೇಕು, ಸಮಾಜಮುಖಿ ನಿಮ್ಮ ಬದುಕು ನಿಮ್ಮನ್ನು ಸಮಾಜ ಸ್ಮರಿಸುವಂತೆ ಮಾಡುತ್ತದೆ ಎಂದು ತಿಳಿಸಿದರು.

## ತಪ್ಪಿದ ರೈಲು ದುರಂತ

ಬೆಂಗಳೂರು

ಬೆಂಗಳೂರಿನಿಂದ ಬಿಹಾರಕ್ಕೆ ತೆರಳುತ್ತಿದ್ದ ರೈಲಿನಲ್ಲಿ ಭಾರೀ ಪ್ರಮಾದವೊಂದು ತಪ್ಪಿದ್ದು, ನೂರಾರು ಜೀವಗಳು ಪ್ರಾಣಾಪಾಯದಿಂದ ಪಾರಾದ ಘಟನೆ ತಡವಾಗಿ ಬೆಳಕಿಗೆ ಬಂದಿದೆ. ತಡರಾತ್ರಿ 1 ಗಂಟೆ ಸುಮಾರಿಗೆ ಬೆಂಗಳೂರಿನ ಎಸ್‌ಎಂವಿಟಿ ನಿಲ್ದಾಣದಿಂದ ಬಿಹಾರಕ್ಕೆ ತೆರಳುತ್ತಿದ್ದ ದಾನಪೂರ್ ವಿಶೇಷ ರೈಲು (ಸಂಖ್ಯೆ 03252) ಚಲಿಸುತ್ತಿದ್ದಾಗಲೇ ಜಾಯಿಂಟ್ ವೀಲ್ ಕಟ್ಟಾಗಿತ್ತು.

ಮೇ 24 ರಂದು ಆಂಧ್ರ ಪ್ರದೇಶದ ವಿಜಯವಾಡ ನಿಲ್ದಾಣ ದಾಟಿ 30 ಕಿಮೀ ದೂರದಲ್ಲಿ 100 ಕಿಮೀ ವೇಗದಲ್ಲಿ ಚಲಿಸುತ್ತಿದ್ದಾಗ ಜಾಯಿಂಟ್ ವೀಲ್ ಕಟ್ಟಾಗಿ ಪ್ರಯಾಣಿಕರಿದ್ದ ಬೋಗಿ ಹಾಗೂ ಇಂಜಿನ್ ಇದ್ದ ಬೋಗಿ ಬೇರ್ಪಟ್ಟಿತ್ತು.

ಅದೃಷ್ಟವಶಾತ್ ರೈಲು ನಿಯಂತ್ರಣ ಕಳೆದುಕೊಳ್ಳದ ಕಾರಣ ಹಾಗೂ ಲೋಕೋಪೈಲೆಟ್‌ನ ಸಮಯ ಪ್ರಜ್ಞೆ ಮುಂದಾಗುವ ಅನಾಹುತ ತಪ್ಪಿಸಿತ್ತು. ಘಟನೆ ಬಳಿಕ 4 ಘಂಟೆಗಳ ಕಾಲ ರೈಲು ಸಂಚಾರ ವಿಳಂಬಗೊಂಡಿತ್ತು.

ಯಾವುದೇ ಪ್ರಯಾಣಿಕರಿಗೆ ಗಾಯಗಳಾಗಿಲ್ಲ. ಆದ್ರೆ ಈ ಬಗ್ಗೆ ಈವರೆಗೆ ಬೆಂಗಳೂರು ವಿಭಾಗದ ರೈಲ್ವೆ ಅಧಿಕಾರಿಗಳು ಘಟನೆ ಬಗ್ಗೆ ಯಾವುದೇ ಮಾಹಿತಿ ನೀಡಿಲ್ಲ.

## 'ಅನುವಾದಕ್ಕೆ ತಂತ್ರಜ್ಞಾನ ಪೂರಕ, ಪರ್ಯಾಯವಲ್ಲ'

ತುಮಕೂರು

ನಾವು ಕೃತಕ ಬುದ್ಧಿಮತ್ತೆ ಮತ್ತು ಯಂತ್ರಾನುವಾದದ ಕಾಲಘಟ್ಟದಲ್ಲಿದ್ದೇವೆ. ತಂತ್ರಜ್ಞಾನವನ್ನು ಬಳಸಿ ಅನುವಾದ ಮಾಡಿದರೂ ಅದನ್ನು ಪರಿಷ್ಕರಿಸುವುದು ಅತ್ಯಗತ್ಯ. ಅನುವಾದಕ್ಕೆ ತಂತ್ರಜ್ಞಾನ ಪೂರಕವೇ ಹೊರತು ಪರ್ಯಾಯವಲ್ಲ ಎಂದು ಹಿರಿಯ ವಿದ್ವಾಂಸ ಡಾ. ಬಿ. ಜನಾರ್ದನ ಭಟ್ ಅಭಿಪ್ರಾಯಪಟ್ಟರು.

ರಾಷ್ಟ್ರೀಯ ಅನುವಾದ ಮಿಷನ್, ಭಾರತೀಯ ಭಾಷೆಗಳ ಸಂಸ್ಥಾನ ಹಾಗೂ ತುಮಕೂರು ವಿಶ್ವವಿದ್ಯಾನಿಲಯದ ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗ ಜಂಟಿಯಾಗಿ ಹಮ್ಮಿಕೊಂಡಿದ್ದ ಮೂರು ದಿನಗಳ ಅನುವಾದ ಕೌಶಲ್ಯಾಭಿವೃದ್ಧಿ ಕಾರ್ಯಾಗಾರವನ್ನು ಡಾ. ಪಿ. ಸದಾನಂದ ಮಯ್ಯ ಕಟ್ಟಡದ ಸಭಾಂಗಣದಲ್ಲಿ ಸೋಮವಾರ ಉದ್ಘಾಟಿಸಿ ಮಾತನಾಡಿದರು.

ತಂತ್ರಜ್ಞಾನದ ಬೆಳವಣಿಗೆಯಿಂದಾಗಿ ಮಾನವ ಅನುವಾದಕರಿಗೆ ಬೇಡಿಕೆ ಅಥವಾ ಕೆಲಸ ಇಲ್ಲದೇ ಹೋಗಬಹುದು ಎಂಬ



ಮಾತುಗಳು ಕೇಳಿಬರುತ್ತಿವೆಯಾದರೂ, ಅಂಕಿ–ಅಂಶಗಳ ಪ್ರಕಾರ ಅನುವಾದಕರಿಗೆ ಉದ್ಯೋಗಾವಕಾಶಗಳು ಹೆಚ್ಚಾಗಿವೆ ಎಂದರು.

ಅನುವಾದ ಕೇವಲ ಭಾಷಾ ಪಂಡಿತರಿಗೆ ಮಾತ್ರ ಸೀಮಿತವಾದುದಲ್ಲ. ಪ್ರಸ್ತುತ ದಿನಗಳಲ್ಲಿ ಎಲ್ಲ ವಲಯಗಳಲ್ಲೂ ಅನುವಾದದ ಅಗತ್ಯವಿರುವುದರಿಂದ, ಆಯಾ ಕ್ಷೇತ್ರಗಳ ಪರಿಣಿತರು ಅನುವಾದ ಪ್ರಕ್ರಿಯೆಯಲ್ಲಿ ತೊಡಗಿಸಿಕೊಳ್ಳುವುದು ಮುಖ್ಯವಾಗಿದೆ. ಆಕರ ಪಠ್ಯ ಮತ್ತು ಸ್ವೀಕಾರ ಪಠ್ಯಗಳ ಸೂಕ್ತ ಬಳಕೆಯನ್ನು ವಿದ್ಯಾರ್ಥಿಗಳಿಗೆ ಮನವರಿಕೆ ಮಾಡಿಕೊಡುವುದೇ ಈ ಕಾರ್ಯಾಗಾರದ ಪ್ರಮುಖ ಉದ್ದೇಶ ಎಂದರು.

ಅನುವಾದ ಮಾಡುವಾಗ ಪಾರಿಭಾಷಿಕ ಮತ್ತು ಸ್ಥಳೀಯ ಭಾಷಾ ಸೊಗಡನ್ನು ಗಮನದಲ್ಲಿಟ್ಟುಕೊಳ್ಳಬೇಕು ಹಾಗೂ ಕ್ಲಿಷ್ಟ ಪದಗಳಿಗೆ ಸೂಕ್ತ ವಿವರಣೆ ನೀಡಬೇಕಾಗುತ್ತದೆ. ನಮ್ಮ ಭಾಷೆಯಿಂದ ಮತ್ತೊಂದು ಭಾಷೆಗೆ ಇದ್ದದ್ದನ್ನು ಇದ್ದ ಹಾಗೆಯೇ ತರ್ಜುಮೆ ಮಾಡುವುದು ಕಷ್ಟಸಾಧ್ಯ, ಆದರೆ ಅನ್ಯಭಾಷೆಯಿಂದ ನಮ್ಮ ಭಾಷೆಗೆ ಅದೇ ರೂಪದಲ್ಲಿ ತರುವುದು ಸುಲಭವಾಗುತ್ತದೆ ಎಂದರು.

ತುಮಕೂರು ವಿವಿ ಕಲಾ ನಿಕಾಯದ ಡೀನ್ ಪ್ರೊ. ಕೆ. ಜಿ. ಪರಶುರಾಮ ಮಾತನಾಡಿ, ಅನುವಾದ ಎಂದರೆ ಕೇವಲ ಪದದಿಂದ ಪದಕ್ಕೆ ಭಾಷೆ ಬದಲಾಯಿಸುವುದಲ್ಲ. ಅದರಲ್ಲಿನ ಭಾವನೆಗಳನ್ನು ಸರಿಯಾಗಿ ಅರ್ಥೈಸಿಕೊಂಡು ಅದಕ್ಕೆ ಹೊಸ ರೂಪವನ್ನು ನೀಡುವುದಾಗಿದೆ. ತಂತ್ರಜ್ಞಾನದ ಮೂಲಕ ನಾವು ಪಾರಿಭಾಷಿಕ ಪದಗಳನ್ನು ಬಳಸಿಕೊಳ್ಳಬಹುದೇ ಹೊರತು, ಕೇವಲ ತಂತ್ರಜ್ಞಾನವೇ ಪಾರಿಭಾಷಿಕ ಪದಗಳನ್ನು ಸೃಷ್ಟಿಸಲು ಸಾಧ್ಯವಿಲ್ಲ ಎಂದರು.

ಅಧ್ಯಕ್ಷತೆ ವಹಿಸಿದ್ದ ಪರೀಕ್ಷಾಂಗ ಕುಲಸಚಿವ ಪ್ರೊ. ಮೋಹನ ಹೆಚ್. ಎಸ್. ಮಾತನಾಡಿ, ಭಾಷೆ ಎಂಬುದು ಕೇವಲ ಸಂವಹನದ ವಾಹಕವಲ್ಲ, ಅದೊಂದು ಸಾಂಸ್ಕೃತಿಕ ಜಗತ್ತು. ಅದನ್ನು ಓದಿ ಆಳವಾಗಿ ಅರ್ಥೈಸಿಕೊಳ್ಳಲು ಅನುವಾದದ ನೆರವು ಬೇಕೇ ಬೇಕು. ವಿದ್ಯಾರ್ಥಿಗಳಲ್ಲಿ ಓದುವ ಹವ್ಯಾಸ ಹೆಚ್ಚಾಗಬೇಕು ಮತ್ತು ಸಾಹಿತ್ಯದ ಬಗೆಗಿನ ಆಲೋಚನಾ ಕ್ರಮಗಳು ಬದಲಾಗಬೇಕು. ಜ್ಞಾನ ಎಂಬುದು ಒಂದೇ ಕಡೆ ಸ್ಥಾಪಿತವಾಗಿರಬಾರದು, ಅದು ಸದಾ ಹಂಚಲ್ಪಡಬೇಕು ಎಂದರು.

ರಾಷ್ಟ್ರೀಯ ಅನುವಾದ ಮಿಷನ್ ಅಧಿಕಾರಿ ಡಾ. ತಾರೀಖ್ ಖಾನ್ ಅವರು ವಿಡಿಯೋ ಕಾನ್ಫರೆನ್ಸ್ ಮೂಲಕ ಪ್ರಾಸ್ತಾವಿಕ ನುಡಿಗಳನ್ನಾಡಿದರು. ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗದ ಸಂಯೋಜಕ ಡಾ. ಸಿಬಂತಿ ಪದ್ಮನಾಭ ಕೆ. ವಿ. ಸ್ವಾಗತಿಸಿದರು. ಎನ್‌ಟಿಎಂ ಸಂಪನ್ಮೂಲ ವ್ಯಕ್ತಿ ಡಾ. ಛಾಯಾದೇವಿ ವಂದಿಸಿದರು.

ಹಿರಿಯ ವಿದ್ವಾಂಸರಾದ ಡಾ. ಎಸ್. ಪಿ. ಪದ್ಮಪ್ರಸಾದ್, ಡಾ. ಮಂಗಳಾಗೌರಿ ಎಂ, ಹಾಗೂ ಪ್ರಭಾಸ್ ಪಂಡಿತ್ ಟಿ.ಎಸ್. ಮೊದಲನೇ ದಿನದ ಸಂಪನ್ಮೂಲ ವ್ಯಕ್ತಿಗಳಾಗಿ ಭಾಗವಹಿಸಿದರು. ವಿವಿಧ ಸಂಪನ್ಮೂಲ ವ್ಯಕ್ತಿಗಳು ಮುಂದಿನ ಎರಡು ದಿನ ಗೋಷ್ಠಿಗಳನ್ನು ನಡೆಸಿಕೊಡಲಿದ್ದಾರೆ.

Printed by gandasi sadananda swamy, published by gandasi sadanandaswamy, owned by gandasi sadananda swamy. Printed at LAVANYA MUDRANA No. 79, TR mill, compound, 5th main 9th corss, Chamarajpet Bangalore-560018, published at No.531, prakruthi nilaya, kalikanagar, Andrahalli, Vishwaneedam Post, Bangalore-560091. Editor: Gandasi sadanandaswamy